ಸಂಪುಟ: 04 ಸಂಚಿಕೆ: 78 ಪುಟಗಳು: 08 ಶನಿವಾರ 01 ಜೂನ್ 2024
www.udayavahini.in | epaper.udayavahini.in | Udayavahini news | Udayavahini news | Udayavahini news youtube | udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 | +91 8035841833 | ₹5

**ಮುಂಜಾನೆ ಮಾತು**

ನಮ್ಮ ಜೀವನವನ್ನೇ ಬದಲಾಯಿಸಬಲ್ಲ ಎಲ್ಲಾ ಸಾಧ್ಯತೆಗಳನ್ನು ಹೊಂದಿದ ಒಬ್ಬ ವ್ಯಕ್ತಿಯನ್ನು ಕಾಣಲು ದೂರ ಹೋಗಬೇಕಿಲ್ಲ. ಕನ್ನಡಿ ಮುಂದೆ ನಿಂತರೆ ಸಾಕು.

ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮಹಿಳೆ ಅಪಹರಣ ಕೇಸಲ್ಲಿ ಭವಾನಿ ಸಲ್ಲಿಸಿದ್ದ ಜಾಮೀನು ಅರ್ಜಿ ವಜಾ

• ಉದಯವಾಹಿನಿ, ಬೆಂಗಳೂರು

ಮೈಸೂರಿನ ಕೆ ಆರ್ ನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದಂತ ಮಹಿಳೆ ಅಪಹರಣ ಪ್ರಕರಣ ಸಂಬಂಧ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಭವಾನಿ ರೇವಣ್ಣ ಅವರು ಸಲ್ಲಿಸಿದ್ದಂತ ಜಾಮೀನು ಅರ್ಜಿಯನ್ನು.ಈ ಪ್ರಕರಣ ಸಂಬಂಧ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಭವಾನಿ ರೇವಣ್ಣ ಅವರು ಬೆಂಗಳೂರಿನ ಜನಪ್ರತಿನಿಧಿಗಳ ನ್ಯಾಯಾಲಯಕ್ಕೆ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯ ವಿಚಾರಣೆ ನಡೆಸಿದಂತ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ನ್ಯಾಯಮೂರ್ತಿ ಗಜಾನನ ಭಟ್ ಅವರು, ಭವಾನಿ ರೇವಣ್ಣ ಅವರ ಜಾಮೀನು ಅರ್ಜಿಯನ್ನು ವಜಾಗೊಳಿಸಿದರು. ಹೀಗಾಗಿ ಭವಾನಿ ರೇವಣ್ಣಗೆ ಮಹಿಳೆ ಅಪಹರಣ ಪ್ರಕರಣದಲ್ಲಿ ಬಂಧನದ ಭೀತಿ ಎದುರಾದಂತೆ ಆಗಿದೆ.

## ಫಲಿತಾಂಶಕ್ಕೆ ಕೊಳ್ಳಿ ಇಟ್ಟ ಸರ್ಕಾರ ಉರ್ದು ಕಾಲೇಜು ಆರಂಭಿಸಲು ಮುಂದು

• ಉದಯವಾಹಿನಿ, ಬೆಂಗಳೂರು

ಉರ್ದು ಪದವಿ ಪೂರ್ವ ಕಲೇಜು ಆರಂಭಿಸಲು ಮುಂದೆ ಬಂದಿರುವ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ವಾಗ್ದಾಳಿ ನಡೆಸಿದೆ. ಕನ್ನಡ ಓ ದಲು ಬರೆಯಲು ಬಾರದ ಅನಕ್ಷರಸ್ಥ ಶಿಕ್ಷಣ ಸಚಿವ ಮಧು ಬಂ ಗಾರಪ್ಪ ಅವರಿಗೆ ನಿಜಕ್ಕೂ ತಲೆ ಕಟ್ಟಿದೆ. ರಾಷ್ಟ್ರೀಯ ಶಿಕ್ಷಣ ನೀತಿ ಯನ್ನು ರದ್ದುಗೊಳಿಸಿ ಮಕ್ಕಳ ಭವಿಷ್ಯಕ್ಕೆ ಬೆಂಕಿ ಇಟ್ಟ ಸಚಿವರು, ಇದೀಗ ಉರ್ದು ಶಿಕ್ಷಣದ ಮೂಲಕ ಮುಸ್ಲಿಮರನ್ನು ಮತ್ತೆ ಹಳೆ ತಲೆಮಾರಿಗೆ ನೂಕಲಾಗುತ್ತಿದೆ ಎಂದು ಕಿಡಿಕಾರಿದೆ.

ಕರ್ನಾಟಕದಲ್ಲಿ ಕನ್ನಡವನ್ನು ಕೊಲೆ ಮಾಡಿ ಪಾರ್ಸಿಯನ್ನು ಆಡಳಿತ ಭಾಷೆಯನ್ನಾಗಿ ಮಾಡಿದ್ದ ಟಿಪ್ಪುವಿನಂತೆ ಸಿದ್ದರಾಮಯ್ಯ ಸರ್ಕಾರ, ಇದೀಗ ಸರ್ಕಾರಿ ಉರ್ದು ಪದವಿ ಪೂರ್ವ ಕಾಲೇಜು ಆರಂಭಿಸಲು ಮುಂದಾಗಿದೆ. ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರದ್ದು ಮಾಡಿ ರಾಜ್ಯ ಶಿಕ್ಷಣ ನೀತಿಯನ್ನು ಜಾರಿ ಮಾಡುವ ಮೂಲಕ ಕಾಂಗ್ರೆಸ್ ಸರ್ಕಾರ ಫಲಿತಾಂಶಕ್ಕೆ ಕೊಳ್ಳಿ ಇಟ್ಟಿತ್ತು. ಇದೀಗ ಕಾಲೇಜಿಗೆ ದಾಖಲಾಗುವ ವಿದ್ಯಾರ್ಥಿಗಳ ಪ್ರಮಾಣ ಸಂಪೂರ್ಣ ಕುಸಿದಿರುವಾಗ, ಉರ್ದು ಕಾಲೇಜು ಆರಂಭಿಸುತ್ತಿದೆ. ನೆಲ, ಜಲ, ಭಾಷೆಯ ವಿಚಾರದಲ್ಲಿ ಕರ್ನಾಟಕದ ಅಸ್ಮಿತೆಯನ್ನು ಕೊನೆಗಾಣಿಸುವ ಗುರಿಯನ್ನು ಕಾಂಗ್ರೆಸ್ ಸರ್ಕಾರ ಹಾಕಿಕೊಂಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿದೆ.

## ಹಳೆ ವಿದ್ಯಾರ್ಥಿಗಳ ಸಂಘ, ವಾಟ್ಸಾಪ್ ಗ್ರೂಪ್ ರಚಿಸುವಂತೆ ಆದೇಶ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಹಳೆ ವಿದ್ಯಾರ್ಥಿಗಳ ಸಂಘ, ವಾಟ್ಸಾಪ್ ಗ್ರೂಪ್ ರಚಿಸುವಂತೆ ಶಿಕ್ಷಣ ಇಲಾಖೆ ಆದೇಶ ಹೊರಡಿಸಿದೆ. ಸರ್ಕಾರದ ಎಲ್ಲಾ ಪ್ರಾಥಮಿಕ, ಪ್ರೌ ಢಶಾಲೆಗಳಲ್ಲಿ ಹಳೆ ವಿದ್ಯಾರ್ಥಿಗಳ ಸಂಘ ಸ್ಥಾಪಿಸಲು, ಅದಕ್ಕೆ ಸಂಬಂಧಿಸಿದಂತೆ ವಾಟ್ಸ್ ಆಪ್ ಗ್ರೂಪ್ ಮಾಡಿ ಹಳೆಯ ವಿದ್ಯಾರ್ಥಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಸದಸ್ಯರನ್ನಾಗಿ ಮಾಡಿಕೊಳ್ಳಲು ತಿಳಿಸಲಾಗಿತ್ತು. ಈಗಾಗಲೇ 25007 ಶಾಲೆಗಳು ವಿದ್ಯಾರ್ಥಿಗಳ ಸಂಘ ಸ್ಥಾಪಿಸಿಕೊಂಡಿದ್ದು, ಅವುಗಳಲ್ಲಿ 15,170 ಶಾಲೆಗಳು ವಾಟ್ಸ್ ಆಪ್ ಗ್ರೂಪನ್ನು ರಚಿಸಿಕೊಂಡಿರುತ್ತವೆ. ಜಿಲ್ಲಾವಾರು ಮಾಹಿತಿಯನ್ನು ಲಗತ್ತಿಸಿದೆ. ಈಗಾಗಲೇ ಹಳ ವಿದ್ಯಾರ್ಥಿಗಳ ಸಂಘ ಸ್ಥಾಪಿಸಿರುವ ಎಲ್ಲಾ ಶಾಲೆಗಳು ಕೂಡಲೇ ವಾಟ್ಸ್ ಆಪ್ ಗ್ರೂಪ್ ರಚಿಸಿಕೊಂಡು ಸದಸ್ಯರ ಸಂಖ್ಯೆ ಹೆಚ್ಚಿಸುವುದು, ಇಲ್ಲಿಯವರೆಗೆ ಸಂಘ ರಚಿಸಿಕೊಳ್ಳದೇ ಇರುವ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು 30/05/2024 ರಿಂದ ಒಂದುವಾರದೊಳಗೆ ಕಡ್ಡಾಯ. ಎಲ್ಲಾ ಶಾಲೆಗಳು ಸಂಘ ಸ್ಥಾಪಿಸುವಂತೆ, ವಾಟ್ಸ್ ಆಪ್ ಗ್ರೂಪ್ ರಚಿಸಿಕೊಳ್ಳುವಂತೆ ಉಪ ನಿರ್ದೇಶಕರು ಕ್ರಮ ಕೈಗೊಳ್ಳಬೇಕು ಎಂದು ಶಿಕ್ಷಣ ಇಲಾಖೆ ಆದೇಶ ಹೊರಡಿಸಿದೆ.

## ಸಂತ್ರಸ್ತೆಯರ ಪರ ಜೆಡಿಎಸ್ ಪಕ್ಷ ಜಿ.ಟಿ. ದೇವೇಗೌಡ

• ಉದಯವಾಹಿನಿ, ಹಾಸನ

ಪ್ರಜ್ವಲ್ ರೇವಣ್ಣ ತಪ್ಪು ಮಾಡಿದ್ದರೆ ಶಿಕ್ಷೆ ಕೊಡಿ ಎಂದು ಹೇಳಿದ್ದೇವೆ. ತನಿಖೆಯಿಂದ ಸಂಪೂರ್ಣ ಉತ್ತರ ಹೊರ ಬರಲಿ. ನಮ್ಮ ಪಕ್ಷ ನೂರಕ್ಕೆ ನೂರು ಸಂತ್ರಸ್ತೆಯರ ಪರವಾಗಿ ಇರಲಿದೆ. ಎಸ್‌ಐಟಿ ತನಿಖೆಯಿಂದ ಸತ್ಯ ಹೊರ ಬರುವವರೆಗೂ ನಾವೇನೂ ಹೇಳಲು ಆಗಲ್ಲ ಎಂದು ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ.ದೇವೇಗೌಡ ಹೇಳಿದರು. ನಗರದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಪ್ಪು ತಿಂದ ಮೇಲೆ ನೀರು ಕುಡಿಯಲೇಬೇಕು, ತಪ್ಪಿತಸ್ಥರಿಗೆ ಶಿಕ್ಷೆ ಆಗಲೇಬೇಕು ಎಂದು ಎಚ್.ಟಿ. ಕುಮಾರಸ್ವಾಮಿ ಮೊದಲೇ ಹೇಳಿದ್ದರು. ಪ್ರಜ್ವಲ್ ರೇವಣ್ಣ ಜೊತೆಗೆ ಪೆನ್‌ಡ್ರೈವ್ ಹಂಚಿದವರ ಬಂಧನವೂ ಆಗಬೇಕು ಎಂದು ಒತ್ತಾಯಿಸಿದರು. ನಮ್ಮ ಪಕ್ಷದಿಂದ ಪ್ರಜ್ವಲ್ ರೇವಣ್ಣ ಅವರನ್ನು ಅಮಾನತು ಮಾಡಿದ್ದು, ಅವರ ಬಂಧನದಿಂದ ಪಕ್ಷದ ಮೇಲೆ ಯಾವುದೇ ಪರಿಣಾಮ ಬೀರಲ್ಲ. ನಮಗೆ ಯಾವುದೇ ಮುಜುಗರ ಇಲ್ಲ ಎಂದು ಹೇಳಿದರು.

# ಪ್ರಜ್ವಲ್‌ಗೆ ಇಲ್ಲ ಬೇಲ್ ಸಂಸದನಿಗೆ ಎಸ್‌ಐಟಿ ಡ್ರಿಲ್

**ಲೈಂಗಿಕ ದೌರ್ಜನ್ಯ, ಅತ್ಯಾಚಾರ ಪ್ರಕರಣದ ಆರೋಪಿ, ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ 6 ದಿನಗಳ ಕಾಲ ಎಸ್‌ಐಟಿ ಕಸ್ಟಡಿಗೆ ನೀಡಿದೆ. ಪ್ರಜ್ವಲ್ ರೇವಣ್ಣ ಅವರನ್ನು ವಶಕ್ಕೆ ಪಡೆದಿದ್ದ ಎಸ್‌ಐಟಿ ಪೊಲೀಸ್ ಅಧಿಕಾರಿಗಳು ನ್ಯಾಯಾಲಯದ ಮುಂದೆ ಹಾಜರುಪಡಿಸಿ 15 ದಿನಗಳ ಕಾಲ ವಿಚಾರಣೆಗೆ ನೀಡಬೇಕೆಂದು ಮನವಿ ಮಾಡಿದರು.**



## ■ 33 ದಿನಗಳ ಬಳಿಕ ಬೆಂಗಳೂರಿಗೆ ಬಂದಿದ್ದ ಪ್ರಜ್ವಲ್ ರೇವಣ್ಣ
## ■ 6 ದಿನ ಎಸ್‌ಐಟಿ ಕಸ್ಟಡಿಗೆ ನೀಡಿದ ನ್ಯಾಯಾಲಯ

• ಉದಯವಾಹಿನಿ, ಬೆಂಗಳೂರು

ವಾದ-ಪ್ರತಿವಾದಗಳನ್ನು ಆಲಿಸಿದ 42ನೇ ಎಸಿಎಂಎಂ ನ್ಯಾಯಾಲಯದ ನ್ಯಾಯಾಧೀಶರಾದ ಶಿವಕುಮಾರ್ ಅವರು ಪ್ರಜ್ವಲ್ ರೇವಣ್ಣ ಅವರನ್ನು 6 ದಿನಗಳ ಕಾಲ ಎಸ್‌ಐಟಿ ವಶಕ್ಕೆ ನೀಡಿದರು. ಎಸ್‌ಐಟಿ ಪರ ವಕೀಲರಾದ ಸರ್ಕಾರಿ ಅಭಿಯೋಜಕ ಅಶೋಕ್ ನಾಯಕ್ ವಾದ ಮಂಡಿಸಿ ಆರೋಪಿ ಮೇಲೆ ಅತ್ಯಾಚಾರ ಪ್ರಕರಣ ದಾಖಲಾಗಿದೆ. ನೂರಕ್ಕೂ ಅಧಿಕ ಸಂತ್ರಸ್ತೆಯರಿದ್ದಾರೆ ಎಂದು ಹೊಳೆನರಸೀಪುರ ಪ್ರಕರಣವನ್ನು ಉಲ್ಲೇಖಿಸಿದರು. ವಿಡಿಯೋ ವೈರಲ್ ಆದ ಬಳಿಕ ಹಲವು ಮಹಿಳೆಯರು ಸಂತ್ರಸ್ತೆಯರಾಗಿದ್ದಾರೆ. ಅವರಿಂದ ಮೊಬೈಲ್ ವಶಕ್ಕೆ ಪಡೆಯಬೇಕು. ಮೊಬೈಲ್‌ನಲ್ಲಿ ಫೇಸ್‌ಲಾಕ್ ಇದೆ. ಅದನ್ನು ಓಪನ್ ಮಾಡಲು ಇವರಿಗೆ ಮತ್ತು ಮಧು ಎಂಬುವವರಿಗೆ ಮಾತ್ರ ಅವಕಾಶವಿದೆ. ಹಾಗಾಗಿ ಹೆಚ್ಚಿನ ತನಿಖೆ ನಡೆಸಲು ಎಸ್‌ಐಟಿ ವಶಕ್ಕೆ ನೀಡಬೇಕೆಂದು ಮನವಿ ಮಾಡಿದರು. ಪ್ರಜ್ವಲ್ ರೇವಣ್ಣ ಪರ ವಕೀಲರಾದ ಅರುಣ್ ಅವರು ಪ್ರತಿವಾದ ಮಂಡಿಸಿ ಅತ್ಯಾಚಾರ ಮಾಡಿದ್ದಾರೆ ಎಂದು ಮೊದಲು ಸಂತ್ರಸ್ತೆ ದೂರು ನೀಡಿಲ್ಲ. ಯಾವುದೇ ದೃಶ್ಯ ರೆಕಾರ್ಡ್ ಆಗಿಲ್ಲ. ಏ.28 ರಿಂದ ಮೇ 2ರ ವರೆಗೆ ಅತ್ಯಾಚಾರದ ಉಲ್ಲೇಖವಿಲ್ಲ. ನ್ಯಾಯಯುತವಾಗಿ ಜಾಮೀನು ನೀಡಬಹುದಾದ ಪ್ರಕರಣ ಇದಾಗಿದೆ. ಸರ್ಕಾರಿ ಪರ ವಕೀಲರು ತಮಗಿಷ್ಟ ಬಂದ ಪದಗಳನ್ನು ಬಳಸಿ ವಾದ ಮಂಡಿಸಿದ್ದಾರೆ. ದೂರುದಾರರಿಂದ ರೆಡಿಮೇಡ್ ದೂರು ಸ್ವೀಕರಿಸಲಾಗಿದೆ. ವಿಡಿಯೋ ರೆಕಾರ್ಡ್ ಮಾಡಬೇಕೆಂಬ ನಿಯಮವಿದೆ. ಆದರೆ, ದೂರುದಾರರಿಂದ ವಿಡಿಯೋ ಹೇಳಿಕೆ ಪಡೆದಿಲ್ಲ. ತನಿಖೆಗೆ ಸಹಕರಿಸಲು ಪ್ರಜ್ವಲ್ ರೇವಣ್ಣ ಸಿದ್ಧರಿದ್ದಾರೆ. ಆದರೂ 15 ದಿನಗಳ ಕಾಲ ಎಸ್‌ಐಟಿ ವಶಕ್ಕೆ ಕೇಳುತ್ತಿರುವ ಉದ್ದೇಶವೇನು ಪ್ರಜ್ವಲ್ ರೇವಣ್ಣ ಪರ ವಕೀಲರು ಪ್ರಶ್ನಿಸಿದರು. ಲೈಂಗಿಕ ದೌರ್ಜನ್ಯ ಕೇಸ್ ಅತ್ಯಾಚಾರ ಕೇಸ್ ಆಗಿ ಪರಿವರ್ತನೆಯಾಗಿದೆ.

ವಿಡಿಯೋದಲ್ಲಿರುವವರ ಮುಖ ಆಧರಿಸಿ ತನಿಖೆ ಮಾಡುತ್ತಿದ್ದಾರೆ ಎಂದು ಹೇಳಿದ ಅವರು, 15 ದಿನಗಳ ಕಾಲ ಕಸ್ಟಡಿ ಅಗತ್ಯವಿಲ್ಲ. ಕೇವಲ 1 ದಿನ ಸಾಕು ಎಂದು ಹೇಳಿದರು. ವಾದ,ಪ್ರತಿವಾದ ಆಲಿಸಿದ ನ್ಯಾಯಾಲಯ ಪ್ರಜ್ವಲ್ ಅವರನ್ನು 6 ದಿನಕಾಲ ಎಸ್‌ಐಟಿ ವಶಕ್ಕೆ ನೀಡಿದರು. ವಿಚಾರಣೆ ಸಂದರ್ಭದಲ್ಲಿ ಕೋಟ್ ಹಾಲ್ ಕಿಕ್ಕಿರಿದು ತಂಬಿತ್ತು. ಲೈಂಗಿಕ ದೌರ್ಜನ್ಯ , ಅತ್ಯಾಚಾರ ಪ್ರಕರಣದ ಆರೋಪಿ ಹಾಸನ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ಜೂನ್ 6ರವರೆಗೆ ಅಂದರೆ ಆರು ದಿನಗಳ ಕಾಲ ಎಸ್‌ಐಟಿ ಕಸ್ಟಡಿಗೆ ನೀಡಿ ಕೋರ್ಟ್ ಆದೇಶ ಹೊರಡಿಸಿದೆ. ಈ ವೇಳೆ ಮಾಧ್ಯಮಗಳ ಟ್ರಯಲ್‌ಗೆ ನಿರ್ಬಂಧ ವಿಧಿಸಲು ಪ್ರಜ್ವಲ್ ನ್ಯಾಯಾಧೀಶರ ಮುಂದೆ ಮನವಿ ಮಾಡಿದರು. ಆದ್ರೆ, ಇದಕ್ಕೆ ವಕೀಲರನ್ನು ಸಂಪರ್ಕಿಸಲು ಪ್ರಜ್ವಲ್ ಗೆ ಜಡ್ಜ್ ಸೂಚನೆ ನೀಡಿದ್ದಾರೆ. ವೈದ್ಯಕೀಯ ಚಿಕಿತ್ಸೆ ಬೇಕಿದ್ದರೆ ಒದಗಿಸಲು ಅವಕಾಶ. ಹಾಗೇ ಕಸ್ಟಡಿ ಅವಧಿಯಲ್ಲಿ ಕಿರುಕುಳ ನೀಡದಂತೆ ಕೋರ್ಟ್, ತನಿಖಾಧಿಕಾರಿಗಳಿ ಸೂಚನೆ ನೀಡಿದೆ. ಜರ್ಮನಿಯಿಂದ ಬೆಂಗಳೂರು ವಿಮಾನ ನಿಲ್ದಾಣಕ್ಕೆ ಬಂದಿಳಿಯುತ್ತಿದ್ದಂತೆಯೇ ಪ್ರಜ್ವಲ್ ರೇವಣ್ಣ ಅವರನ್ನು ಎಸ್‌ಐಟಿ ಬಂಧಿಸಿದ್ದು, ವೈದ್ಯಕೀಯ ತಪಾಸಣೆ ಮಾಡಿಸಿ ಬಳಿಕ ಬೆಂಗಳೂರಿನ 42ನೇ ಎಸಿಎಂಎಂ ನ್ಯಾಯಾಲಯಕ್ಕೆ ಹಾಜರುಪಡಿಸಿ ವಿಚಾರಣೆ ಅಗತ್ಯವಿರುವುದರಿಂದ ತಮ್ಮ ಕಸ್ಟಡಿಗೆ ನೀಡು ವಂತೆ ಮನವಿ ಮಾಡಿದೆ. ಎಸ್‌ಐಟಿ ಮನವಿ ಪುರಸ್ಕರಿಸಿದ ಕೋರ್ಟ್, ಪ್ರಜ್ವಲ್ ರೇವಣ್ಣನನ್ನು ಏಳು ದಿನ ಎಸ್‌ಐಟಿ ಕಸ್ಟಡಿಗೆ ನೀಡಿ ಆದೇಶಿಸಿದೆ. ಎಸ್‌ಐಟಿ ಪರವಾಗಿ ಎಸ್‌ಪಿಪಿ ಅಶೋಕ್ ನಾಯಕ್ ಅವರು ವಾದ ಮಂಡಿಸಿದರೆ, ಪ್ರಜ್ವಲ್ ಪರ ಅರುಣ್ ವಾದ ಮಂಡಿಸಿದರು.

1 ಹಾಸನ ಪೆನ್‌ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಜ್ವಲ್ ರೇವಣ್ಣ ಅವರನ್ನು ಜೂನ್ 6 ರವರೆಗೆ ಎಸ್‌ಐಟಿ ಕಸ್ಟಡಿಗೆ ನೀಡಿ ನ್ಯಾಯಾಲಯ ಆದೇಶ ಮಾಡಿದೆ

2 ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಈ ಆದೇಶವನ್ನು ಮಾಡಿದೆ. ಒಟ್ಟು 7 ದಿನಗಳ ಕಾಲ ಎಸ್‌ಐಟಿ ಕಸ್ಟಡಿಗೆ ನ್ಯಾಯಾಲಯ ನೀಡಿದೆ

3 ಎರಡು ಕಡೆಯ ವಾದಗಳನ್ನು ಆಲಿಸಿದ ನ್ಯಾಯಾಧೀಶರು ಬಳಿಕ ತಮ್ಮ ತೀರ್ಮಾನವನ್ನು ಪ್ರಕಟ ಮಾಡಿದರು

### ಕೈಕಟ್ಟಿ ನಿಂತ ಪ್ರಜ್ವಲ್ ರೇವಣ್ಣ


ಲೈಂಗಿಕ ದೌರ್ಜನ್ಯ, ಅತ್ಯಾಚಾರ ಪ್ರಕರಣದಲ್ಲಿ ಸುಮಾರು 35 ದಿನ ವಿದೇಶದಲ್ಲಿ ತಲೆಮರೆಸಿಕೊಂಡಿದ್ದ ಪ್ರಜ್ವಲ್ ರೇವಣ್ಣ ಭಾರತಕ್ಕೆ ಬಂದಿದ್ದು, ಎಸ್‌ಐಟಿ ಅಧಿಕಾರಿಗಳು ಬಂಧಿಸಿದ್ದಾರೆ. ಪ್ರಜ್ವಲ್ ರೇವಣ್ಣ ಅವರನ್ನು ಬೆಂಗಳೂರಿನ 42ನೇ ಎಸಿಎಂಎಂ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ಬರೀ ಅನ್ನ-ಸಾಂಬಾರ್ ಸೇವಿಸಿ ನ್ಯಾಯಾಧೀಶರ ಎದುರು ಕೈಕಟ್ಟಿ ನಿಂತರು. ಎಸ್‌ಐಟಿ ಪರ ಹಿರಿಯ ವಕೀಲ, ಎಸ್‌ಪಿಪಿ ಅಶೋಕ್ ನಾಯ್ಕ್ ವಾದ ಮಂಡಿಸಿದರು. ಬಟ್ಟೆ ಬಿಚ್ಚಿಸುವುದಕ್ಕೂ, ಬಲವಂತ ಮಾಡುವುದಕ್ಕೂ ವ್ಯತ್ಯಾಸ ಇರುತ್ತದೆ. ವಿಡಿಯೊ ರೆಕಾರ್ಡ್ ಮಾಡುವಾಗ ಮುಖ ಮರೆಮಾಚಲಾಗಿದೆ. ಆದರೆ, ಇದು ಅವರೇ ಅಂತ ಕೆಲ ಸಾಕ್ಷ್ಯಗಳಿವೆ. ವಿದೇಶದಲ್ಲಿ ಅರೆಸ್ಟ್ ಆಗುತ್ತೇನೆ ಅಂತ ಈಗ ದೇಶಕ್ಕೆ ಬಂದಿದ್ದಾರೆ. ಸಂತ್ರಸ್ತೆಯರ ಮೇಲೆ ಬಲ ಪ್ರಯೋಗವಾಗಿದೆ. ಹೆದರಿಸಿ ಕಿರುಕುಳ ನೀಡಿದ್ದಾರೆ. ಹಾಗಾಗಿ, ಪ್ರಜ್ವಲ್ ರೇವಣ್ಣ ಅವರನ್ನು 15 ದಿನ ಎಸ್‌ಐಟಿ ಕಸ್ಟಡಿಗೆ ನೀಡಬೇಕು ಎಂಬುದಾಗಿ ತಿಳಿಸಿದರು.

### ರೇವಣ್ಣ ಕುಟುಂಬಕ್ಕೆ ಡಬಲ್ ಶಾಕ್

ಸಂತ್ರಸ್ತ ಮಹಿಳೆ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಜೆಡಿಎಸ್ ಶಾಸಕ ಎಚ್‌ಡಿ ರೇವಣ್ಣ ಅವರ ಪತ್ನಿ ಭವಾನಿ ರೇವಣ್ಣ ಅವರ ಜಾಮೀನು ಅರ್ಜಿ ವಜಾಗೊಂಡಿದೆ. ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಭವಾನಿ ರೇವಣ್ಣ ಅವರಿಗೆ ಜಾಮೀನು ಅರ್ಜಿಯನ್ನು ವಜಾ ಮಾಡಿ ಆದೇಶ ಹೊರಡಿಸಿದೆ. ಈ ಹಿನ್ನೆಲೆ ಭವಾನಿ ರೇವಣ್ಣಗೆ ಬಂಧನದ ಭೀತಿ ಎದುರಾಗಿದ್ದು, ಎಚ್‌ಡಿ ರೇವಣ್ಣ ಕುಟುಂಬಕ್ಕೆ ಡಬಲ್ ಶಾಕ್ ಆಗಿದೆ. ಮೈಸೂರಿನ ಕೆಆರ್ ಪೇಟೆಯಲ್ಲಿ ದಾಖಲಾಗಿರುವ ಕಿಡ್ನ್ಯಾಪ್ ಕೇಸ್‌ನಲ್ಲಿ ಬಂಧನದ ಭೀತಿ ಎದುರಾದ ಹಿನ್ನೆಲೆ ಭವಾನಿ ರೇವಣ್ಣ ಅವರು ನಿರೀಕ್ಷಣಾ ಜಾಮೀನು ಕೋರಿ ಜನಪ್ರತಿನಿಧಿಗಳ ವಿಶೇಷ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿ ವಿಚಾರಣೆ ನಡೆಸಿದ್ದ ಕೋರ್ಟ್, ಜಾಮೀನು ಆದೇಶ ಕಾಯ್ದಿರಿಸಿತ್ತು. ಇದೀಗ ಕೋರ್ಟ್, ಭವಾನಿ ರೇವಣ್ಣ ಅವರಿಗೆ ಜಾಮೀನು ತಿರಸ್ಕರಿಸಿದೆ. ಮತ್ತೊಂದೆಡೆ ಪುತ್ರ ಪ್ರಜ್ವಲ್ ರೇವಣ್ಣನನ್ನು ಕೋರ್ಟ್ , ಆರು ದಿನ ಎಸ್‌ಐಟಿ ಕಸ್ಟಡಿಗೆ ನೀಡಿದೆ. ಅಲ್ಲದೇ ಪ್ರಜ್ವಲ್ ಜಾಮೀನು ಅರ್ಜಿ ವಿಚಾರಣೆ ಜೂ.7ಕ್ಕೆ ಮುಂದೂಡಿಕೆಯಾಗಿದೆ. ಹೀಗಾಗಿ ಇಂದು ಎಚ್‌ಡಿ ರೇವಣ್ಣ ಕುಟುಂಬಕ್ಕೆ ಆಘಾತದ ಮೇಲೆ ಆಘಾತವಾಗಿದೆ. ಕಿಡ್ನ್ಯಾಪ್ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆಗೆ ಹಾಜರಾಗುವಂತೆ ಭವಾನಿ ರೇವಣ್ಣಗೆ ಎಸ್‌ಐಟಿ ನೋಟೀಸ್ ನೀಡಿತ್ತು.

## ಹಿಜಾಬ್ ನಿಷೇಧ ಧರ್ಮಾಧಾರಿತ ಅಲ್ಲ, ಸಮವಸ್ತ್ರ ಆಧಾರಿತ: ಭಟ್

• ಉದಯವಾಹಿನಿ, ಕುಂದಾಪುರ



ಶಾಲಾ ಕಾಲೇಜುಗಳಲ್ಲಿ ಹಿಜಾಬ್ ಧಾರಣೆ ನಿಷೇಧ ಮಾಡಿದ್ದು ಧರ್ಮಾಧಾರಿತವಾಗಿ ಅಲ್ಲ. ಸಮವಸ್ತ್ರ ಆಧಾರಿತವಾಗಿ. ಒಂದೂವರೆ ವರ್ಷ ಹಿಜಾಬ್ ಬದಿಗಿಟ್ಟು ಸಮವಸ್ತ್ರದಲ್ಲಿ ಆಗಮಿಸುತ್ತಿದ್ದ ಆಕೆ ಕಾಲೇಜಿನ ಶಿಸ್ತು ತಪ್ಪಿಸಿ ಸಂಘಟನೆಯ ಕುಮ್ಮಕ್ಕಿನಿಂದ ಕೊನೆಯ ಎರಡು ತಿಂಗಳು ಹಿಜಾಬ್ ಧರಿಸಿದ್ದರಿಂದ ಹೀಗೆಲ್ಲಾ ಆಯಿತು ಎಂದು ಮಾಜಿ ಶಾಸಕ ಕೆ.ರಘುಪತಿ ಭಟ್ ಹೇಳಿದರು.

ಸುದ್ದಿಗಾರರ ಜತೆ ಮಾತನಾಡಿ, ಹಿಜಾಬ್ ಪರ ಹೋರಾಟಗಾರ್ತಿ ಅಲಿಯಾ ಅಸ್ಸಾದಿ ಸಾಮಾಜಿಕ ಜಾಲತಾಣದಲ್ಲಿ ರಘುಪತಿ ಭಟ್ ಬಿಜೆಪಿಯಿಂದ ಉಚ್ಚಾಟನೆಗೊಂಡ ಕುರಿತು ಹಾಕಿದ ಪೋಸ್ಟ್‌ಗೆ ಪ್ರತಿಕ್ರಿಯಿಸಿ, ಆಕೆ ಒಳ್ಳೆ ವಿದ್ಯೆ ಕಲಿಯಲಿ. ಆಗ ಧರ್ಮಾಂಧತೆ ಬರುವುದಿಲ್ಲ. ದೇಶದ್ರೋಹದ ಚಿಂತನೆ ಬರುವುದಿಲ್ಲ ಎಂದಿದ್ದಾರೆ. ನೈಋತ್ಯ ಪದವೀಧರ ಕ್ಷೇತ್ರದಲ್ಲಿ 4 ಪ್ರಬಲ ಅಭ್ಯರ್ಥಿಗಳಿದ್ದು ವ್ಯಕ್ತಿಗಳ ಸಾಧನೆ ಆಧರಿಸಿ ನನಗೆ ಸುಶಿಕ್ಷಿತ ಜನ ಮತ ನೀಡಲಿದ್ದಾರೆ. ಈ ಮೊದಲು ಸಾರ್ವಜನಿಕ ಕೆಲಸಗಳಾದ ಕಾರಣ ಇನ್ನು ಮುಂದೆಯೂ ನನ್ನಿಂದ ಜನಸೇವೆ ಆಗಲಿದೆ ಎಂದು ನಂಬಿಕೆ ಇರಲಿದೆ. ನಾನು ಟೆಸ್ಟೆಡ್ ಗೂಡ್ಸ್. ನನ್ನದು ಹಿಂದೂ ಸಿದ್ಧಾಂತ ಎಂದರು.

## 21 ಆಡು, 3 ಎಮ್ಮೆ, 21 ಕುರಿ, 5 ಹಂದಿಗಳ ಬಲಿ: ಡಿಸಿಎಂ

• ಉದಯವಾಹಿನಿ, ಬೆಂಗಳೂರು

ತಮ್ಮ ಸರ್ಕಾರವನ್ನು ಅಸ್ಥಿರಗೊಳಿಸಲು ರಾಜಕೀಯ ವಿರೋಧಿಗಳು ಕೇರಳದ ದೇವಾಲಯವೊಂದರಲ್ಲಿ 'ಅಘೋರಿಗಳು' ನಡೆಸುವ ಮಾಟಮಂತ್ರ ಆಚರಣೆಗಳನ್ನು ಮಾಡುತ್ತಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗಂಭೀರ ಆರೋಪ ಮಾಡಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿದ ಶಿವಕುಮಾರ್, ಕೇರಳದ ರಾಜರಾಜೇಶ್ವರಿ ದೇವಾಲಯದ ಬಳಿಯ ಏಕಾಂತದಲ್ಲಿ ಅಘೋರಿಗಳು ರಹಸ್ಯ ಯಜ್ಞ (ವಿಶೇಷ ಪೂಜೆ) ನಡೆಸುತ್ತಿರುವ ಬಗ್ಗೆ ವಿಶ್ವಾಸಾರ್ಹ ಗುಪ್ತಚರ ಮಾಹಿತಿ ಇದೆ ಎಂದು ಹೇಳಿದ್ದಾರೆ.

ರಾಜಕೀಯ ವಿರೋಧಿಗಳನ್ನು ನಿರ್ಮೂಲನೆ ಮಾಡಲು ಮತ್ತು ಕಾಂಗ್ರೆಸ್ ನೇತೃತ್ವದ ಆಡಳಿತದ ಅಧಿಕಾರವನ್ನು ನಾಶಪಡಿಸಲು ರೂಪಿಸಲಾದ ಈ ಆಚರಣೆಯನ್ನು ಅವರು 'ರಾಜ ಕಾಂತಕ' ಮತ್ತು 'ಮಾರನ ಮೋಹನ ಸ್ತಂಭನ' ಯಜ್ಞಗಳು ಎಂದು ಹೆಸರಿಸಿದರು.


21 ಕೆಂಪು ಮೇಕೆಗಳು, ಮೂರು ಎಮ್ಮೆಗಳು, 21 ಕಪ್ಪು ಕುರಿಗಳು ಮತ್ತು ಐದು ಹಂದಿಗಳನ್ನು ಬಲಿ ನೀಡಿದ್ದಾರೆ ಎಂದು ಉಪ ಮುಖ್ಯಮಂತ್ರಿ ವಿವರಿಸಿದರು.



ನಿರ್ದಿಷ್ಟ ರಾಜಕೀಯ ಬಣಗಳತ್ತ ನೇರವಾಗಿ ಬೆರಳು ತೋರಿಸದ ಶಿವಕುಮಾರ್, ಕರ್ನಾಟಕ ಮೂಲದ ನಾಯಕರ ಪಾಲ್ಗೊಳ್ಳುವಿಕೆಯ ಬಗ್ಗೆ ಸುಳಿವು ನೀಡಿದರು. ''ಅವರು ತಮ್ಮ ಪ್ರಯತ್ನಗಳನ್ನು ಮುಂದುವರಿಸಲಿ; ನಾನು ಅಡೆತಡೆಯಿಲ್ಲದೆ ಇರುತ್ತೇನೆ. ನನ್ನ ನಂಬಿಕೆಯು ಅವರ ಕುತಂತ್ರಗಳಿಂದ ನನ್ನನ್ನು ರಕ್ಷಿಸುತ್ತದೆ.'' ಎಂದು ಹೇಳಿದ್ದಾರೆ.

## ಕಾಂಗ್ರೆಸ್ ಕರ್ನಾಟಕವನ್ನು ಮುಸ್ಲಿಂ ರಾಜ್ಯವೆಂದು ಘೋಷಣೆ ಮಾಡಲಿ

• ಉದಯವಾಹಿನಿ, ಶಿವಮೊಗ್ಗ



ಕಾಂಗ್ರೆಸ್ ಸರಕಾರ ಕರ್ನಾಟಕ ರಾಜ್ಯವನ್ನು ಮುಸ್ಲಿಂ ರಾಜ್ಯವೆಂದು ಘೋಷಣೆ ಮಾಡಲಿ ಅಂತ ಮಾಜಿ ಡಿ.ಸಿಎಂ ಕೆ.ಎಸ್ ಈಶ್ವರಪ್ಪನವರು ಸವಾಲು ಹಾಕಿದ್ದಾರೆ. ದಾವಣಗೆರೆಯಲ್ಲಿ ನಡೆದ ಆದಿಲ್ ಸಾವು ಪ್ರಕರಣದಲ್ಲಿ ಪೊಲೀಸ್ ಠಾಣೆ ಮೇಲೆಯೇ ದಾಳಿ ಮಾಡಲಾಗಿದೆ. ಪೊಲೀಸ್ ಠಾಣೆಗಳಿಗೆ ರಕ್ಷಣೆ ಕೊಡಬೇಕಿದೆ. ರಾಜ್ಯ ಸರಕಾರ ಮುಸ್ಲಿಮರ ಪರವಾಗಿದೆ ಆ ಕಾರಣಕ್ಕಾಗಿಯೇ ರಾಜ್ಯದಲ್ಲಿ ಈ ಪರಿಸ್ಥಿತಿ ನಿರ್ಮಾಣವಾಗಿದೆ ಅಂಥ ಅವರು ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರದರು. ಇದೇ ವೇಳೇ ಅವರು ಪದವೀಧರರಿಗೆ ಗುಂಡು ಪಾರ್ಟಿ ಕೊಡುವ ಮೂಲಕ ಈ ಚುನಾವಣೆಯನ್ನು ಸರ್ಜಿ ಗುಂಡುಪಾರ್ಟಿಯನ್ನಾಗಿ ಬದಲಾಯಿಸಿದ ಅಪಕೀರ್ತಿ ಬಿಜೆಪಿಯ ಅಭ್ಯರ್ಥಿ ಡಾ.ಧನಂಜಯ ಸರ್ಜಿಯವರಿಗೆ ಸೇರುತ್ತದೆ ಎಂದು ಅಂತ ಹೇಳಿದರು. ಧನಂಜಯ ಸರ್ಜಿಯವರು ಖಂಡಿತ ಸೋಲುತ್ತಾರೆ ಎಂದರು. ರಘುಪತಿ ಭಟ್ ಅವರ ಬಗ್ಗೆ ನನಗೆ ಗೌರವ ಹೆಚ್ಚಾಗಿದೆ. ಅವರ ಕ್ಷೇತ್ರದಲ್ಲಿ ಅವರನ್ನು ತುಂಬಾ ಪ್ರೀತಿಸುತ್ತಾರೆ ಅಂತ ಹೇಳಿದರು.

# ಸಂತೋಷ್ ಲಾಡ್ ಸಾಹೇಬ್ರೆ ಬಡ ಕಾರ್ಮಿಕರ ಬಗ್ಗೆ ಕನಿಕರ ತೋರಿ!

## ರಾಜ್ಯದ ಕಟ್ಟಡ ಕಾರ್ಮಿಕರ ಮಕ್ಕಳ ವಿದ್ಯಾರ್ಥಿ ವೇತನಗಳು ಸರ್ಕಾರದಿಂದ ಕಾರ್ಮಿಕರ ಮಕ್ಕಳಿಗೆ ತಲುಪಲೇ ಇಲ್ಲ

• ಉಮೇಶ್ ಬಾಣಾವರ ಉದಯವಾಹಿನಿ ಬೆಂಗಳೂರು

ಕರ್ನಾಟಕ ರಾಜ್ಯ ಕಾರ್ಮಿಕ ಮತ್ತು ಇತರೆ ಕಲ್ಯಾಣ ಮಂಡಳಿ ವತಿಯಿಂದ ಕಳೆದ ಸರ್ಕಾರಗಳು ಇದುವರೆಗೆ ಹಲವಾರು ಸವಲತ್ತುಗಳನ್ನು ನೀಡುತ್ತಾ ಬಂದಿರುತ್ತದೆ. ಆದರೆ ಇತ್ತೀಚಿಗೆ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಸರ್ಕಾರ ನೀಡುತ್ತಿದ್ದ ಪ್ರತಿ ವರ್ಷ ವಿದ್ಯಾರ್ಥಿ ವೇತನದ ಹಣ ಸದ್ದಿಲ್ಲದೆ ಶೇಕಡ ಅರ್ಧದಷ್ಟು ಕಟಾವಾಗಿ ಅದರಲ್ಲೂ ಸಹ ಶೇಕಡ 50ರಷ್ಟು ರಾಜ್ಯದ ಕಟ್ಟಡ ಕಾರ್ಮಿಕರ ಮಕ್ಕಳ ವಿದ್ಯಾರ್ಥಿ ವೇತನಗಳು ಸರ್ಕಾರದಿಂದ ಕಾರ್ಮಿಕರ ಮಕ್ಕಳಿಗೆ ತಲುಪಲೇ ಇಲ್ಲ. ಇದಲ್ಲದೆ ಹಲವಾರು ಮನೆ ನಿರ್ಮಾಣ ಮದುವೆಯ ಸಹಾಯಧನ ಇಂತಹ ಸವಲತ್ತುಗಳಿಗಾಗಿ ಅರ್ಜಿ ಸಲ್ಲಿಸಿದರೆ ಕಾರ್ಮಿಕರನ್ನು ಕಾರ್ಮಿಕರ ಅಲ್ಲ ಎಂದು ಗುರುತಿಸುವ ಕೆಲವು ಅಧಿಕಾರಿಗಳು ಹಲವಾರು ಜಿಲ್ಲೆ ತಾಲ್ಲೂಕುಗಳಲ್ಲಿ ಕಂಡು ಬರುತ್ತಿದ್ದಾರೆ... ಅಲ್ಲದೆ ಕಟ್ಟಡ ಕಾರ್ಮಿಕರ ಗುರುತುನ ಚೀಟಿ ಅಂದರೆ ಕಟ್ಟಡ ಕಾರ್ಮಿಕರ ಕಾರ್ಡ್ ಕಳೆದ ಸರ್ಕಾರಗಳಲ್ಲಿ ಮೂರು ವರ್ಷಕ್ಕೊಮ್ಮೆ ರಿನಿವಲ್ ಮಾಡಲಾಗುತ್ತಿದ್ದು ಆದರೆ ಈ ತಮ್ಮ ಸರ್ಕಾರದಲ್ಲಿ ವರ್ಷಕ್ಕೊಮ್ಮೆ ರಿನಿವಲ್ ಮಾಡಿಸಿಕೊಳ್ಳಿ ಎಂದು ಸರ್ಕಾರದಿಂದ ಆದೇಶ ಬಂದಿರುತ್ತದೆ ಎಂದು ತಾಲ್ಲೂಕು ಮಟ್ಟದ ಅಧಿಕಾರಿಗಳು ತಿಳಿಸುತ್ತಾರೆ. ಬಡ ಕೂಲಿ ಕಾರ್ಮಿಕ ಪ್ರತಿವರ್ಷ ತನ್ನ ಕಾರ್ಡ್ ರಿನಿವಲ್‌ಗಾಗಿ ವಾರಗಟ್ಟಲೆ ತನ್ನ ಕೆಲಸ ಕಾರ್ಯಗಳನ್ನು ಬಿಟ್ಟು ಕಚೇರಿ ಅಲೆಯುವಂತ ಪರಿಸ್ಥಿತಿಯನ್ನು ಕಾರ್ಮಿಕರಿಗೆ ತಂದೊಡ್ಡಲಾಗಿದೆ ಎಂದು ಸರ್ಕಾರಕ್ಕೆ ಇಡಿ ಶಾಪ ಹಾಕಿ ಕೊಟ್ಟಿದ್ದಾರೆ ಕಾರ್ಮಿಕರು!!

1 ರಾಜ್ಯದ ಕಟ್ಟಡ ಕಾರ್ಮಿಕರ ಮಕ್ಕಳ ವಿದ್ಯಾರ್ಥಿ ವೇತನಗಳು ಸರ್ಕಾರದಿಂದ ಕಾರ್ಮಿಕರ ಮಕ್ಕಳಿಗೆ ತಲುಪಲೇ ಇಲ್ಲ

2 ಬಡ ಕೂಲಿ ಕಾರ್ಮಿಕ ಪ್ರತಿವರ್ಷ ತನ್ನ ಕಾರ್ಡ್ ರಿನಿವಲ್‌ಗಾಗಿ ವಾರಗಟ್ಟಲೆ ತನ್ನ ಕೆಲಸ ಕಾರ್ಯಗಳನ್ನು ಬಿಟ್ಟು ಕಚೇರಿ ಅಲೆಯುವಂತ ಪರಿಸ್ಥಿತಿ

3 ಹಲವಾರು ಬೇಡಿಕೆಗಳು ಇದುವರೆಗೂ ಸಹ ಹೊಲಿಗೆ ಕಾರ್ಮಿಕರ ಬಗ್ಗೆ ಸರ್ಕಾರ ಗಮನ ಹರಿಸಲೇ ಇಲ್ಲ




ಇದಲ್ಲದೆ ಕರ್ನಾಟಕ ಸ್ಟೇಟ್ ಟೈಲರ್ ಅಸೋಸಿಯೇಷನ್ ಸಂಸ್ಥೆಯ ಸುಮಾರು ಹತ್ತು ಲಕ್ಷಕ್ಕೂ ಅಧಿಕ ಹೊಲಿಗೆ ಕಾರ್ಮಿಕರು ಬೆಂಗಳೂರಿನ ಜಯನಗರದ ಶಾಲಿನಿ ಮೈದಾನದಲ್ಲಿ ಬೃಹತ್ ಸಮಾವೇಶವನ್ನು ಹಮ್ಮಿಕೊಂಡು ಸುಮಾರು 25 ಸಾವಿರಕ್ಕೂ ಹೆಚ್ಚು ಹೊಲಿಗೆ ಕಾರ್ಮಿಕರು ರಾಜ್ಯದ ಮೂಲೆ ಮೂಲೆ ಇಂದಲೂ ಸಹ ಕೋಲಾರ ದಿಂದ ಹಿಡಿದು ಬೀದರ್ ಗುಲ್ಬರ್ಗವರೆಗೂ ಹೊಲಿಗೆ ಕಾರ್ಮಿಕರು ದಿನಗಟ್ಟಲೆ ತಮ್ಮ ಪ್ರಯಾಣವನ್ನು ಬೆಳೆಸಿ ಇದರಲ್ಲಿ ಹೆಣ್ಣುಮಕ್ಕಳು ಸಹ ಜಯನಗರದ ಶಾಲಿನಿ ಮೈದಾನದಲ್ಲಿ ನಡೆದ ಹೊಲಿಗೆ ಕಾರ್ಮಿಕರ ಬೃಹತ್ ಸಮಾವೇಶಕ್ಕೆ ಬಂದು ಭಾಗವಹಿಸಿ ಸರ್ಕಾರಕ್ಕೆ ತಮ್ಮ ಬೇಡಿಕೆಗಳನ್ನು ನೀಡಿದರು ಈ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಗೌರವಾನ್ವಿತ ಸಭಾಪತಿಗಳಾದ ಯುಟಿ ಖಾದರ್ ಹಾಗೂ ಸಚಿವರಾದ ಜಮೀರ್ ಅಹ್ಮದ್ ಖಾನ್ ಮತ್ತು ಶೃಂಗೇರಿ ಕ್ಷೇತ್ರದ ಶಾಸಕರಾದ ಟಿಡಿ ರಾಜೇಗೌಡರು ಸಹ ಭಾಗವಹಿಸಿದರು. ಇದೇ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳು ಮಾತನಾಡಿ ಹೊಲಿಗೆ ಕಾರ್ಮಿಕರು ಶ್ರಮಜೀವಿಗಳು ತಮ್ಮ ಶ್ರಮದಿಂದ ಜೀವನ ಮತ್ತು ಸಮಾಜ ಸೇವೆಯನ್ನು ನಡೆಸುತ್ತಾ ಬಂದಿರುವ ಹೊಲಿಗೆ ಕಾರ್ಮಿಕರ ಬೇಡಿಕೆಗಳನ್ನು ಈಡೇರಿಸುವಾಗ ಭರವಸೆ ನೀಡಿದ್ದರು ಇಂತಹ ಒಂದು ಬೃಹತ್ ಸಮಾರಂಭಕ್ಕೆ ಸಂತೋಷ್ ಲಾಡು ಸಾಹೇಬರು ಬರಲೇ ಇಲ್ಲ ಇಂದು ಸಹಸ್ರಾರು ಕಾರ್ಮಿಕರು ಮಾತನಾಡಿಕೊಂಡರು ತಮ್ಮ ಹಲವಾರು ಬೇಡಿಕೆಗಳು ಇದುವರೆಗೂ ಸಹ ಹೊಲಿಗೆ ಕಾರ್ಮಿಕರ ಬಗ್ಗೆ ಸರ್ಕಾರ ಗಮನ ಹರಿಸಲೇ ಇಲ್ಲ ಇದಕ್ಕೆ ಸಚಿವರು ಸ್ಪಂದಿಸದೆ ಇರುವುದು ರಾಜ್ಯದ್ಯಂತ ಹೊಲಿಗೆ ಕಾರ್ಮಿಕರು ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ.

**ಸಮಾಜಮುಖಿ ಚಿಂತನೆಯುಳ್ಳ ಜನಪ್ರಿಯ ಸಂತೋಷ್ ಲಾಡ್ ಸಾಹೇಬರೇ ಬಡ ಕೂಲಿ ಕಾರ್ಮಿಕರು**

**ಉದಯವಾಹಿನಿ ಗಮನಕ್ಕೆ ತರುತ್ತಿದೆ**

**ಅಸಂಘಟಿತ ಕಾರ್ಮಿಕರು ಹೊಲಿಗೆಯಿಂದ ಜೀವನ ನಡೆಸುತ್ತಿರುವ ಕಳೆದ 25 ವರ್ಷಗಳಿಂದಲೂ ಸಹ ತಮ್ಮ ಶಾಂತಿಯುತ ಹೋರಾಟಗಳನ್ನು ನಡೆಸುತ್ತ ತಮ್ಮ ಬೇಡಿಕೆಗಳಿಗಾಗಿ ಸರ್ಕಾರಿಗಳಿಗೆ ಮನವಿ ನೀಡುತ್ತಲೇ ಬರುತ್ತಿರುವ ಹೊಲಿಗೆ ಕಾರ್ಮಿಕರೆ ಬಗ್ಗೆಯೂ ಸಹ ಕಾಳಜಿ ತೋರಬೇಕಾಗಿ ಉದಯವಾಹಿನಿ ಪತ್ರಿಕೆ ತಮ್ಮ ಗಮನಕ್ಕೆ ತರುತ್ತಿದೆ**

ಈ ದಿನದ ದರ | ಪೆಟ್ರೋಲ್: 99.84 ₹/L | ಡೀಸೆಲ್ : 85.93 ₹/L | ಬಂಗಾರ: ₹7,276/Gram(24ct) ₹6,670/Gram(22ct) | ಬೆಳ್ಳಿ: ₹95.60/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

### ಅದು ನಿನ್ನ ಭ್ರಮೆಯಿಂದ

ನಿಜಗುಣರ ಪರಮಾನುಭವ ಬೋಧೆಯ ಮಾತು. ಈ ಶರೀರಾಂತರ್ಗತವಾದ ಅಹಂಕಾರದಿಂದ ಶಬ್ದ ಸ್ಪರ್ಶ ರೂಪ ರಸ ಗಂಧ ಎಂಬ ಐದು ವಿಷಯಗಳು ತೋರುತ್ತವೆ. ಇವು ಹೀಗೆ ತೋರಲು ಕಾರಣವೇನೆಂಬುದನ್ನು ಹೇಳಲಾಗದು. ಇದೆಲ್ಲ ನಿನ್ನ ಭ್ರಮೆಯಿಂದ ತೋರಿದೆ. ಇದಾವುದೂ ವಾಸ್ತವವಲ್ಲ. ಮೊಬೈಲ್ನಲ್ಲಿ ಏನೇನೋ ಕಾಣುತ್ತೇವೆ. ವಾಸ್ತವದಂತೆ ತೋರುತ್ತದೆ. ಶೃಂಗಾರಾದಿ ನವ ಭಾವಗಳೂ ಉಕ್ಕುತ್ತವೆ. ಆದರೆ ವಾಸ್ತವದಲ್ಲಿ ಮೊಬೈಲ್ನಲ್ಲಿ ಏನೂ ಇಲ್ಲ! ಎಲ್ಲ ಕೈಚಳಕ! ದೊಡ್ಡ ಗಾತ್ರ, ಅದ್ಭುತ ತೋರುವ ಮೊಬೈಲ್ ಅಂಗೈಯೊಳಗಿನ ಚಿಕ್ಕ ವಸ್ತು! ಅಸತ್ಯಕ್ಕೆ ಸತ್ಯದಂತೆ ತೋರುವ ಶಕ್ತಿಯಿದೆ. ಇದೇ ಮಾಯೆಯ ಕೈಚಳಕ!!

# ದೊಡ್ಡ ಗಣೇಶಕ್ಕೆ ಭೇಟಿ ನೀಡಿ ಪೂಜೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಮಾಜಿ ಸಚಿವ ಹಾಗು ಹಾಲಿ ಶಾಸಕ ಮತ್ತು ತಿರುಮಲ ತಿರುಪತಿ ದೇವಸ್ಥಾನ ವಿಶ್ವಸ್ತ ಮಂಡಳಿಯ ನಿರ್ದೇಶಕರಾದ ಆರ್ ವಿ ದೇಶಪಾಂಡೆ ಯವರು ಬಸವನಗುಡಿ ದೊಡ್ಡ ಗಣೇಶ ಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿ ಫಲ ಮಂತ್ರಾಕ್ಷತೆಯನ್ನು ಪ್ರಧಾನ ಅರ್ಚಕ ಹರೀಶ್ ಅವರಿಂದ ಸ್ವೀಕರಿಸಿದರು, ಈ ಸಂದರ್ಭದಲ್ಲಿ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಜಯಸಿಂಹ, ಅಖಿಲ ಕರ್ನಾಟಕ ಮಾಧ್ವ ಮಹಾಸಭಾ ಕೋಶಾಧ್ಯಕ್ಷ ಕೆ ವಿ ರಾಮಚಂದ್ರ, ಉಪಾಧ್ಯಕ್ಷ ಅಶ್ವತನಾರಾಯಣ, ಸಂಘಟನಾ ಕಾರ್ಯದರ್ಶಿ ಎನ್ ಎಸ್ ಸುಧೀಂದ್ರ ರಾವ್, ಕಾರ್ಯದರ್ಶಿ ಆನಂದ ಸವಣೂರು ಸೇರಿದಂತೆ ಮತ್ತಿತರು ಹಾಜರಿದ್ದರು.

# ರೇವಣ್ಣ ಜಾಮೀನು ರದ್ದು ಕೋರಿದ್ದ ಎಸ್ಐಟಿ ಅರ್ಜಿ ವಿಚಾರಣೆ ಮುಂದೂಡಿಕೆ!

• ಉದಯವಾಹಿನಿ, ಬೆಂಗಳೂರು

ಮಾಜಿ ಸಚಿವ ಎಚ್.ಡಿ.ರೇವಣ್ಣ ಜಾಮೀನು ರದ್ದು ಕೋರಿ ಅರ್ಜಿ ಸಲ್ಲಿಸಿದ್ದ ಎಸ್ಐಟಿ ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ಮುಂದಿನ ವಾರಕ್ಕೆ ಮುಂದೂಡಿಕೆ ಮಾಡಿದೆ. ರೇವಣ್ಣ ಅವರಿಗೆ ಜಾಮೀನು ನೀಡಿರುವುದು ಸರಿಯಲ್ಲ. ಅವರ ಜಾಮೀನನ್ನು ರದ್ದುಪಡಿಸಬೇಕೆಂದು ಎಸ್ಐಟಿ ಪರ ಸರ್ಕಾರಿ ಅಭಿಯೋಜಕರಾದ ರವಿವರ್ಮ ಕುಮಾರ್ ಅವರು ಹೈಕೋರ್ಟ್ ಏಕಸದಸ್ಯ ಪೀಠದ ಮುಂದೆ ವಾದ ಮಂಡಿಸಿದರು. ವಾದ ಆಲಿಸಿದ ಕೋರ್ಟ್ ಎಚ್.ಡಿ.ರೇವಣ್ಣ ಅವರಿಗೆ ನೋಟೀಸ್ ಜಾರಿಗೊಳಿಸಿ ವಿಚಾರಣೆಯನ್ನು ಮುಂದಿನ ವಾರಕ್ಕೆ ಮುಂದೂಡಿದೆ. ಮುಂದಿನ ವಾರ ಮಾಜಿ ಸಚಿವ ಎಚ್.ಡಿ.ರೇವಣ್ಣ ಜಾಮೀನು ಅರ್ಜಿ ತೀರ್ಪು ಪ್ರಕಟವಾಗಲಿದೆ.

# ಸಿಬಿಐಗೆ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ದೂರು

• ಉದಯವಾಹಿನಿ, ಬೆಂಗಳೂರು

ವಾಲ್ಮೀಕಿ ನಿಗಮದ ಅಧಿಕಾರಿ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಸಿಬಿಐ ಎಂಟ್ರಿಯಾಗಿದೆ. ಪ್ರಕರಣದ ಬಗ್ಗೆ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಸಿಬಿಐಗೆ ದೂರು ನೀಡಿದೆ. ಹಣ ವರ್ಗಾವಣೆ ವಂಚನೆ ಬಗ್ಗೆ ಬ್ಯಾಂಕ್ ಗಮನಕ್ಕೆ ಬಂದಿದ್ದು, ಅಕ್ರಮದ ಬಗ್ಗೆ ಸಿಬಿಐಗೆ ಔಪಚಾರಿಕ ದೂರು ನೀಡಲಾಗಿದೆ.ಯೂನಿಯನ್ ಬ್ಯಾಂಕ್ ನ ಎಂ.ಜಿ.ರಸ್ತೆ ಶಾಖೆಯಲ್ಲಿನ ಮೂವರು ಅಧಿಕಾರಿಗಳನ್ನು ಅಮಾನತು ಮಾಡಲಾಗಿದೆ ಎಂದು ಬ್ಯಾಂಕ್ ತಿಳಿಸಿದೆ. ಸಿಬಿಐ ತನಿಖೆಗೆ ಸಂಪೂರ್ಣ ಸಹಕಾರ ನೀಡುತ್ತೇವೆ. ನ್ಯಾಯಯುತವಾಗಿ ಸಮಸ್ಯೆ ಪರಿಹರಿಸಲು ಸಹಕರಿಸುವುದಾಗಿ ಯೂನಿಯನ್ ಬ್ಯಾಂಕ್ ತಿಳಿಸಿದೆ. ಈ ಹಿನ್ನೆಲೆಯಲ್ಲಿ ವಾಲ್ಮೀಕಿ ನಿಗಮದ ಅಧಿಕಾರಿ ಆತ್ಮಹತ್ಯೆ ಪ್ರಕರಣವನ್ನು ಸರ್ಕಾರ ಸಿಬಿಐ ತನಿಖೆಗೆ ವಹಿಸುವ ಸಾಧ್ಯತೆ ಇದೆ.

# 6 ದಿನಗಳ ಕಾಲ ಮದ್ಯ ಮಾರಾಟ ಬಂದ್


• ಉದಯವಾಹಿನಿ, ಬೆಂಗಳೂರು

ರಾಜ್ಯಾದ್ಯಂತ 6 ದಿನಗಳ ಕಾಲ ಮದ್ಯ ಮಾರಾಟ ನಿಷೇಧಿಸಲಾಗಿದೆ. ವಿಧಾನ ಪರಿಷತ್ ಚುನಾವಣೆ, ಲೋಕಸಭಾ ಚುನಾವಣಾ ಮತಎಣಿಕೆ ಹಿನ್ನೆಲೆಯಲ್ಲಿ ಮದ್ಯ ಮಾರಾಟಕ್ಕೆ ನಿರ್ಬಂಧ ವಿಧಿಸಲಾಗಿದೆ. ಜೂನ್ 1ರಿಂದ ಜೂನ್ 6ವರೆಗೆ ಮದ್ಯ ಮಾರಾಟ ಬಂದ್ ಆಗಲಿದೆ. ಜೂನ್ 2 ಹಾಗೂ ಜೂನ್ 4 ಹಾಗೂ ಜೂನ್ 6ರಂದು ಮದ್ಯ ಮಾರಾಟ ಸಂಪೂರ್ಣ ಬಂದ್ ಆಗಲಿದೆ. ಜೂ 1 ಹಾಗೂ ಜೂನ್ 3ರದು ಮದ್ಯ ಮಾರಾಟ ಭಾಗಶಃ ಬಂದ್ ಆಗಲಿದೆ. ರಾಜ್ಯದಲ್ಲಿ ಲೋಕಸಭ ಅಚುನಾವಣೆಗೆ ಏಪ್ರಿಲ್ 24 ರಿಂದ 26ವರೆಗೆ ಮದ್ಯ ಮಾರಾಟಕ್ಕೆ ನಿಷೇಧ ಹೇರಲಾಗಿತ್ತು. ಈಗ ಮತ್ತೆ ಮದ್ಯ ಮಾರಾಟಕ್ಕೆ ನಿರ್ಬಂಧ ವಿಧಿಸಲಾಗಿದ್ದು, ಇದರಿಂದ ವಹಿವಾಟಿನ ಮೇಲೆ ದೊಡ್ಡ ಹೊಡೆತ ಬೀಳಲಿದೆ ಎಂದು ಬೆಂಗಳೂರಿನ ಮದ್ಯಮಾರಾಟಗಾರರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಶನಿವಾರ ಸಂಜೆಯಿಂದಲೇ ಮದ್ಯ ಮಾರಾಟ ನಿಷೇಧ ಆರಂಭವಾಗುವುದರಿಂದ ವೀಕೆಂಡ್ ಕಾರ್ಪರೇಟ್ ಪಾರ್ಟಿಗಳಿಗೆ ಮದ್ಯ ಪೂರೈಕೆ ಸಾಧ್ಯವಿಲ್ಲ. ಹೀಗಾಗಿ ಪ್ರತಿ ದಿನ 30 ಲಕ್ಷ ರೂಪಾಯಿಗೂ ಅಧಿಕ ನಷ್ಟವುಂಟಾಗಲಿದೆ ಎಂದು ತಿಳಿಸಿದ್ದಾರೆ.

# ಮಾಧ್ಯಮಗಳಲ್ಲಿ ದಯವಿಟ್ಟು ಅವರ ಬಗ್ಗೆ ನಕಾರಾತ್ಮಕ ಪ್ರಚಾರ ಮಾಡಬೇಡಿ

• ಉದಯವಾಹಿನಿ, ಬೆಂಗಳೂರು

ಅಶ್ಲೀಲ ವಿಡಿಯೋ ಪ್ರಕರಣದಲ್ಲಿ ಬಂಧಿತರಾಗಿರುವ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಪ್ರಕರಣ ತನಿಖೆ ಹಂತದಲ್ಲಿದ್ದು ಯಾವುದೇ ರೀತಿಯಲ್ಲಿ ನಕಾರಾತ್ಮಕ ಪ್ರಚಾರ ಮಾಡಬೇಡಿ ಎಂದು ಅವರ ಪರ ವಕೀಲರು ಮಾಧ್ಯಮ ಪ್ರತಿನಿಧಿಗಳಿಗೆ ಮನವಿ ಮಾಡಿದ್ದಾರೆ. ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಬಂದಿಳಿದ ಪ್ರಜ್ವಲ್ ರೇವಣ್ಣ ಅವರನ್ನು ಬಂಧಿಸಿ ಬೆಂಗಳೂರಿನ ಸಿಐಡಿ ಕಚೇರಿಗೆ ಕರೆತರಲಾಗಿತ್ತು.



ಉದಯವಾಹಿನಿ ಚಿತ್ರ

ಈ ಬಗ್ಗೆ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಪ್ರಜ್ವಲ್ ಪರ ವಕೀಲ ಅರುಣ್, 'ಅನವಶ್ಯಕವಾಗಿ ಯಾವುದೇ ಋಣಾತ್ಮಕ ಪ್ರಚಾರ ಬೇಡ. ಪ್ರಜ್ವಲ್ ರೇವಣ್ಣ ಅವರು ಎಸ್ಐಟಿಗೆ ಸಹಕರಿಸಲು ಮುಂದಾಗಿದ್ದಾರೆ. ಎಸ್ಐಟಿಗೂ ಮುನ್ನ ಬೆಂಗಳೂರಿಗೆ ಬಂದಿರುವ ಅವರ ಸಂಪೂರ್ಣ ಉದ್ದೇಶ ತಮ್ಮ ಮಾತಿಗೆ ಬದ್ಧವಾಗಿರಬೇಕು ಎಂಬುದು, ಅವರು ತನಿಖೆಗೆ ಸಂಪೂರ್ಣ ಸಹಕರಿಸುತ್ತಾರೆ ಎಂದರು.

# ಅನಧಿಕೃತ ಜಾಹೀರಾತು ಕಂಡ ಕೂಡಲೇ ಕರೆ ಮಾಡಿ

## ರಾಜಧಾನಿ ಬೆಂಗಳೂರಿನಲ್ಲಿ ಅನಧಿಕೃತ ಫ್ಲೆಕ್ಸ್, ಬ್ಯಾನರ್, ಬಂಟಿಂಗ್ಸ್, ಭಿತ್ತಿಪತ್ರಗಳು ಸೇರಿದಂತೆ ಇನ್ನಿತರೆ ಜಾಹೀರಾತುಗಳ ತೆರವು

• ಉದಯವಾಹಿನಿ, ಬೆಂಗಳೂರು

ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಅನಧಿಕೃತ ಫ್ಲೆಕ್ಸ್, ಬ್ಯಾನರ್, ಬಂಟಿಂಗ್ಸ್, ಭಿತ್ತಿಪತ್ರಗಳು ಸೇರಿದಂತೆ ಇನ್ನಿತರೆ ಜಾಹೀರಾತುಗಳ ತೆರವು ಹಾಗೂ ಅವುಗಳನ್ನು ನಿಯಂತ್ರಿಸಲು 'ಜಾಹೀರಾತು ಮುಕ್ತ ಅಭಿಯಾನ'ವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಆರಂಭಿಸಿದೆ.

ಪಾಲಿಕೆಯ ವ್ಯಾಪ್ತಿಯಲ್ಲಿ ಪ್ರಸ್ತುತ ಜಾರಿಯಲ್ಲಿರುವ 'ಪಾಲಿಕೆಯ ಹೊರಾಂಗಣ ಜಾಹೀರಾತು ಫಲಕ ಮತ್ತು ಸಾರ್ವಜನಿಕ ಸಂದೇಶದ ಉಪ ವಿಧಿಗಳು-2018ರಲ್ಲಿ, ಅಂಗಡಿ ಮುಂಗಟ್ಟು ಜಾಹೀರಾತುಗಳು,ವಾಹನ ಸ್ವ-ಜಾಹೀರಾತು ಇನ್ನಿತ ರೆ ಸಣ್ಣಪುಟ್ಟ ಜಾಹೀರಾತುಗಳನ್ನು ಸೀಮಿತ ಅವಧಿಗೆ ಮತ್ತು ಸೀಮಿತ ಅಳತೆಗೆ (ಪಿಪಿಪಿ ಯೋಜನೆಗಳು ಸೇರಿದಂತೆ) ಅನುಮತಿಸಲು ಮಾತ್ರ ಅವಕಾಶವಿದೆ.

ಇವುಗಳನ್ನು ಹೊರತುಪಡಿಸಿ ಇತರೆ ಯಾವುದೇ ವಸತಿ ಪ್ರದೇಶಗಳಲ್ಲಿ, ಖಾಸಗಿ ಸ್ವತ್ತುಗಳಲ್ಲಿ ಜಾಹೀರಾತು ಫಲಕಗಳನ್ನು ಅಳವಡಿಸಿ ವಾಣಿಜ್ಯ ಜಾಹೀರಾತುಗಳನ್ನು ಪ್ರದರ್ಶನ, ಎಲ್ಇಡಿ ಜಾಹೀರಾತು ಪ್ರದರ್ಶನ ಹಾಗೂ ಸಾರ್ವಜನಿಕ ಮತ್ತು ವೈಯಕ್ತಿಕ ಜಾಹೀರಾತುಗಳು, ಶುಭಾಶಯಗಳು, ಸಭೆ ಸಮಾರಂಭಗಳು ಕುರಿತ ಜಾಹೀರಾತು, ಪ್ರಕಟಣೆಗಳ ಫ್ಲೆಕ್ಸ್, ಬ್ಯಾನರ್, ಬಂಟಿಂಗ್ಸ್, ಭಿತ್ತಿಪತ್ರ, ಬಾವುಟಗಳು ಇತ್ಯಾದಿ ಅಳವಡಿಸುವುದನ್ನು ನಿಷೇಧಿಸಲಾಗಿದೆ. ಆದರೂ ಕೂಡ ಮತ್ತೆ ಮತ್ತೆ ಅಳವಡಿಸುತ್ತಿರುವುದರಿಂದ ಸಾರ್ವಜನಿಕ ಸುಗಮ ಸಂಚಾರಕ್ಕೆ ಅಡ್ಡಿಯಾಗುತ್ತಿದೆ.



ಉದಯವಾಹಿನಿ ಚಿತ್ರ

**ಮುನೀಶ್ ಮೌದ್ಗಿಲ್ ಮನವಿ**

ಈ ಸಂಬಂಧ ಬಿಬಿಎಂಪಿಯ ಅನಧಿಕೃತ ನಾನಾ ಜಾಹೀರಾತುಗಳನ್ನು ನಿಯಂತ್ರಿಸುವ ಮುಕ್ತ ಅಭಿಯಾನಕ್ಕೆ ನಾಗರೀಕರಲು ಕೈ ಜೋಡಿಸಿ ಬೆಂಬಲಿಸಲು ಪಾಲಿಕೆಯ ಕಂದಾಯ ವಿಭಾಗದ ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್ ರವರು ಮನವಿ ಮಾಡಿದ್ದಾರೆ.

ಅಲ್ಲದೇ, ನಗರದ ಸೌಂದರ್ಯ ಹಾಳಾಗುತ್ತಿದೆ ಮತ್ತು ಪರಿಸರಕ್ಕೆ ಮಾರಕವಾಗಿದೆ. ಪರಿಸರ(ಸಂರಕ್ಷಣೆ), ಕಾಯಿದೆ 1986ರ ಸೆಕ್ಷನ್ 5ರ ಅಡಿಯಲ್ಲಿ ಅಧಿಕಾರ ಚಲಾಯಿಸಿ ಪ್ಲಾಸ್ಟಿಕ್ ಬಳಸುವುದನ್ನು ನಿಷೇದಿಸಲಾಗಿದೆ. ಆದ್ದರಿಂದ ನಗರದ ವಸತಿ ಪ್ರದೇಶಗಳಲ್ಲಿ, ಖಾಸಗಿ ಸ್ವತ್ತುಗಳಲ್ಲಿ, ಅನಧಿಕೃತ ವಾಣಿಜ್ಯ ಜಾಹೀರಾತುಗಳು, ಫ್ಲೆಕ್ಸ್, ಬ್ಯಾನರ್, ಬಂಟಿಂಗ್ಸ್, ಭಿತ್ತಿಪತ್ರಗಳು, ಇನ್ನಿತರೆ ಮುದ್ರಣ ಪ್ರಕಟಣೆ/ಜಾಹೀರಾತು ಹಾಗೂ ಖಾಸಗಿ ಸ್ವತ್ತುಗಳಲ್ಲಿ ಅಳವಡಿಸಿರುವ ವಾಣಿಜ್ಯ ಜಾಹೀರಾತುಗಳು, ಬೃಹತ್ ಎಲ್ಇಡಿ ಜಾಹೀರಾತುಗಳು, ಸೈಕಲ್ ಜಾಹೀರಾತುಗಳು, ವಾಣಿಜ್ಯ ಜಾಹೀರಾತುಗಳು, ವಾಹನ ಜಾಹೀರಾತುಗಳು ಇತರೆ ಜಾಹೀರಾತುಗಳು ಕಂಡು ಬಂದಲ್ಲಿ ಕೇಂದ್ರ ಕಚೇರಿ ಹಾಗೂ ಆಯಾ ವಲಯಗಳ ಕಚೇರಿಗಳಿಗೆ ಮಾಹಿತಿ ನೀಡುವಂತ ಬಿಬಿಎಂಪಿ ನಾಗರೀಕರಲ್ಲಿ ಮನವಿ ಮಾಡಿಕೊಂಡಿದೆ.

**ಮಹದೇವಪುರ ವಲಯ ನಿಯಂತ್ರಣ ಕೊಠಡಿ:** 080-28512300 / 28512301 **ಯಲಹಂಕ ವಲಯ ನಿಯಂತ್ರಣ ಕೊಠಡಿ:** 080-23636671 / 22975936 **ದಾಸರಹಳ್ಳಿ ವಲಯ ನಿಯಂತ್ರಣ ಕೊಠಡಿ:** 080-28394909 / 28393688

### ದಂಡ ವಿಧಿಸಿ ತಕ್ಷಣವೇ ತೆರವು

ಮಾಹಿತಿ ನೀಡಿದಂತಹ ಸ್ಥಳದಲ್ಲಿ ಯಾವುದೇ ಅನಧಿಕೃತ ಜಾಹೀರಾತು ಪ್ರದರ್ಶನ ಮತ್ತು ಜಾಹೀರಾತು ಫಲಕಗಳನ್ನು ಪಾಲಿಕೆಯು ಸಂಬಂಧಪಟ್ಟವರಿಗೆ ದಂಡ ವಿಧಿಸಿ ತಕ್ಷಣವೇ ತೆರವುಗೊಳಿಸುತ್ತಾರೆ. ಅಲ್ಲದೇ, ಇದಕ್ಕೆ ಸಂಬಂಧಿಸಿದಂತೆ ಅಪರಾಧ ಎಸಗಿರುವವರಿಗೆ ಕರ್ನಾಟಕ ಮುಕ್ತ ಸ್ಥಳಗಳ (ವಿರೂಪಗೊಳಿಸುವಿಕೆ ತಡೆ) ಕಾಯ್ದೆ 1981ರ ಅಡಿಯಲ್ಲಿ ಅವರ ವಿರುದ್ಧ ಎಫ್ಐಆರ್ ದಾಖಲು ಮಾಡಿ, ಕಾನೂನು ರೀತಿಯ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದೆ.

### ಅನಧಿಕೃತ ಜಾಹೀರಾತುಗಳ ಕುರಿತು ದೂರು ನೀಡಲು ಈ ಸಂಖ್ಯೆಗೆ ಕರೆ ಮಾಡಿ...

| | |
|---|---|
| ಉಪ ಆಯುಕ್ತರು(ಜಾಹೀರಾತು) | 9480683939 |
| ಕೇಂದ್ರ ಕಛೇರಿ | 080-22221188 |
| ನಿಯಂತ್ರಣ ಕೊಠಡಿ ಐಪಿಪಿ | 080-22660000 |
| ಪೂರ್ವ ವಲಯ ನಿಯಂತ್ರಣ ಕೊಠಡಿ | 080-22975803 / 22975502 |
| ಪಶ್ಚಿಮ ವಲಯ ನಿಯಂತ್ರಣ ಕೊಠಡಿ | 080-23561692 / 23463366 |
| ದಕ್ಷಿಣ ವಲಯ ನಿಯಂತ್ರಣ ಕೊಠಡಿ | 080-26566362 / 22975703 |
| ರಾಜರಾಜೇಶ್ವರಿ ನಗರ ವಲಯ ನಿಯಂತ್ರಣ ಕೊಠಡಿ | 080-28601851 / 28600957 |
| ಬೊಮ್ಮನಹಳ್ಳಿ ವಲಯ ನಿಯಂತ್ರಣ ಕೊಠಡಿ | 080-25732447 / 25735642 |

# ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರ ನಿಯಮ ಉಲ್ಲಂಘನೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರ ನಿಯಮ ಉಲ್ಲಂಘನೆ ಹೆಚ್ಚಾಗುತ್ತಿದ್ದು, ಪ್ರತಿ ಗಂಟೆಗೆ 100ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗುತ್ತಿವೆ. ಕಳೆದ 28 ದಿನಗಳಲ್ಲಿ ಒಟ್ಟು 74,915 ಪ್ರಕರಣಗಳು ದಾಖಲಾಗಿದ್ದು, 118 ಕಿ.ಮೀ ಉದ್ದದ ಹೆದ್ದಾರಿಯಲ್ಲಿ ಎರಡೂ ಬದಿಗಳಲ್ಲಿ ಅಳವಡಿಸಲಾಗಿರುವ 22 ಕ್ಯಾಮರಾಗಳು ದೃಶ್ಯಗಳನ್ನು ಸೆರೆ ಹಿಡಿದಿವೆ.

ಹೆಚ್ಚಿನ ಚಾಲಕರು, ಸಹ ಪ್ರಯಾಣಿಕರು ಸೀಟ್ ಬೆಲ್ಟ್ ಧರಿಸದೆ ಇರುವುದು ಕಂಡು ಬಂದಿದೆ. 57,057 ಪ್ರಕರಣಗಳು ಸೀಟ್ ಬೆಲ್ಟ್ ಧರಿಸದೆ ಇರುವುದು, 10,945 ಅತಿವೇಗದ ಪ್ರಕರಣಗಳು 6,046 ಲೇನ್ ಉಲ್ಲಂಘನೆ ಪ್ರಕರಣಗಳು ಮತ್ತು 494 ಪ್ರಕರಣಗಳು ಚಾಲನೆ ಮಾಡುವಾಗ ಮೊಬೈಲ್ ಫೋನ್ ಬಳಸಿದ ಪ್ರಕರಣಗಳಾಗಿವೆ.



ಉದಯವಾಹಿನಿ ಚಿತ್ರ

ಅಪಘಾತ ಹೆಚ್ಚಳದಿಂದಾಗಿ ಮತ್ತು NH-275 ನಲ್ಲಿ ಸಂಚಾರ ಉಲ್ಲಂಘನೆಗಳನ್ನು ತಡೆಯಲು ಪೊಲೀಸರು AI ಆಧಾರಿತ ಸ್ವಯಂಚಾಲಿತ ನಂಬರ್ ಪ್ಲೇಟ್ ರೆಕಗ್ನಿಷನ್ ಕ್ಯಾಮೆರಾಗಳನ್ನು ಪ್ರತಿ ದಿಕ್ಕಿನಲ್ಲಿ ಆರು ಸ್ಥಳಗಳಲ್ಲಿ ಅಳವಡಿಸಿದ್ದಾರೆ.

ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (NHAI) ಕೂಡ ಪ್ರತಿ ದಿಕ್ಕಿನಲ್ಲಿಯೂ ಐದು ಇತರ ಸ್ಥಳಗಳಲ್ಲಿ ವೀಡಿಯೊ ಕ್ಯಾಮೆರಾಗಳನ್ನು ಅಳವಡಿಸಿದೆ. 100 kmph ವೇಗದ ಮಿತಿಯನ್ನು ನಿಗದಿಪಡಿಸಿದೆ. ಈ ರೆಸಲ್ಯೂಶನ್ ಕ್ಯಾಮೆರಾಗಳಿಂದ ಸಂಚಾರ ಉಲ್ಲಂಘನೆಗಳು ಸ್ಪಷ್ಟವಾಗಿ ತಿಳಿದುಬರುತ್ತಿದೆ.

**ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ (ಸಂಚಾರ ಮತ್ತು ರಸ್ತೆ ಸುರಕ್ಷತೆ) ಅಲೋಕ್ ಕುಮಾರ್ ಮಾತನಾಡಿ, ಕೇವಲ 28 ದಿನಗಳಲ್ಲಿ 74,000 ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿರುವುದು ರಸ್ತೆ ಸುರಕ್ಷತೆಯ ಬಗ್ಗೆ ಜನರ ನಿರ್ಲಕ್ಷ್ಯವನ್ನು ತೋರಿಸುತ್ತದೆ. ಇದರಿಂದ ಅವರ ಪ್ರಾಣಕ್ಕಷ್ಟೇ ಅಲ್ಲದೆ, ಇತರರ ಪ್ರಾಣಕ್ಕೂ ಸಂಚಕಾರ ತರುತ್ತಿದ್ದಾರೆ. ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳು ಹೆಚ್ಚಾಗಿದ್ದರೂ ಅಪಘಾತ ಪ್ರಕರಣಗಳ ಸಂಖ್ಯೆ ಸ್ವಲ್ಪ ಪ್ರಮಾಣದಲ್ಲಿ ಕಡಿಮೆಯಾಗಿದೆ ಎಂದು ಹೇಳಿದ್ದಾರೆ.**

# ಬಿಬಿಎಂಪಿ ಗುತ್ತಿಗೆದಾರನ ವಿರುದ್ಧ ದೂರು ದಾಖಲು

• ಉದಯವಾಹಿನಿ, ಬೆಂಗಳೂರು

16 ವರ್ಷದ ನನ್ನ ಮಗಳ ಮೇಲೆ ಕಸ ವಿಂಗಡಣೆ ಗುತ್ತಿಗೆದಾರ ಅತ್ಯಾಚಾರ ನಡೆಸಿದ್ದಾನೆಂದು ಪಶ್ಚಿಮ ಬಂಗಾಳದ ವಲಸಿಗರೊಬ್ಬರು ಬೇಗೂರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.



ಪಶ್ಚಿಮ ಬಂಗಾಳದ ನೊಯ್ಡಾ ಜಿಲ್ಲೆಯ ನಿವಾಸಿಯಾದ ಬಾಲಕಿಯ ತಂದೆ ಶಹೀನ್ ಹಾಗೂ ಆತನ ಪತ್ನಿ ಮೀಮ್ ಅವರ ವಿರುದ್ಧ ದೂರು ದಾಖಲಿಸಿದ್ದಾರೆ.

ಬಾಲಕಿಯ ಕುಟುಂಬ ಶಹೀನ್ ಅವರಿಗಾಗಿ ಕೆಲಸ ಮಾಡಲು ನಗರಕ್ಕೆ ಬದಿತ್ತು. ಬಾಲಕಿ ಉಳಿದಿದ್ದ ಶೆಡ್ ಪಕ್ಕದಲ್ಲಿಯೇ ಶಹೀನ್ ಕುಟುಂಬದ ಶೆಡ್ ಕೂಡ ಇತ್ತು. ಮೇ.17ರ ರಾತ್ರಿ ಶಹೀನ್ ಪತ್ನಿ ಮೀಮ್ ಮಧ್ಯರಾತ್ರಿ 12.30ರ ಸುಮಾರಿಗೆ ಬಾಲಕಿಗೆ ಟೀ ಮಾಡುವಂತೆ ತಿಳಿಸಿದ್ದಾಳೆ. ಈ ವೇಳೆ ಬಾಲಕಿ ಶೆಡ್ ಒಳಗೆ ಹೋದಾಗ ಮೀಮ್ ಹೊರಗಿಂದ ಬಾಗಿಲನ್ನು ಲಾಕ್ ಮಾಡಿದ್ದಾಳೆ. ಬಾಲಕಿಯ ಪ್ರತಿರೋಧದ ನಡುವೆಯೂ ಶಾಹೀನ್ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾನೆಂದು ದೂರಿನಲ್ಲಿ ತಿಳಿಸಲಾಗಿದೆ.

ನನ್ನ ಬೆಳಿಗ್ಗೆ ಇಂದು ಬೆಳಿಗ್ಗೆ ಘಟನೆ ಬಗ್ಗೆ ತಿಳಿಸಿದಳು. ಕೂಡಲೇ ನಾವು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದವು.

ಎಫ್ಐಆರ್ ದಾಖಲಾಗಿದ್ದರೂ ಪೊಲೀಸರು ಸ್ಥಳಕ್ಕೆ ಬರುವಷ್ಟರಲ್ಲಿ ಆರೋಪಿಗಳು ಸ್ಥಳದಿಂದ ಪರಾರಿಯಾಗಿದ್ದಾರೆ. ಮೀಮ್ ಮೇಲೆ ಪೊಲೀಸರು ಎಫ್ಐಆರ್ ದಾಖಲಿಸಬೇಕೆಂದು ನಾವು ಬಯಸಿದ್ದೆವು ಆದರೆ ಪೊಲೀಸರು ಒಪ್ಪಲಿಲ್ಲ. ಆರೋಪಿಯ ಸಹೋದರ ಹಸನ್ ನಮಗೆ ಹಣ ನೀಡುತ್ತೇನೆ, ದೂರು ಹಿಂಪಡೆಯಿರಿ ಎಂದು ಒತ್ತಡ ಹೇರುತ್ತಿದ್ದಾರೆ. ನಮಗೆ ನ್ಯಾಯ ಬೇಕು ಎಂದು ಸಂತ್ರಸ್ತೆ ಬಾಲಕಿ. ತಂದೆ ಹೇಳಿದ್ದಾರೆ.

**ಘಟನೆಯ ಬಗ್ಗೆ ಪ್ರತಿಕ್ರಿಯೆ ನೀಡಿರುವ ಪೊಲೀಸರು ಆರೋಪಿಯ ವಿರುದ್ಧ ಪೋಕ್ಸೊ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ, ಶೀಘ್ರದಲ್ಲೇ ಬಂಧಿಸಲಾಗುವುದು ಎಂದು ಹೇಳಿದ್ದಾರೆ.**

# ಶೀಘ್ರವೇ ಸಾರಿಗೆ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿ: ಸಿಎಂ ಸಿದ್ದರಾಮಯ್ಯ

• ಉದಯವಾಹಿನಿ, ಬೆಂಗಳೂರು

ನಮ್ಮ ಸರ್ಕಾರ ಬಂದೊಡನೆಯೇ ನೇಮಕಾತಿ ಪ್ರಕ್ರಿಯೆಗಳಿಗೆ ಚಾಲನೆ ನೀಡಿದ್ದು, ಈಗಾಗಲೇ 1,650 ಚಾಲಕ/ ನಿರ್ವಾಹಕರು ಹಾಗೂ 250 ತಾಂತ್ರಿಕ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆ. ಉಳಿದ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಭರದಿಂದ ಸಾಗಿದೆ, ಶೀಘ್ರದಲ್ಲೇ ಖಾಲಿಯಿರುವ ಹುದ್ದೆಗಳ ನೇಮಕಾತಿ ಮಾಡಲಾಗುತ್ತದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ನಾಲ್ಕು ಸಾರಿಗೆ ನಿಗಮಗಳಲ್ಲಿ ಕಳೆದ ಒಂದು ವರ್ಷದ ಅವಧಿಯಲ್ಲಿ 500 ಕ್ಕೂ ಹೆಚ್ಚು ಅನುಕಂಪದ ಆಧಾರದ ಮೇಲೆ ನೇಮಕಾತಿ ಪತ್ರವನ್ನು ಸಿಬ್ಬಂದಿಗಳ ಅವಲಂಬಿತರಿಗೆ ನೀಡಲಾಗಿದೆ. ಯುವಕರಿಗೆ ನಿರುದ್ಯೋಗ ಭಾಗ್ಯ ಕರುಣಿಸಿ, ಸಾರಿಗೆ ಸಂಸ್ಥೆಗಳನ್ನು ಅವನತಿಯತ್ತ ಕೊಂಡ್ಯೊಯ್ದ ಹೆಗ್ಗಳಿಕೆ ತಮ್ಮದೇ ಅಲ್ಲವೇ ಆರ್ ಅಶೋಕ್ ಅವರೇ?

ನಾವು ನುಡಿದಂತೆ ನಡೆಯುವವರು, ತಮ್ಮಂತೆ ಬರೀ ಭಾಷಣದಲ್ಲಿ ಕೋಟಿ ಕೋಟಿ ಉದ್ಯೋಗ ಭಾಗ್ಯ ಕರುಣಿಸಿ, ಯುವಜನರನ್ನು ಶೋಷಿಸುವ ಕಾರ್ಯ ಮಾಡಿಲ್ಲ. ಸಾರಿಗೆ ಸಂಸ್ಥೆಗಳಲ್ಲಿ ಕಳೆದ 5 ವರ್ಷಗಳಲ್ಲಿ ಹೊಸ ಬಸ್ಸುಗಳ ಸೇರ್ಪಡೆ ಮಾಡದೇ, ಡಕೋಟ ಬಸ್ಸುಗಳನ್ನು ದಯಪಾಲಿಸಿರುವ ನೀವು ಮಾತನಾಡುವ ಪರಿಗೆ ವಿಷಾದವಲ್ಲದೇ ಮತ್ತೇನು ವ್ಯಕ್ತಪಡಿಸಲು ಸಾಧ್ಯ, ತಮ್ಮ ಬೇಜಾವಬ್ದಾರಿ, ಆಧಾರರಹಿತ, ತಪ್ಪು ಹೇಳಿಕೆಗಳಿಗೆ ಸಂತಾಪ ಸೂಚಿಸುತ್ತಾ ನಿಮಗೆ ನೀವು ನಂಬಿರುವ ದೇವರು ಸತ್ಯ ಹೇಳುವ ಸದ್ಬುದ್ಧಿಯನ್ನು ಕರುಣಿಸಲು ಎಂದು ಹಾರೈಸುತ್ತೇನೆ.



ಉದಯವಾಹಿನಿ ಚಿತ್ರ

# ನಾಲ್ವರು ಐಎಎಸ್ ಅಧಿಕಾರಿಗಳಿಗೆ ಹೆಚ್ಚುವರಿ ಹೊಣೆಗಾರಿಕೆ ನೀಡಿ ಆದೇಶ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರದಿಂದ ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸೋ ಸಲುವಾಗಿ, ನಾಲ್ವರು ಐಎಎಸ್ ಅಧಿಕಾರಿಗಳಿಗೆ ಹೆಚ್ಚುವರಿ ಹೊಣೆಗಾರಿಕೆ ನೀಡಿ ಮಾಡಿ ಆದೇಶ ಹೊರಡಿಸಿದೆ.

ರಾಜ್ಯ ಸರ್ಕಾರದಿಂದ ಅಧಿಸೂಚನೆ ಹೊರಡಿಸಲಾಗಿದ್ದು, ಡಾ.ಶಾಲಿನಿ ರಜನೀಶ್, ಐಎಎಸ್ (ಕೆಎನ್: 1989) ಬೆಂಗಳೂರು ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಅವರನ್ನು 31. 05.2024 ರಂದು ಐಎಎಸ್ ರಾಕೇಶ್ ಸಿಂಗ್ ಅವರ ನಿವೃತ್ತಿಯಿಂದ ತೆರವಾದ ಬೆಂಗಳೂರು ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಹುದ್ದೆಗೆ ಸಮವರ್ತಿ ಉಸ್ತುವಾರಿಯಾಗಿ ಇರಿಸಲಾಗಿದೆ ಎಂದಿದೆ.

**ರಾಜ್ಯ ಸರ್ಕಾರದಿಂದ ಅಧಿಸೂಚನೆ**

ಉಮಾಶಂಕರ್ ಎಸ್.ಆರ್., ಐಎಎಸ್ (ಕೆ.ಎನ್: 1993) ಬೆಂಗಳೂರು ಗೃಹ ಇಲಾಖೆಯ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ರಾಕೇಶ್ ಸಿಂಗ್ ಅವರು ದಿನಾಂಕ 31.05.2024 ರಂದು ನಿವೃತ್ತರಾದ ನಂತರ ತೆರವಾದ ಬೆಂಗಳೂರು ನಗರಾಭಿವೃದ್ಧಿ ಇಲಾಖೆಯ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಹುದ್ದೆಯ ಸಮವರ್ತಿ ಉಸ್ತುವಾರಿಯನ್ನು ವಹಿಸಲಾಗಿದೆ ಎಂದು ತಿಳಿಸಿದೆ.



ಗೌರವ್ ಗುಪ್ತಾ, ಐಎಎಸ್ (ಕೆಎನ್: 1990) ಬೆಂಗಳೂರು ಇಂಧನ ಇಲಾಖೆಯ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಶ್ರೀ ಗೌರವ್ ಗುಪ್ತಾ ಅವರನ್ನು 31.05.2024 ರಂದು ಐಎಎಸ್ ಅಧಿಕಾರಿ ರಾಕೇಶ್ ಸಿಂಗ್ ಅವರ ನಿವೃತ್ತಿಯಿಂದ ತೆರವಾದ ಬೆಂಗಳೂರಿನ ಜಲಸಂಪನ್ಮೂಲ ಇಲಾಖೆಯ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಹುದ್ದೆಗೆ ಸಮವರ್ತಿ ಉಸ್ತುವಾರಿಯಲ್ಲಿ ಇರಿಸಲಾಗಿದೆ ಎಂದಿದೆ. ರಶ್ಮಿ ಮಹೇಶ್ ವಿ., ಐಎಎಸ್ (ಕೆಎನ್: 1996) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ, ಭೂಮಿ ಮತ್ತು ಯುಪಿಒಆರ್), ಬೆಂಗಳೂರು 31.05.2024 ರಂದು ನಿವೃತ್ತಿಯಾದ ನಂತರ ತೆರವಾದ ಬೆಂಗಳೂರಿನ ಕರ್ನಾಟಕ ಮೇಲ್ಮನವಿ ನ್ಯಾಯಮಂಡಳಿಯ ಅಧ್ಯಕ್ಷರ ಹುದ್ದೆಯ ಸಮವರ್ತಿ ಉಸ್ತುವಾರಿಯಲ್ಲಿ ಇರಿಸಲಾಗಿದೆ ಎಂದು ಹೇಳಿದೆ.

# ವಾಲ್ಮೀಕಿ ನಿಗಮದ ಪ್ರಕರಣ ಸಿಬಿಐಗೆ ನೀಡಿ

## ■ ಬ್ಯಾಂಕ್‌ನವರು ಸಿಬಿಐಗೆ ದೂರು ನೀಡಿರುವ ಕುರಿತು ಮಾಧ್ಯಮದವರು ಕೇಳಿದ ಪ್ರಶ್ನೆ

• ಉದಯವಾಹಿನಿ, ಬೆಂಗಳೂರು

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಅಕ್ರಮ ಹಣ ವರ್ಗಾವಣೆ ಆರೋಪ ಪ್ರಕರಣವನ್ನು ನಾವಾಗಿಯೇ ಸಿಬಿಐಗೆ ವಹಿಸುವುದಿಲ್ಲ ಎಂದು ಗೃಹ ಸಚಿವ ಪರಮೇಶ್ವರ ಅವರು ತಿಳಿಸಿದರು.

ಈ ಕುರಿತು ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಬ್ಯಾಂಕ್‌ನವರು ಸಿಬಿಐಗೆ ದೂರು ನೀಡಿರುವ ಕುರಿತು ಮಾಧ್ಯಮದವರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು ನೂರು ಕೋಟಿ ರೂ.

ಮೇಲು ಹಗರಣಗಳಾದಾಗ ಪ್ರಕರಣ ಸಿಬಿಐಗೆ ವರ್ಗಾವಣೆಯಾಗುತ್ತದೆ. ಈಗ ಸಿಐಡಿಯವರು ತನಿಖೆ ಆರಂಭಿಸಿದ್ದಾರೆ. ನೂರು ಕೋಟಿ ರೂ. ಅಧಿಕ ಅಕ್ರಮ ನಡೆದಿದೆಯೋ, ಏನಾಗಿದೆ ಎಂಬುದು ಸಿಐಡಿ ತನಿಖೆಯಿಂದ ಗೊತ್ತಾಗಲಿದೆ. ನೂರು ಕೋಟಿ ರೂ. ಮೇಲು ಅಕ್ರಮವಾಗಿದ್ದರೆ ಮುಂದೆ ಏನು ಆಗುತ್ತದೆ ಎಂಬುದನ್ನು ನೋಡೋಣ. ನಾವಾಗಿಯೇ ಸಿಬಿಐಗೆ ವರ್ಗಾವಣೆ ಮಾಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಸಿಎಂ ಜೊತೆ ಚರ್ಚೆ ಕುರಿತು ಪ್ರತಿಕ್ರಿಯಿಸಿ, ನಾವು ಸಿಬಿಐಗೆ ವರ್ಗಾವಣೆ ಮಾಡುವುದಿಲ್ಲ. ಅಂತಹ ಸಂದರ್ಭ ಬಂದಾಗ ಸಿಎಂ ಜೊತೆ ಚರ್ಚೆ ಮಾಡಲೇ ಬೇಕಾಗುತ್ತದೆ. ಪ್ರತಿಭಟನೆ ಮಾಡುವುದು ಗಡವು ನೀಡುವುದು ವಿಪಕ್ಷದವರ ಹಕ್ಕು, ಮಾಡಲಿ. ಸರ್ಕಾರದಲ್ಲಿ ನಮಗೆ ಆದಂತಹ ಜವಾಬ್ದಾರಿಗಳಿವೆ. ನಾ ನಿಟ್ಟಿನಲ್ಲಿ ಕೆಲಸ ಮಾಡುತ್ತೇವೆ ಎಂದರು. ಪ್ರಜ್ವಲ್ ರೇವಣ್ಣ ಬಂಧನದ ನಂತರ ಪ್ರಕರಣದ ಕುರಿತು ಅಧಿಕಾರಿಗಳ ಜೊತೆ ಯಾವುದೇ ರೀತಿಯ ಚರ್ಚೆ ಮಾಡಿಲ್ಲ. ಚಂದ್ರಶೇಖರ್ ಕುಟುಂಬಕ್ಕೆ ಸಾಂತ್ವಾನ ಹೇಳಲು ನಿನ್ನೆ ಶಿವಮೊಗ್ಗಕ್ಕೆ ಹೋಗಿದ್ದೆ. ತಡವಾಗಿ ಬಂದ ಹಿನ್ನೆಲೆಯಲ್ಲಿ ಚರ್ಚಿಸಲು ಸಾಧ್ಯವಾಗಿಲ್ಲ. ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳುತ್ತಾರೆ. ನ್ಯಾಯಾಧೀಶರ ಮುಂದೆ ಹಾಜರುಪಡಿಸಿ, ವಿಚಾರಣೆಗಾಗಿ ಕಸ್ಟಡಿಗೆ ತೆಗೆದುಕೊಳ್ಳುವ ಪ್ರಕ್ರಿಯೆಯನ್ನು ಎಸ್ಐಟಿ ನೋಡಿಕೊಳ್ಳುತ್ತದೆ ಎಂದು ತಿಳಿಸಿದರು. ಪ್ರಜ್ವಲ್ ಬಂಧನವಾಗಲು ತಡವಾಗಿದ್ದರಿಂದ ಸಾಕಷ್ಟು ಸಂತ್ರಸ್ತೆಯರು ದೂರು ಕೊಡಲು ಮುಂದೆ ಬಂದಿರಲಿಲ್ಲ. ಈಗ ಪ್ರಜ್ವಲ್ ಬಂಧನವಾಗಿದೆ. ಸಂತ್ರಸ್ತೆಯರಲ್ಲಿ ಏನಾದರು ಮನವಿ ಮಾಡುತ್ತೀರ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿ, ಯಾರಿಗೆ ತೊಂದರೆ ಆಗಿದೆ ಅವರು ಪೊಲೀಸರ ಮುಂದೆ ಬಂದು ದೂರು ಕೊಡಬಹುದು. ಎಸ್ಐಟಿ ಮುಂದೆ ಹೇಳಬಹುದು ಎಂದು ಮೊದಲೇ ತಿಳಿಸಲಾಗಿದೆ. ಅಂತವರಿಗೆ ಎಲ್ಲಾ ರೀತಿಯ ರಕ್ಷಣೆ ಕೊಡುತ್ತೇವೆ ಎಂಬುದನ್ನು ಹೇಳಿದ್ದೇವೆ. ಸಂತ್ರಸ್ತೆಯರಿಗಾಗಿ ತೆರಯಲಾದ ಸಹಾಯವಾಣಿ ವಿಚಾರದ ಕುರಿತು ಹೆಚ್ಚು ತಿಳಿದುಕೊಳ್ಳಲು ಹೋಗಿಲ್ಲ. ಕೆಲವು ವಿಚಾರವನ್ನು ಎಸ್ಐಟಿಯವರು ಗೌಪ್ಯವಾಗಿ ಇಟ್ಟುಕೊಳ್ಳುತ್ತಾರೆ. ಅಂತಹ ವಿಚಾರಗಳ ಬಗ್ಗೆ ಹೆಚ್ಚಿಗೆ ತಿಳಿದುಕೊಳ್ಳುವುದಿಲ್ಲ ಹೋಗಲ್ಲ ಎಂದು ಹೇಳಿದರು. ಪ್ರಜ್ವಲ್ ಬಂಧನ ಪ್ರಕ್ರಿಯೆ ವಿಳಂಬದ ಕುರಿತು ಪ್ರತಿಕ್ರಿಯಿಸಿ, ಪ್ರಜ್ವಲ್ ನಮ್ಮ ದೇಶದಲ್ಲಿ ಅಥವಾ ಯಾವದಾದರು ರಾಜ್ಯದಲ್ಲಿದ್ದರು, ಸಹ ನಮ್ಮ ತಂಡವನ್ನು ಕಳುಹಿಸಿ ಕರೆದುಕೊಂಡು ಬರಬಹುದಿತ್ತು. ಹೊರ ದೇಶದಲ್ಲಿದ್ದ ಕಾರಣಕ್ಕಾಗಿ, ಬಂಧಿಸಲು ಅದಕ್ಕೆ ಆದಂತಹ ಪ್ರಕ್ರಿಯೆಗಳಿವೆ. ಇಲ್ಲಿಂದ ನಾಲ್ಕು ಜನ ಇನ್ಸ್ಪೆಕ್ಟರ್‌ಗಳನ್ನು ಅಥವಾ ಹಿರಿಯ ಅಧಿಕಾರಿಗಳನ್ನು ಕಳುಹಿಸಿ ಎತ್ತಾಕಿಕೊಂಡು ಬನ್ನಿ ಅಂತ ಹೇಳೋಕೆ ಆಗಲ್ಲ, ನಮ್ಮ ದೇಶಕ್ಕು ಬೇರೆ ದೇಶಕ್ಕು ರಾಜತಾಂತ್ರಿಕ ಒಪ್ಪಂದಗಳಿರುತ್ತವೆ. ಇಂತಹ ಸಂದರ್ಭದಲ್ಲಿ ಅದನ್ನೆಲ್ಲ ಪಾಲಿಸಬೇಕಾಗುತ್ತದೆ. ಸಿಬಿಐ ಮೂಲಕ ಇಂಟರ್‌ಪೋಲ್‌ನವರಿಗೆ ನೋಟಿಸ್ ಕಳುಹಿಸಿ, ಅಲ್ಲಿಂದ ಬ್ಲೂ ಕಾರ್ನರ್ ನೋಟಿಸ್ ಜಾರಿಗೊಳಿಸುವ ಪ್ರಕ್ರಿಯೆಯನ್ನು ಮಾಡಲಾಗಿತ್ತು ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

**ಗೃಹ ಸಚಿವ ಪರಮೇಶ್ವರ ಹೇಳಿಕೆ**

**ಎಸ್ಐಟಿ ತಂಡ ಕೈಗೊಂಡಿದ್ದ ಕಾನೂನು ಪ್ರಕ್ರಿಯೆಗಳ ಕುರಿತು ತಿಳಿದಕೊಂಡಿದ್ದ ಪ್ರಜ್ವಲ್ 31ರಂದು ಬರುವುದಾಗಿ ಹೇಳಿದ್ದರು. ಫಲಿತಾಂಶ ಬೇರೆ ರೀತಿಯಲ್ಲಿ ಬಂದರೆ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದಾಗುತ್ತದೆ. ಇದನ್ನೆಲ್ಲ ಅರ್ಥ ಮಾಡಿಕೊಂಡು ಶರಣಾಗುತ್ತೇನೆ ಅಂತ ಹೇಳಿದ್ದರು ಅನ್ನಿಸುತ್ತದೆ ಎಂದು ಅಭಿಪ್ರಾಯಪಟ್ಟರು -ಪರಮೇಶ್ವರ್**

**ಕೆ.ಆರ್.ನಗರ ಸಂತ್ರಸ್ತೆ ಕಿಡ್ನ್ಯಾಪ್ ಕೇಸ್‌ನಲ್ಲಿ ಸಾ.ರಾ.ಮಹೇಶ್ ಕೈವಾಡ ಕುರಿತು ಪ್ರತಿಕ್ರಿಯಿಸಿ, ಸಾ.ರಸ.ಮಹೇಶ್ ಹೆಸರು ಮಾಧ್ಯಮದಲ್ಲಿ ಬಂದಿರುವುದನ್ನು ನೋಡಿದ್ದೇನೆ. ಮೊದಲ ಬಾರಿಗೆ ಸಾ.ರಾ.ಮಹೇಶ್ ಹೆಸರು ಕೇಳಿ ಬಂದಿದೆ. ಈ ಬಗ್ಗೆ ತಿಳಿದುಕೊಳ್ಳುತ್ತೇನೆ ಎಂದು ಹೇಳಿದರು. ಯಾಗ ಮಾಡುವುದರಿಂದ ಸರ್ಕಾರ ಬೀಳುವುದು, ಸರ್ಕಾರ ಬರುವುದಾಗಿದ್ದರೆ, ಈ ದೇಶದಲ್ಲಿ ಬಹಳ ಜನ ಯಾಗ ಮಾಡಿಕೊಂಡು ಕುಳಿತಿರಬೇಕಾಗುತ್ತಿತ್ತು ಎಂದರು.**

# ವಾಹನ ಸವಾರರೇ ನೀವಿನ್ನೂ

## ಎಚ್ಎಸ್ಆರ್‌ಪಿ ನಂಬರ್ ಪ್ಲೇಟ್ ಹಾಕಿಸಿಲ್ವಾ?

• ಉದಯವಾಹಿನಿ, ಬೆಂಗಳೂರು

ಹಳೇ ವಾಹನಗಳಿಗೆ ಅತಿ ಸುರಕ್ಷಿತ ನೋಂದಣಿ ಫಲಕ (ಎಚ್ಎಸ್ಆರ್‌ಪಿ) ಅಳವಡಿಸಲು ಸಾರಿಗೆ ಇಲಾಖೆ ನೀಡಿದ ಗಡುವು ಹೈಕೋರ್ಟ್ ಆದೇಶದ ಅನ್ವಯ ಜೂನ್ 12ರವರೆಗೆ ಇರಲಿದೆ.

ಅದರ ಒಳಗೆ ಎಲ್ಲಾ ವಾಹನಗಳು ಹೊಸ ಫಲಕ ಅಳವಡಿಸಿಕೊಳ್ಳುವಂತೆ ಸಾರಿಗೆ ಇಲಾಖೆ ಸೂಚಿಸಿದೆ. 2019ರ ಏಪ್ರಿಲ್ 1ಕ್ಕಿಂತ ಹಿಂದಿನ ವಾಹನಗಳು ಎಚ್ಎಸ್ಆರ್‌ಪಿ ಅಳವಡಿಸಿಕೊಳ್ಳಬೇಕು. ರಾಜ್ಯದಲ್ಲಿ ಇಲ್ಲಿಯವರೆಗೆ ಸುಮಾರು 45 ಲಕ್ಷ ವಾಹನಗಳು ಎಚ್ಎಸ್ಆರ್‌ಪಿ ಅಳವಡಿಸಿಕೊಂಡಿದ್ದು, 1.55 ಕೋಟಿ ವಾಹನಗಳು ಇನ್ನೂ ಅಳವಡಿಸಿಕೊಂಡಿಲ್ಲ ಎಂದು ಮಾಹಿತಿ ನೀಡಿದೆ. ಹೈ ಸೆಕ್ಯೂರಿಟಿ ರಿಜಿಸ್ಟ್ರೇಷನ್ ಪ್ಲೇಟ್ ವಾಹನಗಳ ಸುರಕ್ಷತೆಗಾಗಿ ಈ ಪ್ಲೇಟ್ ಅಳವಡಿಕೆಯನ್ನ ಕಡ್ಡಾಯ ಮಾಡಲಾಗಿದೆ.



ಕರ್ನಾಟಕ ರಾಜ್ಯದಲ್ಲಿ 1ನೇ ಏಪ್ರಿಲ್ 2019ಕ್ಕಿಂತ ಮೊದಲು ನೋಂದಾಯಿಸಲ್ಪಟ್ಟ ಹಳೆಯ ಎಲ್ಲಾ (ಹಳೆಯ / ಅಸ್ತಿತ್ವದಲ್ಲಿರುವ ವಾಹನಗಳು) (ದ್ವಿಚಕ್ರ, ತ್ರಿಚಕ್ರ ವಾಹನಗಳು, ಲಘು ಮೋಟಾರು ವಾಹನಗಳು, ಪ್ರಯಾಣಿಕ ಕಾರುಗಳು, ಮಧ್ಯಮ ಮತ್ತು ಭಾರಿ ವಾಣಿಜ್ಯ ವಾಹನಗಳು, ಟ್ರೈಲರ್, ಟ್ರ್ಯಾಕ್ಟರ್ ಇತ್ಯಾದಿ) ವಾಹನಗಳಿಗೆ ಅತಿ ಸುರಕ್ಷಿತ ನೋಂದಣಿ ಫಲಕಗಳನ್ನು (ಎಚ್ಎಸ್ಆರ್‌ಪಿ) ಅಳವಡಿಸುವುದು ಕಡ್ಡಾಯವಾಗಿದೆ.

ಏಪ್ರಿಲ್ 2019ಕ್ಕಿಂತ ಮೊದಲು ನೋಂದಣಿ ಮಾಡಿಸಿದ್ದ ಹಳೆಯ ವಾಹನಗಳಿಗೆ ಹೈ ಸೆಕ್ಯುರಿಟಿ ರಿಜಿಸ್ಟ್ರೇಷನ್ ನಂಬರ್ ಪ್ಲೇಟ್ (ಎಚ್ಎಸ್ಆರ್‌ಪಿ) ಅವಳಡಿಕೆ ಕಡ್ಡಾಯ ಮಾಡಿ ಸಾರಿಗೆ ಇಲಾಖೆ ಆದೇಶ ಹೊರಡಿಸಿತ್ತು. ಫೆಬ್ರವರಿ 17ರೊಳಗೆ ಹೆಚ್.ಎಸ್.ಆರ್.ಪಿ ನಂಬರ್ ಪ್ಲೇಟ್ ಅಳವಡಿಸುವಂತೆ ಡೆಡ್ ಲೈನ್ ನೀಡಿತ್ತು. ನಂತರ ಮೇ.31 ಕೊನೆಯ ದಿನಾಂಕ ನಿಗದಿಪಡಿಸಲಾಗಿತ್ತು. ಇದೀಗ ಜೂ.12 ರವರೆಗೆ ಸಮಯ ನಿಗದಿ ಮಾಡಲಾಗಿದೆ.

ಅಂತರಾಳದಿಂದ..
EDITORIAL

# ವಾಲ್ಮೀಕಿ ನಿಗಮದಲ್ಲಿ ನಡೆದ ಅವ್ಯವಹಾರ: ತಪ್ಪಿತಸ್ಥರ ಪತ್ತೆ ಹಚ್ಚಲಿ

ಭ್ರಷ್ಟಾಚಾರದಂತಹ ಪ್ರಕರಣಗಳಲ್ಲಿ ಶಿಕ್ಷೆಯಾಗುವ ಪ್ರಮಾಣ ತುಂಬಾ ಕಡಿಮೆ ಇರುವುದರಿಂದ ಅಧಿಕಾರಿಗಳು ಜನರ ದುಡ್ಡಿಗೆ ನಿರ್ಲಜ್ಜೆಯಿಂದ ಕೈಹಾಕುವ ಧೈರ್ಯ ಪ್ರದರ್ಶಿಸುತ್ತಿದ್ದಾರೆ. ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧೀಕ್ಷಕರೊಬ್ಬರ ದುರಂತ ಅಂತ್ಯದ ಮೂಲಕ. ನಿಗಮದಲ್ಲಿ ನಡೆದಿದೆ ಎನ್ನಲಾದ ರೂ.94.73 ಕೋಟಿ ಮೊತ್ತದ ಅವ್ಯವಹಾರವೊಂದು ಬಯಲಾಗಿದೆ. ಒಂದುವೇಳೆ, ಚಂದ್ರಶೇಖರನ್ ಅವರು ತಮ್ಮ ಸಾವಿಗೂ ಮುನ್ನ ಪತ್ರದಲ್ಲಿ ಬರೆಯದೇ ಹೋಗಿದ್ದರೆ ಈ ಅವ್ಯವಹಾರ ಹೊರಬರುತ್ತಿರಲಿಲ್ಲವೇನೋ. ನಿಗಮದಿಂದ ನಡೆದಿರುವ ಬ್ಯಾಂಕ್ ವ್ಯವಹಾರಗಳೇ ಗೊಂದಲಕಾರಿಯಾಗಿವೆ ಎನ್ನುವುದು ಮೇಲ್ನೋಟಕ್ಕೆ ಸ್ಪಷ್ಟ. ನಿಗಮವು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ಬೆಂಗಳೂರಿನ ವಸಂತನಗರ ಶಾಖೆಯಲ್ಲಿ ಅಧಿಕೃತ ಖಾತೆಯನ್ನು ಹೊಂದಿತ್ತು. ಇದೇ ಬ್ಯಾಂಕ್‌ನ ಎಂ.ಜಿ. ರಸ್ತೆಯ ಶಾಖೆಗೆ ಆ ಖಾತೆಯನ್ನು ವರ್ಗಾಯಿಸಿಕೊಂಡಿತು ಮತ್ತು ವಸಂತನಗರ ಶಾಖೆಯ ಖಾತೆಯಲ್ಲಿದ್ದ ರೂ.187 ಕೋಟಿ ಮೊತ್ತವನ್ನು ಹಂತ ಹಂತವಾಗಿ ಎಂ.ಜಿ. ರಸ್ತೆ ಶಾಖೆಯ ಹೊಸ ಖಾತೆಗೆ ವರ್ಗಾಯಿಸಲಾಯಿತು ಎಂದು ಹೇಳಲಾಗಿದೆ. ಒಂದೇ ಬ್ಯಾಂಕ್‌ನ ಒಂದು ಶಾಖೆಯಿಂದ ಮತ್ತೊಂದು ಶಾಖೆಗೆ ಹೀಗೆ ಖಾತೆ ಮತ್ತು ಹಣ ವರ್ಗಾಯಿಸಿದ್ದೇಕೆ ಎಂಬ ಅನುಮಾನವೂ ಇಲ್ಲಿ ಮೂಡುತ್ತದೆ. ಎಂ.ಜಿ. ರಸ್ತೆಯ ಶಾಖೆಯಲ್ಲಿ ನಿಗಮದ ಖಾತೆಗೆ ಜಮೆ ಆಗಿದ್ದ ಹಣದಲ್ಲಿ ₹ 94.73 ಕೋಟಿ ಮೊತ್ತವನ್ನು 14 ಅನ್ಯ ಖಾತೆಗಳಿಗೆ ವರ್ಗಾಯಿಸಲಾಗಿದೆ. ಕೆಲವು ಸಾಫ್ಟ್‌ವೇರ್ ಕಂಪನಿಗಳ ಖಾತೆಗಳಿಗೂ ಈ ಹಣ ಹೋಗಿದೆ ಎಂದು ದೂರಲಾಗಿದೆ. ಈ ಅವ್ಯವಹಾರಗಳಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕ ಜೆ.ಜಿ. ಪದ್ಮನಾಭ, ಲೆಕ್ಕಾಧಿಕಾರಿ ಪರಶುರಾಮದುರ್ಗಣ್ಣನವರ, ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ಮುಖ್ಯ ವ್ಯವಸ್ಥಾಪಕಿ ಶುಚಿಸ್ಮಿತಾ ರಾವಲ್ ಕಾರಣ ಎಂದು ಸಾವಿಗೀಡಾದ ಅಧಿಕಾರಿ ಪತ್ರದಲ್ಲಿ ಉಲ್ಲೇಖಿಸಿದ ಮಾಹಿತಿ ಇದೆ. ಸಚಿವರ ಮೌಖಿಕ ಸೂಚನೆ ಇದೆ ಎಂದು ಲೆಕ್ಕಾಧಿಕಾರಿ ಹೇಳಿದ್ದರಿಂದಾಗಿ ಹಣವನ್ನು ವಿವಿಧ ಖಾತೆಗಳಿಗೆ ವರ್ಗಾಯಿಸಲಾಗಿದೆ ಎಂಬ ವಾಕ್ಯ ಕೂಡ ಮೃತ ಚಂದ್ರಶೇಖರನ್ ಅವರು ಬರೆದಿಟ್ಟ ಪತ್ರದಲ್ಲಿ ಇರುವುದಾಗಿ ಹೇಳಲಾಗಿದೆ. ಆದರೆ, ತಮ್ಮ ಮೇಲಿನ ಆರೋಪವನ್ನು ಸಚಿವರು ಅಲ್ಲಗಳೆದಿದ್ದಾರೆ. ತಮ್ಮ ಸಹಿಯನ್ನು ಫೋರ್ಜರಿ ಮಾಡಲಾಗಿದೆ ಎಂದು ಪದ್ಮನಾಭ ಅವರು ದೂರಿದ್ದಾರೆ. ಈ ಮಧ್ಯೆ. ನಿಗಮದ ಪ್ರಧಾನ ವ್ಯವಸ್ಥಾಪಕರು, 'ನಿಗಮದ ಅನುಮತಿ ಇಲ್ಲದೆ ಬೇರೆ ಖಾತೆಗಳಿಗೆ ಹಣ ವರ್ಗಾವಣೆ ಮಾಡಿದ್ದಾರೆ. ಎಂದು ಯೂನಿಯನ್ ಬ್ಯಾಂಕ್ ಅಧಿಕಾರಿಗಳ ವಿರುದ್ಧ ಹೈಂಡ್ ಠಾಣೆ ಪೊಲೀಸರಿಗೆ ದೂರು ನೀಡಿದ್ದಾರೆ. ನಿಗಮದ ಖಾತೆಗಳ ವ್ಯವಹಾರದ ಕುರಿತು ಇ ಮೇಲ್, ಎಸ್‌ಎಂಎಸ್ ಸಹ ಹೋಗದಂತೆ ನೋಡಿಕೊಳ್ಳಲಾಗಿತ್ತು ಎಂದೂ ದೂರಲಾಗಿದೆ.

> **ನಿಗಮದ ಅಧೀಕ್ಷಕರಾಗಿದ್ದ ಪಿ.ಚಂದ್ರಶೇಖರನ್ ಅವರು ಆತ್ಮಹತ್ಯೆ ಮಾಡಿಕೊಳ್ಳುವ ಮುನ್ನ ಬರೆದಿಟ್ಟಿರುವ ಪತ್ರದಲ್ಲಿ ಹಗರಣದ ಕುರಿತು ಹಲವು ವಿವರಗಳನ್ನು ದಾಖಲಿಸಿದ ಮಾಹಿತಿ ಇದೆ. ಈ ಅಧಿಕಾರಿ ಮಾಡಿರುವುದೇನೂ ಮಾಮೂಲಿ ಆರೋಪವಲ್ಲ, ನಿಗಮದಲ್ಲಿ ಹಗರಣ ನಡೆದಿರುವುದು ನಿಜ ಎಂಬುದನ್ನು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವ ಬಿ. ನಾಗೇಂದ್ರ ಕೂಡ ಒಪ್ಪಿಕೊಂಡಿದ್ದಾರೆ.**

ಕರ್ತವ್ಯಲೋಪ ಎಸಗಿದ ಹಾಗೂ ಆರ್ಥಿಕ ನಿಯಮ ಉಲ್ಲಂಘಿಸಿದ ಆರೋಪದ ಮೇಲೆ ಪದ್ಮನಾಭ ಹಾಗೂ ದುರ್ಗಣ್ಣನವರ ಅವರನ್ನು ಸೇವೆಯಿಂದ ಅಮಾನತು ಮಾಡಲಾಗಿದೆ. ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕಿ ಮತ್ತು ಸಿಇಒ ಮಣಿಮೇಖಲೈ, ಬ್ಯಾಂಕ್‌ನ ಮುಖ್ಯ ವ್ಯವಸ್ಥಾಪಕಿ ಶುಚಿಸ್ಮಿತಾ ಸೇರಿದಂತೆ ಆರು ಅಧಿಕಾರಿಗಳ ವಿರುದ್ಧ ಎಫ್‌ಐಆರ್ ದಾಖಲಾಗಿದೆ ಅಧಿಕಾರಿಯೊಬ್ಬರ ಆತ್ಮಹತ್ಯೆಯ ಕಾರಣದಿಂದ ಈ ಹಗರಣ ಬಯಲಾಗುವಂತೆ ಆಗಿರುವುದು ವ್ಯವಸ್ಥೆಯ ವೈಫಲ್ಯವನ್ನೂ ಸರ್ಕಾರ ಹಾಗೂ ನಿಗಮದ ಆಂತರಿಕ ಪರಿಶೋಧನಾ ವ್ಯವಸ್ಥೆ ಸಂಪೂರ್ಣವಾಗಿ ಮುಗ್ಗರಿಸಿರುವುದನ್ನೂ ಎತ್ತಿ ತೋರುತ್ತದೆ. ನಿಗಮದ ವ್ಯವಸ್ಥಾಪಕ ನಿರ್ದೇಶಕರು ಹಗರಣದ ಕುರಿತು ತಮಗೆ ಮಾಹಿತಿ ನೀಡಿರಲಿಲ್ಲ ಎಂದು ಸಚಿವರು ಹೇಳಿರುವುದು ಹಲವು ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ. ಭ್ರಷ್ಟಾಚಾರದ ಗಂಭೀರ ಪ್ರಕರಣ ಇದಾಗಿರುವುದರಿಂದ ಸಚಿವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ, ನ್ಯಾಯಸಮ್ಮತ ತನಿಖೆಗೆ ಅನುವು ಮಾಡಿಕೊಡಬೇಕು.

ಬಿಜೆಪಿ ನೇತೃತ್ವದ ಸರ್ಕಾರದ ಅವಧಿಯಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದ ಗುತ್ತಿಗೆದಾರ ರೊಬ್ಬರು ಸಾವಿಗೆ ಮುನ್ನ ಬರೆದಿಟ್ಟ ಪತ್ರದಲ್ಲಿ ಅಂದಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾಗಿದ್ದ ಕೆ.ಎಸ್. ಈಶ್ವರಪ್ಪ ಅವರನ್ನು ಹೆಸರಿಸಿದ್ದರು. ಈಶ್ವರಪ್ಪ ಆಗ ರಾಜೀನಾಮೆ ಸಲ್ಲಿಸಿದ್ದರು. ನಿಗಮ ಹಾಗೂ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ಅಧಿಕಾರಿಗಳು ಒಟ್ಟಾಗಿಯೇ ಈ ಅವ್ಯವಹಾರದಲ್ಲಿ ಪಾಲ್ಗೊಂಡ ಅನುಮಾನಗಳು ಬಲವಾಗಿವೆ. ಒಂದೆಡೆ, ವಾಲ್ಮೀಕಿ ಸಮುದಾಯದವರು ಸೌಲಭ್ಯಗಳಿಗಾಗಿ ಕಾತರಿಸಿ ಕುಳಿತಿದ್ದರೂ ಅವರಿಗಾಗಿ ಖರ್ಚು ಮಾಡಲು ನಿಗಮದ ಬಳಿಯಿದ್ದ ಹಣ ಹೀಗೆ ಅನ್ಯ ಖಾತೆಗಳ ಪಾಲಾಗಿರುವುದು ಸರ್ಕಾರದ ಹಣವನ್ನು ಹೇಗೆ ಸೂರ ಹೊಡೆಯಲಾಗುತ್ತದೆ ಎಂಬುದಕ್ಕೆ ನಿದರ್ಶನ, ಭ್ರಷ್ಟಾಚಾರದಂತಹ ಪ್ರಕರಣಗಳಲ್ಲಿ ಶಿಕ್ಷೆಯಾಗುವ ಪ್ರಮಾಣ ತುಂಬಾ ಕಡಿಮೆ. ಹೀಗಾಗಿ ಅಧಿಕಾರಿಗಳು ಹೀಗೆ ಜನರ ದುಡ್ಡಿಗೆ ನಿರ್ಲಜ್ಜೆಯಿಂದ ಕೈಹಾಕುವ ಧೈರ್ಯ ಪ್ರದರ್ಶಿಸುತ್ತಿದ್ದಾರೆ. ನಿಜವಾದ ತಪ್ಪಿತಸ್ಥರು ಯಾರು ಹಾಗೂ ಹಣ ವರ್ಗಾವಣೆಯಿಂದ ಲಾಭ ಪಡೆದವರು ಯಾರು ಎನ್ನುವುದನ್ನು ಸಿಐಡಿ ನಿಷ್ಪಕ್ಷಪಾತವಾಗಿ ತನಿಖೆ ನಡೆಸಿ ಪತ್ತೆ ಹಚ್ಚಬೇಕು. ನಿಗಮದ ಖಾತೆಯಿಂದ ಅಕ್ರಮವಾಗಿ ವರ್ಗವಾದ ಪ್ರತಿ ಪೈಸೆಯೂ ನಿಗಮಕ್ಕೆ ವಾಪಸ್ ಆಗುವಂತೆ ಸರ್ಕಾರ ನೋಡಿಕೊಳ್ಳಬೇಕು.

# ಹೊಸ ಕ್ರಮಕ್ಕೆ ಮುಂದಾದ ನಮ್ಮ ಮೆಟ್ರೋ

**ಮೆಟ್ರೋ ಹಸಿರು, ನೇರಳೆ ಮಾರ್ಗ**


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿಯಲ್ಲಿ ಮೆಟ್ರೋ ಪ್ರಯಾಣಿಕರ ದಟ್ಟಣೆ ನಿಜಕ್ಕೂ ಹೆಚ್ಚಾಗಿಯೆ ಇದೆ. ಇದರ ಹೊರತಾಗಿಯೂ ಹೆಚ್ಚುವರಿ ಆದಾಯ ವನ್ನುಗಳಿಸುವ ಸಲುವಾಗಿ ಬೆಂಗಳೂರು ಮೆಟ್ರೋ ರೈಲು ಕಾರ್ಪೊರೇಷನ್ ಲಿಮಿಟೆಡ್ (ಬಿಎಂಆರ್‌ಸಿಎಲ್) ರೈಲು ಗಳಲ್ಲಿ ಜಾಹೀರಾತುಗಳನ್ನು ಆಹ್ವಾನಿಸಲು ನಿರ್ಧರಿಸಿದೆ.

ಇತರ ಹಲವು ಮೆಟ್ರೋ ನಿಗಮಗಳು ಈಗಾಗಲೇ ಜಾಹೀರಾತುಗಳನ್ನು ನೀಡುತ್ತಿರುವಾಗ, 2011ರಲ್ಲಿ ಕಾರ್ಯಾಚರಣೆಯನ್ನು ಪ್ರಾರಂಭಿಸಿದ ಬೆಂಗಳೂರು ಮೆಟ್ರೋ, ರೈಲುಗಳ ಸೌಂದರ್ಯ ಕಾಪಾಡಲು ಹಲವು ವರ್ಷಗಳಿಂದ ಈ ಕ್ರಮವನ್ನು ವಿರೋಧಿಸಿತು. ಮೆಟ್ರೋ ಹಸಿರು ಮತ್ತು ನೇರಳೆ ಮಾರ್ಗದ ಆಯ್ದ ನಿಲ್ದಾಣಗಳಲ್ಲಿ ನಾಲ್ಕು ಪ್ಯಾಕೇಜ್‌ಗಳಲ್ಲಿ ಜಾಹೀರಾತು ನೀಡಲು ಮುಂದಾಗಿದೆ.

ಬಿಎಂಆರ್‌ಸಿಎಲ್ ಆದಾಯವನ್ನು ಹೆಚ್ಚಿಸಲು ರೈಲಿನ ಹೊರಭಾಗಗಳ ಮೇಲಿನ ಜಾಹೀರಾತುಗಳನ್ನು ಹಾಕಲು ಅನುಮತಿ ನೀಡಲಾಗುತ್ತದೆ. ಶೀಘ್ರದಲ್ಲೇ ಟೆಂಡರ್ ಅನ್ನು ಕರೆಯಲಾಗುತ್ತದೆ. ನಮ್ಮ ರೈಲುಗಳ ಸೌಂದರ್ಯಕ್ಕೆ ಧಕ್ಕೆಯಾಗದಂತೆ ರೈಲುಗಳ ಹೊರಭಾಗದಲ್ಲಿ ಜಾಹೀರಾತುಗಳನ್ನು ಅಳವಡಿಸಲಾಗುತ್ತದೆ. ಆದರೆ, ಕಿಟಕಿಗಳು ಓಪನ್ ಆಗಿಯೇ ಇರಲಿವೆ.

ಬೆಂಗಳೂರು ಮೆಟ್ರೋ ತನ್ನ ಪರ್ಪಲ್ ಮತ್ತು ಗ್ರೀನ್ ಲೈನ್‌ಗಳಲ್ಲಿ 57 ಆರು ಬೋಗಿಗಳ ರೈಲು ಸೆಟ್‌ಗಳನ್ನು ಹೊಂದಿದೆ. ಪ್ರಸ್ತುತ, ಕೇವಲ ಒಂದು ರೈಲಿಗೆ ಮಾತ್ರ ಜಾಹೀರಾತು ಹಾಕಲಾಗಿದೆ. ಅದೂ ಕೂಡ ವಾಣಿಜ್ಯ ಉದ್ದೇಶಕ್ಕಾಗಿ ಅಲ್ಲ. ಮಾರ್ಚ್ 2022 ರಲ್ಲಿ, 75 ವರ್ಷಗಳ ಸ್ವಾತಂತ್ರ್ಯ ಅಮೃತ ಮಹೋತ್ಸವವನ್ನು ಆಚರಿಸಲು ಈ ಜಾಹೀರಾತು ಪ್ರದರ್ಶಿಸಲಾಗುತ್ತಿದೆ. ಆಜಾದಿ ಕಾ ಅಮೃತ್ ಮಹೋತ್ಸವ ಕಾರ್ಯಕ್ರಮದ ಭಾಗವಾಗಿ ಸ್ವಾತಂತ್ರ್ಯ ಹೋರಾಟವನ್ನು ಎತ್ತಿ ನೆನಪಿಸುವ ಫೋಟೋಗಳು ಮತ್ತು ಘೋಷಣೆಗಳಿವೆ.


**ಚಲ್ಲಘಟ್ಟ ಮೆಟ್ರೋ ನಿಲ್ದಾಣ**

**ಪ್ಯಾಕೇಜ್ ಆಧಾರದಲ್ಲಿ ಜಾಹೀರಾತು ನೀಡಲು ಮುಂದಾಗಿದ್ದು, ಇದಲ್ಲಿ 64 ನಿಲ್ದಾಣಗಳು ಒಳಗೊಂಡಿವೆ. ಪ್ಯಾಕೇಜ್ 1ರ ಅಡಿಯಲ್ಲಿ ವೈಟ್‌ಫೀಲ್ಡ್‌ನಿಂದ ಸರ್ ಎಂ. ವಿಶ್ವೇಶ್ವರಯ್ಯ ಮೆಟ್ರೋ ನಿಲ್ದಾಣದವರೆಗೆ ಒಟ್ಟು 22 ನಿಲ್ದಾಣಗಳು ಬರಲಿವೆ. ಪ್ಯಾಕೇಜ್ 2ರ ಅಡಿಯಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸಿಟಿ ರೈಲ್ವೆ ನಿಲ್ದಾಣದಿಂದ ಚಲ್ಲಘಟ್ಟ ಮೆಟ್ರೋ ನಿಲ್ದಾಣದವರೆಗೆ ಒಟ್ಟು 14 ನಿಲ್ದಾಣಗಳು ಬರಲಿವೆ. ಪ್ಯಾಕೇಜ್ 3ರ ಅಡಿಯಲ್ಲಿ ನಾಡಪ್ರಭು ಕೆಂಪೇಗೌಡ, ಮೆಜೆಸ್ಟಿಕ್ ಮೆಟ್ರೋ ನಿಲ್ದಾಣದಿಂದ ನಾಗಸಂದ್ರ ಮೆಟ್ರೋ ನಿಲ್ದಾಣದವರೆಗೆ 13 ನಿಲ್ದಾಣಗಳು ಬರಲಿವೆ. ಪ್ಯಾಕೇಜ್ 4 ರ ಅಡಿಯಲ್ಲಿ ಚಿಕ್ಕಪೇಟೆಯಿಂದ ಸಿಲ್ಕ್ ಇನ್‌ಸ್ಟಿಟ್ಯೂಟ್ ಮೆಟ್ರೋ ನಿಲ್ದಾಣದವರೆಗೆ ಒಟ್ಟು 15 ನಿಲ್ದಾಣಗಳು ಬರಲಿವೆ.**

ಬಿಎಂಆರ್‌ಸಿಎಲ್ ಈಗ ತನ್ನ ರೈಲುಗಳ ಒಳಗೆ ಮತ್ತು ನಿಲ್ದಾಣದ ಆವರಣದಲ್ಲಿ ಮಾತ್ರ ಜಾಹೀರಾತು ನೀಡುತ್ತಿದೆ.

ಹೀಗಾಗಿ ಜಾಹೀರಾತುಗಳನ್ನು ನೀಡುವ ಮುನ್ನ, ಆರಂಭದಲ್ಲಿ, ಕೆಲವು ರೈಲುಗಳಲ್ಲಿ ಜಾಹೀರಾತುಗಳನ್ನು ಹಾಕಲಾಗುತ್ತದೆ. ಪ್ರತಿಕ್ರಿಯೆಯನ್ನು ಮತ್ತು ಮೆಟ್ರೋ ಮೇಲ್ಮೈಗಳ ಮೇಲೆ ಅದರ ಪ್ರಭಾವವನ್ನು ನೋಡಿ ಮುಂದಿನ ನಿರ್ಧಾರವನ್ನು ತೆಗೆದುಕೊಳ್ಳಲಾಗುತ್ತದೆ.

# ದುಶ್ಚಟಗಳ ಆಸರೆ ಬೇಡವಾದ್ದದ್ದು



**ಸಾಮಾಜಿಕ ಕಳಕಳಿ**



**ಹೆಚ್.ಎಸ್. ಪ್ರತಿಮಾ**
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ
ಶಿಕ್ಷಕಿ, ಹಾಸನ

• ಉದಯವಾಹಿನಿ, ವಿಶೇಷ

**ಕೆಟ್ಟದದು ತಿಳಿಯುತಲಿ ನಡೆಯುತಿರೆ ಜೀವನದಿ**
**ಮೆಟ್ಟುತಲಿ ಬಿಡುವುದನು ತಿಳಿಯುತಿರಲು**
**ಬಿಟ್ಟರದು ಚೆಂದವೈ ದೇಹವನು ಸರಿಗಿಡಲು**
**ಮುಟ್ಟದಿರಿ ಎಂದೆಂದು ಲಕ್ಷ್ಮಿ ದೇವಿ**

ಈ ಮೇಲಿನ ಮುಕ್ತಕದಂತೆ ದುರಭ್ಯಾಸಗಳನ್ನು ಬಿಟ್ಟುಬಿಡಬೇಕು. ದುರಭ್ಯಾಸಗಳಲ್ಲಿ ಒಂದಾದದ್ದು ಧೂಮಪಾನ. ಕುಡಿಯುವುದು, ಜೂಜು ಆಡುವುದು , ಇವುಗಳ ಅಭ್ಯಾಸವನ್ನು ಇಟ್ಟುಕೊಂಡವರು ಅದರ ಆಸರೆಯಿಂದ ಹೊರಬರಬೇಕು. ಕೆಟ್ಟದು ಎಂದು ತಿಳಿದು ಜೀವನದಲ್ಲಿ ಮುಂದೆ ನಡೆಯುತ್ತಿರಬೇಕು. ಎಂತಹ ಸಮಸ್ಯೆಗಳು ಬಂದರೂ ಸಹ ಮೆಟ್ಟಿ ನಿಲ್ಲಬೇಕು ಆ ಹವ್ಯಾಸವನ್ನು ಬಿಟ್ಟರೆ ದೇಹಕ್ಕೆ ಒಳಿತು. ಮತ್ತೆಂದು ಅದನ್ನು ಮುಟ್ಟುವುದಿಲ್ಲ ಎಂದು ಶಪಥವನ್ನು ಮಾಡಬೇಕು. ಜೀವನದಲ್ಲಿ ಆರೋಗ್ಯ ಎಂಬುದು ಬಹಳ ಮುಖ್ಯವಾದದ್ದು. ಅಂತಹ ಆರೋಗ್ಯವನ್ನು ನಾವು ಒಳ್ಳೆಯ ರೀತಿಯ ಅಭ್ಯಾಸದಿಂದ ದೇಹವನ್ನು ಇಟ್ಟುಕೊಳ್ಳಬೇಕೆಂದರೆ. ಧೂಮಪವನ್ನು ಬಿಡಬೇಕು. ಮದ್ಯಪಾನ, ಗುಟ್ಕಾ ಹಾಕುವುದು, ಬಂಗಿ ಸೇದುವುದು, ಹೀಗೆ ಹಲವಾರು ರೀತಿಯಲ್ಲಿ ಇರುವಂತಹ ದುರಭ್ಯಾಸಗಳನ್ನೆಲ್ಲ ಬಿಡಬೇಕು.

ಬೇರೆಯವರು ಸೇದಿ ಬಿಟ್ಟ ಸಿಗರೇಟು ಅಥವಾ ಬೀಡಿಯ ಹೊಗೆಯನ್ನು ಸೇವಿಸುವವರಿಗೂ ಮೊದಲು ಸೇದಿದವರಿಗೆ ಇರುವ ಅಪಾಯಗಳೇ ಇವೆ. ಇದರಿಂದ ಮಕ್ಕಳು ಹಾಗೂ ವಯಸ್ಕರಲ್ಲಿ ರೋಗಗಳು ಹಾಗೂ ಅಕಾಲಿಕ ಮರಣಗಳು ಸಂಭವಿಸುತ್ತವೆ. ತಂಬಾಕು ಸೇವನೆಯಿಂದ ದೇಹದ ಪ್ರತಿಯೊಂದು ಜೀವಕೋಶದ ಮೇಲೂ ದುಷ್ಪರಿಣಾಮ ಬೀರುತ್ತದಾದರೂ ಪ್ರಮುಖವಾಗಿ ಹೃದಯ ಸಂಬಂಧಿ, ಶ್ವಾಸಕೋಶ ತೊಂದರೆ ಹಾಗೂ ಕ್ಯಾನ್ಸರ್ ಕಾಯಿಲೆಗಳು ಕಾಡುತ್ತದೆ.

- ವಿಶ್ವಾದ್ಯಂತ ಪ್ರತೀ ವರ್ಷ 5.4 ಮಿಲಿಯನ್ ಜನರು ತಂಬಾಕು ಸೇವನೆಯಿಂದ ಸಾಯುತ್ತಿದ್ದಾರೆ.
- ದುರಂತವೆಂದರೆ, ಇದರಲ್ಲಿ ಶೇಕಡ 80ರಷ್ಟು ಸಾವುಗಳು ಅಭಿವೃದ್ಧಿ ಹೊಂದುತ್ತಿರುವ ದೇಶಗಳಲ್ಲಿ ಸಂಭವಿಸುತ್ತಿವೆ
- ಪ್ರಪಂಚದಲ್ಲಿ ಸಾವಿಗೆ ಕಾರಣವಾಗುವ ಎಂಟು ಪ್ರಮುಖ ಕಾರಣಗಳಲ್ಲಿ ತಂಬಾಕಿಗೆ ಆರನೇ ಸ್ಥಾನ.
- ಪ್ರತೀ ವರ್ಷ 8 ರಿಂದ 9 ಲಕ್ಷ ಭಾರತೀಯರು ತಂಬಾಕು ಸಂಬಂಧಿ ರೋಗಗಳಿಂದ ಸಾಯುತ್ತಿದ್ದಾರೆ. ಇವೆಲ್ಲವೂ ತಡೆಗಟ್ಟಬಹುದಾದ ಸಾವುಗಳು.
- ತಂಬಾಕು ಸೇವನೆಯಿಂದ ಬರುವ ರೋಗಗಳಿಂದಾಗಿ ಪ್ರತೀ ನಿತ್ಯ 2,200 ಮಂದಿ ಭಾರತೀಯರು ಸಾವನ್ನಪ್ಪುತ್ತಿದ್ದಾರೆ.
- ವಿಶ್ವದಲ್ಲಿ ಬಾಯಿ ಕ್ಯಾನ್ಸರ್ ಗೆ ತುತ್ತಾಗಿತ್ತಿರುವವರಲ್ಲಿ ಭಾರತೀಯರೇ ಹೆಚ್ಚು ಇದರಲ್ಲಿ ಶೇಕಡ 90ರಷ್ಟು ಬಾಯಿ ಕ್ಯಾನ್ಸರ್ ಗಳು ತಂಬಾಕಿನಿಂಹ ಬರುತ್ತಿವೆ.
- ಭಾರತದಲ್ಲಿ ಸುಮಾರು ಶೇಕಡ 50ರಷ್ಟು ರೋಗಗಳು ತಂಬಾಕು ಸೇವನೆಯಿಂದ ಬರುತ್ತಿವೆ.

ತಂಬಾಕಿಗೆ ಸಂಬಂಧಿಸಿದ ಕೆಲವು ಸತ್ಯಗಳನ್ನು ಪ್ರತಿಯೊಬ್ಬರೂ ಸಹ ತಿಳಿಯಬೇಕು. ಅದರ ಅಭ್ಯಾಸ ಇಲ್ಲದಿದ್ದರೂ ಸಹ ಇದರ ಬಗ್ಗೆ ಮಾಹಿತಿಯನ್ನು ತಿಳಿದುಕೊಳ್ಳಬೇಕು.

ಬೇರೆಯವರು ಸೇದಿ ಬಿಟ್ಟ ಸಿಗರೇಟು ಅಥವಾ ಬೀಡಿಯ ಹೊಗೆಯನ್ನು ಸೇವಿಸುವವರಿಗೂ ಮೊದಲು ಸೇದಿದವರಿಗೆ ಇರುವ ಅಪಾಯಗಳೇ ಇವೆ ಇದರಿಂದ ಮಕ್ಕಳು ಹಾಗೂ ವಯಸ್ಕರಲ್ಲಿ ರೋಗಗಳು ಹಾಗೂ ಅಕಾಲಿಕ ಮರಣಗಳು ಸಂಭವಿಸುತ್ತವೆ.

ಮುಂದುವರಿಯಲಿದೆ....

# ಸುಯೋಧನ ನಾಟಕ ಜೂನ್ 7ಕ್ಕೆ ಪ್ರದರ್ಶನ



**ವೈ.ಕೆ. ಸಂಧ್ಯಾಶರ್ಮ**

ಬೆಂಗಳೂರಿನ 'ಸಂಧ್ಯಾ ಕಲಾವಿದರು' ಹವ್ಯಾಸೀ ನಾಟಕ ತಂಡವು ಜೂನ್ ತಿಂಗಳ 7 ನೇ ತಾ. ಶುಕ್ರವಾರ ಸಂಜೆ 7 ಗಂಟೆಗೆ ಮಲ್ಲೇಶ್ವರದ ಚೌಡಯ್ಯ ಮೆಮೋರಿಯಲ್ ಹಾಲ್ ನಲ್ಲಿ ಅಕಾಡೆಮಿ ಆಫ್ ಮ್ಯುಸಿಕ್ ಆಯೋಜಿಸಿರುವ 'ರಂಗ-ರಂಗೋತ್ಸವ'ದ ಸಂದರ್ಭದಲ್ಲಿ ತಂಡದ ಜನಪ್ರಿಯ ನಾಟಕ 'ಸುಯೋಧನ' –ಮಹಾಭಾರತಕ್ಕೊಂದು ಹೊಸ ಆಯಾಮದ ಈ ಪ್ರಯೋಗವನ್ನು ಪ್ರೇಕ್ಷಕ ರಂಗಾಭಿಮಾನಿಗಳ ಮುಂದೆ ಪ್ರದರ್ಶಿಸಲಿದೆ. ನಾಟಕದ ರಚನೆ–ನಿರ್ದೇಶನ ಎಸ್.ವಿ.ಕೃಷ್ಣ ಶರ್ಮ. ನಿರ್ವಹಣೆ: ವೈ.ಕೆ.ಸಂಧ್ಯಾ ಶರ್ಮ.

**ಸಂಧ್ಯಾ ಕಲಾವಿದರು ಅಭಿನಯಿಸುವ**

'ಸಂಧ್ಯಾ ಕಲಾವಿದರು' ತಂಡ ಈಗಾಗಲೇ ನಾಟಕರಂಗದಲ್ಲಿ ಸಾಕಷ್ಟು ಹೆಸರು ಮಾಡಿದ ಪ್ರಸಿದ್ಧ ಹಳೆಯ ತಂಡ. ಕಳೆದ 47 ವರುಷಗಳಿಂದ ಕ್ರಿಯಾಶೀಲವಾಗಿದ್ದು ಹಲವಾರು ಜನಪ್ರಿಯ ನಾಟಕಗಳನ್ನು ನಾಡಿನಾದ್ಯಂತ ಪ್ರದರ್ಶಿಸಿ, ಅಪಾರ ಜನಮೆಚ್ಚುಗೆಯನ್ನು ಗಳಿಸಿದೆ. ತಂಡದ ಅತ್ಯಂತ ಜನಪ್ರಿಯ ನಾಟಕಗಳೆಂದರೆ, ಸುಯೋಧನ ( ಮಹಾಭಾರತಕ್ಕೊಂದು ಹೊಸ ಆಯಾಮ), ಪೌಲಸ್ತ್ಯನ ಪ್ರಣಯ ಕಥೆ ( ಹೊಸ ದೃಷ್ಟಿಯ ರಾಮಾಯಣ) ಮತ್ತು ಸೊಹ್ರಾಬ್–ರುಸ್ತುಂ ( ಯುದ್ಧದ ರಾಜಕೀಯದಲ್ಲಿ ಅಮಾಯಕ ತಂದೆ–ಮಕ್ಕಳ ಕಾಳಗ–ಬಲಿ ) ಮುಖವಾಡ, ಸತ್ಯಂ ವಧ ಮುಂತಾದ ಸಾಮಾಜಿಕ ನಾಟಕಗಳೂ ಅನೇಕ ಪ್ರದರ್ಶನಗಳನ್ನು ಕಂಡು ಮನೆ ಮಾತಾಗಿವೆ. ಜನಸಾಮಾನ್ಯರಿಗೆ ಮನರಂಜನೆ, ಚಿಂತನೆಗಳಿಗೆ ಪ್ರೇರೇಪಿಸುವ ಆಸಕ್ತಿದಾಯಕ ವಿಷಯಗಳನ್ನು ಆಯ್ದು ಸ್ವಾರಸ್ಯಕರ, ಚಕಮಕಿಯ ಸಂಭಾಷಣೆ, ಹೊಸ ಹೊಳಹಿನ ಸನ್ನಿವೇಶಗಳ ಪರಿಕಲ್ಪನೆಯಲ್ಲಿ ಮೂಡಿಬರುವ , ಲವಲವಿಕೆಯ ನಾಟಕದ ನಡೆ , ತಂಡದ ನಾಟಕಗಳ ವೈಶಿಷ್ಟ್ಯ. ಎರಡು ಗಂಟೆಗಳ ಅವಧಿಯ ಈ ನಾಟಕಗಳು ಜನರಂಜನೆ, ವೈಚಾರಿಕತೆಯೊಂದಿಗೆ ಹಾಸ್ಯದ ಲೇಪನವನ್ನೂ ಒಳಗೊಂಡು ಜನರನ್ನು ನೇರವಾಗಿ ತಲುಪುವುದು ತಂಡದ ನಾಟಕಗಳ ಉದ್ದೇಶ, ಹಾಗೆ ಅದರಲ್ಲಿ ಸಫಲವೂ ಆಗಿದೆ. ತಂಡದ ಹೆಚ್ಚಿನ ನಾಟಕಗಳು ಪೌರಾಣಿಕ, ಐತಿಹಾಸಿಕ ವಸ್ತುವನ್ನು ಒಳಗೊಂಡಿದ್ದು, ಹೊಸ ದೃಷ್ಟಿಯಲ್ಲಿ ಚಿಂತನ–ಮಂಥನಗೊಂಡು, ಹೊಸದೇನನ್ನಾದರೂ ಸಮಾಜಕ್ಕೆ ನೀಡುವ ಸದಾಶಯವಿಟ್ಟುಕೊಂಡು ನಾಟಕದ ರೂಪು–ರೇಷೆ ಚಿತ್ರಿತವಾಗಿವೆ. ಈ ನಾಟಕಗಳನ್ನು ರಚಿಸಿರುವ ನಾಟಕಕಾರ ಹಾಗೂ ನಿರ್ದೇಶಕ ಎಸ್.ವಿ.ಕೃಷ್ಣ ಶರ್ಮ, ಈಗಾಗಲೇ ಅನೇಕ ನಾಟಕಗಳನ್ನು ರಚಿಸಿದ್ದು, ತಮ್ಮೆಲ್ಲ ನಾಟಕಗಳಲ್ಲಿ ಮುಖ್ಯ ಪಾತ್ರ ನಿರ್ವಹಿಸುವ ಜೊತೆಗೆ ಇತರ ದೃಶ್ಯ–ಶ್ರವ್ಯ ಮಾಧ್ಯಮಗಳ ಅನೇಕ ನಾಟಕಗಳಲ್ಲಿ ನಟಿಸಿದ್ದಾರೆ. ವೃತ್ತಿಯಲ್ಲಿ ಎಂಜಿನಿಯರ್ ( ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ–ನಿವೃತ್ತ) ಆಗಿದ್ದು , ಪ್ರವೃತ್ತಿಯಲ್ಲಿ, ನಾಟಕಕಾರ, ನಟ ಮತ್ತು ನಿರ್ದೇಶಕರಾಗಿ ಹೆಸರು ಗಳಿಸಿದ್ದಾರೆ.


ಉದಯವಾಹಿನಿ ಚಿತ್ರ

# ಮನಸ್ಸಿನ ಸಮತೋಲನ ಕಾಪಾಡಿ: ಡಾ. ಪ್ರಕಾಶ್ ಎಸ್

• ಉದಯವಾಹಿನಿ, ಮಹದೇವಪುರ,

**ದೊಡ್ಡ ದೊಡ್ಡ ಸಾಧನೆ**

ನಮ್ಮ ಮೂಲ ಬೇರುಗಳಾದ ನಮ್ಮ ಪರಂಪರೆ, ಸಂಸ್ಕೃತಿಯನ್ನು ರೂಢಿಸಿಕೊಳ್ಳುವುದರಿಂದ ವಿಶೇಷ ಘನತೆ ಹಾಗೂ ಗೌರವ ತಂದುಕೊಡುತ್ತದೆ ಎಂದು ಸಂಸ್ಥೆಯ ಹಿರಿಯ ಉಪಾಧ್ಯಕ್ಷ ಡಾ. ಪ್ರಕಾಶ್ ಎಸ್ ತಿಳಿಸಿದರು.

ಕ್ಷೇತ್ರದ ಬಿದರಹಳ್ಳಿಯಲ್ಲಿನ ಈಸ್ಟ್ ಪಾಯಿಂಟ್ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಕನ್ನಡ ಸಂಘವು ಆಯೋಜಿಸಿದ್ದ ವ್ಯಕ್ತಿತ್ವ ವಿಕಸನ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದರು.

ಸಾಹಿತಿ, ಪ್ರಾಧ್ಯಾಪಕರಾದ ಡಾ. ಎಂ.ಸಿ. ಮಹೇಶ್ ಕುಮಾರ್ ಮಾತನಾಡಿ, ಗುರುಭಕ್ತಿ, ಮನಸ್ಸಿನ ಸಮತೋಲನ ಕಾಪಾಡಿಕೊಳ್ಳುವಿಕೆ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಾಗುವ ಬಗೆ, ದೊಡ್ಡ ದೊಡ್ಡ ಸಾಧನೆ ಮಾಡಿದವರ ಬಗ್ಗೆ, ಪರಿಸರ ಕಾಳಜಿ, ಜೀವನ ಪ್ರೀತಿಯನ್ನು ಕುರಿತು ಸ್ಫೂರ್ತಿದಾಯಕವಾಗಿ ವ್ಯಕ್ತಿತ್ವ ವಿಕಸನ ಕುರಿತು ಉಪನ್ಯಾಸ ನೀಡಿದರು.

ಕಾಲೇಜು ಪ್ರಾಂಶುಪಾಲರಾದ ಡಾ.ಜಾನೆಟ್ ಮೇರಿ ಕೋಟ್ಸ್, ಹೆಚ್‌ಒಡಿ ಡಾ.ಗೋಪಾಲಕೃಷ್ಣ, ಕಾರ್ಯಕ್ರಮದ ನಿರ್ವಹಣೆ ಮತ್ತು ನಿರೂಪಣೆಯನ್ನು ಕನ್ನಡ ಪ್ರಾಧ್ಯಾಪಕರಾದ ಡಾ. ಶೈಲಜಾ ಸಿ .ವಿ.ಮತ್ತು ಉಪೇಂದ್ರ ಕುಮಾರ್ ಎಂ ಆರ್ ಮಾಡಿದ್ದು ಕಾಲೇಜಿನ ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಭಾಗಿಯಾಗಿದ್ದರು.


ಉದಯವಾಹಿನಿ ಚಿತ್ರ




• ಹಿಂದಿನ ಸಂಚಿಕೆಯಿಂದ

ಅನಂತರ ಮೇಲೇರುತ್ತ ಏರುತ್ತ ಕೈಲಾಸಪರ್ವತಕ್ಕೆ ಬಂದು ಸಾವಿರ ಸೂರ್ಯರಂತೆ ಪ್ರಕಾಶಿಸುತ್ತಿರುವ ಶಂಕರನನ್ನು ಕಂಡು, ನಮಸ್ಕರಿಸಿ ಪೂಜಿಸಿದ್ದಾರೆ. ಅವನು ಪ್ರೀತಿಯಿಂದ ಇವರ ಪೂಜೆಯನ್ನು ಸ್ವೀಕರಿಸಿ, ನಿನಗೇನು ವರ ಬೇಕು ಕೇಳು ಎಂದಿದ್ದಾನೆ.

ಅರ್ಜುನನು ನನಗೆ ನಿನ್ನ ಪ್ರಸಿದ್ಧವಾದ ಪಾಶುಪತಾಸ್ತ್ರ ಬೇಕು ಎನ್ನುತ್ತಿರುವಂತೆಯೇ ತಾನು ಆ ರಾತ್ರಿ ಕೃಷ್ಣನಿಗೆ ಅರ್ಪಿಸಿದ ಫಲಪುಷ್ಪಗಳೆಲ್ಲ ಅಲ್ಲಿರುವುದನ್ನು ಗಮನಿಸುತ್ತಾನೆ. ಶಂಕರನು ಅಲ್ಲೊಂದು ಅಮೃತಸರೋವರವಿದೆ ನೋಡು, ಅದರಲ್ಲಿ ನನ್ನ ಬಿಲ್ಲು ಬಾಣಗಳನ್ನೆಲ್ಲ ಇಟ್ಟಿದ್ದೇನೆ ತೆಗೆದುಕೋ ಎನ್ನುತ್ತಾನೆ. ಭೂತಗಣಗಳು ತನ್ನನ್ನು ಅಮೃತ ಸರೋವರಕ್ಕೆ ಕರೆದೊಯ್ಯುತ್ತವೆ. ಅದರಲ್ಲೊಂದು ಭಯಂಕರವಾದ ಸರ್ಪವಿರುತ್ತದೆ. ಜೊತೆಗೆ ಇನ್ನೊಂದು ಸಾವಿರ ಹೆಡೆಯ ಸರ್ಪ ಬೆಂಕಿಯನ್ನುಗುಳುತ್ತಿರುತ್ತದೆ. ಕೃಷ್ಣಾರ್ಜುನರು ಮಹಾರುದ್ರದ ಶ್ಲೋಕಗಳನ್ನು ಹೇಳುತ್ತಾರೆ. ಆಗ ಸರ್ಪಗಳು ಬದಲಾಗಿ ಬಿಲ್ಲುಬಾಣಗಳು ಕಾಣಿಸಿಕೊಳ್ಳುತ್ತವೆ. ಕೃಷ್ಣಾರ್ಜುನರು ಅವುಗಳನ್ನು ಭಕ್ತಿಯಿಂದ ಎತ್ತಿಕೊಂಡು ಶಂಕರನಲ್ಲಿಗೆ ಬರುತ್ತಾರೆ. ಶಂಕರನು ನಗುತ್ತಾನೆ. ಆಗ ಅವನ ಮೈಯಿಂದ ಕೆಂಗಣ್ಣಿನ, ನೀಲಗಪ್ಪುಕೂದಲಿನ ಬ್ರಹ್ಮಚಾರಿಯೊಬ್ಬ ಜನಿಸಲು, ಅರ್ಜುನ ಆ ಬಿಲ್ಲನ್ನು ಹೆದೆಯೇರಿಸಿ ಬಾಣಪ್ರಯೋಗ ಮಾಡುವ ಕ್ರಮವನ್ನು ಅವನಿಂದ ಕಲಿಯುತ್ತಾನೆ. ಶಂಕರನು ಅದರ ಮಂತ್ರವನ್ನು ಉಪದೇಶಿಸುತ್ತಾನೆ. ಇದೇ ಶಂಕರನು ಹಿಂದೆ ಇಂದ್ರಕೀಲ ಪರ್ವತದಲ್ಲಿ ಬೇಡನ ರೂಪದಲ್ಲಿ ತನಗೆ ದರ್ಶನ ಕೊಟ್ಟದ್ದು ನೆನಪಾಗುತ್ತದೆ. ಕೃಷ್ಣಾರ್ಜುನರು ಭಕ್ತಿಯಿಂದ ಅವನಿಗೆ ನಮಸ್ಕರಿಸಿ ಹಿಂದಿರುಗುತ್ತಾರೆ. ಕನಸಿನಿಂದ ದುಗುಡವು ಪರಿಹಾರವಾಗುತ್ತದೆ.

★ ★ ★ ★

ಮಹಾಯುದ್ಧದ ಹದಿನಾಲ್ಕನೆಯ ದಿನ ಬೆಳಗಾಯಿತು. ಅದು ದ್ರೋಣ ಸೇನಾಪತ್ಯದ ನಾಲ್ಕನೆಯ ದಿನ. ಯುಧಿಷ್ಠಿರನು ಬೇಗನೆ ಎದ್ದು ನಿತ್ಯಪೂಜೆಯನ್ನು ಮುಗಿಸಿದ್ದನು. ಅಷ್ಟರಲ್ಲಿ ಕೃಷ್ಣನೂ ಪಾಂಡವರ ಕಡೆಯ ಇತರರೂ ಬಂದರು. ಯುಧಿಷ್ಠಿರನು, ''ಕೃಷ್ಣ, ರಾತ್ರಿ ಚೆನ್ನಾಗಿ ನಿದ್ರೆ ಬಂತೆ? ಎಂದು ವಿಚಾರಿಸಲು, ಕೃಷ್ಣನು, ''ನಿದ್ರೆ ಬಂತು. ಈಗ ನಿನ್ನ ಶಾಂತ ಮುಖವನ್ನು ನೋಡಿದ ಮೇಲೆ ನಮಗಿಂದು ಎಲ್ಲವೂ ಮಂಗಳವೇ ಎಂದನು. ಯುಧಿಷ್ಠಿರನು ಬಂದ ವೀರರನ್ನೆಲ್ಲ ಆದರಿಸಿದ ಮೇಲೆ ಎಲ್ಲರೂ ಆ ಮುಖ್ಯವಾದ ದಿನದ ಬಗ್ಗೆ ಚರ್ಚಿಸತೊಡಗಿದರು. ಯುಧಿಷ್ಠಿರನು, ''ಕೃಷ್ಣ, ನಾವು ಸಂಪೂರ್ಣವಾಗಿ ನಿನ್ನನ್ನೇ ಅವಲಂಬಿಸಿರುವೆವು. ನೀನೇ ನಮ್ಮನ್ನು ಈ ಯುದ್ಧದಲ್ಲಿ ಕೊನೆಗೆ ಗೆಲ್ಲಿಸಬೇಕು. ಅರ್ಜುನ ತನ್ನ ಪ್ರತಿಜ್ಞೆಯನ್ನು ಪೂರೈಸಿಕೊಳ್ಳುವುದು ಹೇಗೆಂದು ನೀನು ಈಗಾಗಲೇ ಯೋಚಿಸಿರಬಹುದು. ನೀನು ಸಾರಥಿಯಾಗಿರುವಾಗ ಉಳಿದ ದಿನಗಳಂತೆಯೇ ಇಂದು ನಮ್ಮ ಅರ್ಜುನ ಗೆಲ್ಲುವನು ಎನ್ನಲು ಕೃಷ್ಣನು, ''ಅರ್ಜುನನಂಥ ಧನುರ್ಧಾರಿ ಇನ್ನೊಬ್ಬನಿಲ್ಲ.

ಮುಂದುವರಿಯುವುದು...

# ಬೆಟ್ಟದೊಡೆಯ ಭಕ್ತಾಗ್ರೇಸರ ತಾಳ್ಳಪಾಕ ಅನ್ನಮಾಚಾರ್ಯರು



**ಶ್ರೀಧರ ರಾಯಸಂ**

• ಉದಯವಾಹಿನಿ, ವಿಶೇಷ

**ಭಕ್ತಿ ಕುಸುಮ ಕೈಪಿಡಿ**

ಕಲಿಯುಗದಲ್ಲಿ ಭಗವಂತನ ಅಸ್ತಿತ್ವ ಜನರಿಗೆ ಅರಿವಾದಾಗ, ಭಾಗವತ ಧರ್ಮ ಉದಯವಾಯಿತು ಎಂದು ಹೇಳಬಹುದು. ಭಗವಂತ ದೊಡ್ಡವನು, ಕರುಣಾಮಯಿ, ಅವನ ಅನುಗ್ರಹದಿಂದ ತಮ್ಮ ಉದ್ಧಾರವೆಂದು, ಮೋಕ್ಷಕ್ಕೆ ದಾರಿದೀಪ ಎಂದು ತಿಳಿದಾಗ, ಬಹತೇಕ ಆಸ್ತಿಕ ಜನರು, ಭಜನೆ ಮಾಡಲು ಪ್ರಾರಂಭಿಸಿದರು! ಭಾಗವತ ಧರ್ಮ ಸಕಲ ಧರ್ಮಗಳಿಗೆ ಸಮವಾದದ್ದು. ಭಕ್ತಿಗೆ ಮಹತ್ವ ಕೊಡದ ಮತ ಪ್ರಪಂಚದಲ್ಲಿಲ್ಲ. ಭಾಗವತ ಭಾರತಾದಿ ಆಗಮಗಳಿಂದ ಭಗವಂತನ ಮಹಿಮೆಯನ್ನು ತಿಳಿದು, ಭಗವಂತನನ್ನು ಆರಾಧಿಸಲು ಮನುಷ್ಯರೆಲ್ಲರಿಗೂ ಅಧಿಕಾರವಿದೆ. ದೇಶಭಾಷೆಯಲ್ಲಿ ರಚಿತವಾದ ಹರಿದಾಸ ಸಾಹಿತ್ಯ , ಸಾಮಾನ್ಯ ಜನರಿಗೂ ಪುರಾಣದ ಮಹತ್ವವನ್ನು ತಿಳಿಯಲು, ಆಯಾ ಪ್ರಾಂತ್ಯದ ಭಾಷೆ ಪೂರಕವಾಗಿ, ದೇವರ ನಾಮಗಳು, ಕೀರ್ತನೆಗಳು, ಭಕ್ತರಿಂದ ರಚನೆಯಾಗಿ, ಜನರಿಗೆ ತಲುಪಿದವು. ತಮಿಳುನಾಡಿನಲ್ಲಿ ಜನಿಸಿ, ತೆಲುಗು ಭಾಷೆಯಲ್ಲಿ ದಿವ್ಯ ಕೀರ್ತನೆಗಳನ್ನು ರಚಿಸಿದ ಶ್ರೀ ತ್ಯಾಗರಾಜರು, ಹರಿದಾಸ ವರ್ಗದಲ್ಲಿ ಶ್ರೇಷ್ಠ ರಾದರು..

ಕನ್ನಡ ಭಾಷೆಯಲ್ಲಿ ಶ್ರೀ ಪುರಂದರದಾಸರು 475000ಕೀತ9ನೆಗಳನ್ನು ರಚಿಸಿ, ಹರಿದಾಸ ಸಾಹಿತ್ಯದಲ್ಲಿ ಮೇರು ಪುರುಷರಾದರು. ಅದರಂತೆ ತೆಲುಗು ಭಾಷೆಯಲ್ಲಿ ಶ್ರೀನಿವಾಸದೇವರ ಮಹಾಭಕ್ತರಾಗಿದ್ದ, ಶ್ರೀ ಅನ್ನಮಾಚಾರ್ಯರು 32000 ಕೀರ್ತನೆಗಳನ್ನು ರಚಿಸಿ, ಭಕ್ತಿಯ ಸುಧೆಯನ್ನೆ ಹರಿಸಿದ ವಾಗ್ಗೇಯಕಾರರು. ಅದ್ಭುತ ಸಂಗೀತ ಜ್ಞಾನ, ಶ್ರೀ ವೈಷ್ಣವ ಪರಂಪರೆ ಸಿದ್ಧಾಂತದ ಕೀರ್ತನೆಗಳನ್ನು ತೆಲುಗಿನಲ್ಲಿ ರಚಿಸಿ, ಮಹದುಪಕಾರ ಮಾಡಿದ ಮಹನೀಯರು. ಕಾವ್ಯತ್ವ ಮತ್ತು ಭಕ್ತಿ ಅನ್ನಮಾಚಾರ್ಯರ ಸಂಕೀರ್ತನೆವೆಂಬ ನಾಣ್ಯದ ಎರಡು ಮುಖಗಳು. ಮಾರ್ಗಕ್ಕಿಂತ ದೇಸಿಯ ಸೊಬಗೇ ಹೆಚ್ಚು.



ಶ್ರೀ ಪುರಂದರ ದಾಸರು, ಭಾವಪರವಶರಾಗಿ ಶ್ರೀ ಅನ್ನಮಾಚಾರ್ಯರಿಗೆ ಗೌರವ ಸೂಚಿಸಿದಂತೆ, ಶ್ರೀ ಅನ್ನಮಾಚಾರ್ಯರೂ, ಪುರಂರದಾಸರಿಗೆ ಗೌರವ ಸೂಚಿಸಿದ ಸಂಧರ್ಭ ಅವರ್ಣನೀಯ!!! ವೆಂಕಟೇಶನ ಮಹಾ ಭಕ್ತರಾದ ಅನ್ನಮಾಚಾರ್ಯರು ಮತ್ತು ಶ್ರೀ ಶ್ರೀ ಪಾದರಾಜರು ಸಮಕಾಲೀನರಾದ ಮಹಾನ್ ಹರಿದಾಸ ಭಕ್ತರು ಎಂಬುದು ಕೃತಿಯಿಂದ ಅರಿತು, ಕನ್ನಡಿಗರು ಸಂತೋಷ ವ್ಯಕ್ತಪಡಿಸಿ, ಸಂಭ್ರಮ ಪಡಬಹುದು. ವೇಂಗಡದೊಡೆಯನ ಕಿವಿಗೆ ಆಳ್ವಾರರ ಪ್ರಬಂದಗಳು ಬೀಳುವ ಮೊದಲೇ ಅನ್ನಮಾಚಾರ್ಯ ಕೀರ್ತನೆಗಳು ಬಿದ್ದವು. ಪ್ರಬಂಧಗಳಿಗೆ ಆ ಗುಡಿಯಲ್ಲಿ ನೆಲೆ ದೊರಕುವ ಮೊದಲೆ ಇವರ ಕೀರ್ತನೆಗಳಿಗೆ ಆಶ್ರಯ ದೊರೆಕಿತು. ತಾಮ್ರದ ಹಸ್ತಪ್ರತಿಗಳು ಸಂಕೀರ್ತನಭಂಡಾರದಲ್ಲಿ ಅವರ ಮಗನ ಕಾಲದಲ್ಲಿ ಸಿದ್ಧಪಡಿಸಿ ಜೋಪಾನಪಡಿಸಿಲಾಗಿದೆ.

ತಿರುಪತಿಯ ಶ್ರೀನಿವಾಸನ ಅಂತರಂಗದ ಮಹಾ ಭಕ್ತರಾದ ತೆಲುಗು ಭಾಷೆಯ ವಾಗ್ಗೇಯಕಾರರಾದ, ಶ್ರೀ ಅನ್ನಮಾಚಾರ್ಯರ ಬಗ್ಗೆ ಇತ್ತೀಚೆಗೆ 1949 ರ ನಂತರ ಆಧುನಿಕರಿಗೆ ಪರಿಚಯವಾಗಿದ್ದು ಎಂದು ಡಾ ಗುರುರಾಜ ಪೋಶೆಟ್ಟಿಹಳ್ಳಿಯವರ ಬೆಟ್ಟದೊಡೆಯ ಭಕ್ತಾಗ್ರೇಸರ ತಾಳ್ಳಪಾಕ ಅನ್ನಮಾಚಾರ್ಯರು. ಕೃತಿಯಿಂದ ತಿಳಿದು ಸಖೇದಾಶ್ಚರ್ಯವಾಯಿತು!!!

ಈ ಕೃತಿಯ ಪ್ರಾರಂಭದಲ್ಲಿ, ತಿರುಮಲೆಯ ಪುರಾಣ ಪ್ರಸಂಗ, ಏಳು ಬೆಟ್ಟಗಳ ಹೆಸರು, ಸ್ಥಳ ಮಹಾತ್ಮೆ, ಶ್ರೀನಿವಾಸ ಕಲ್ಯಾಣದ ವೈಭೋಗ,ತಿರುಮಲಗಿರಿಯ ಚರಿತ್ರೆ, ಶ್ರೀನಿವಾಸ, ಪದ್ಮಾವತಿಯ ವಿವಾಹ, ಭೂಲೋಕದ ವೈಕುಂಠ ಎಂಬ ವಿವರವನ್ನು, ಡಾ ಗುರುರಾಜ ಪೋಶೆಟ್ಟಿಹಳ್ಳಿಯವರು ತಮ್ಮ ಅದ್ಭುತ ಸರಳ ಸಾಹಿತ್ಯದಲ್ಲಿ ಬರೆದು, ಕನ್ನಡ ಸಾಹಿತ್ಯ ಲೋಕಕ್ಕೆ ಶ್ರೀವಾರಿ ಫೌಂಡೇಶನ್ ಮೂಲಕ ಬಿಡುಗಡೆಯಾಗಿ ಶ್ರೀನಿವಾಸದೇವರ ಮಹತ್ವ, ಶ್ರೀ ಅನ್ನಮಾಚಾರ್ಯರ ಚರಿತ್ರೆ, ಅವರು ವಿರಚಿತ ಕೀರ್ತನೆಗಳ ಕೃತಿ ಭಕ್ತರಿಗೆ ನೀಡಿದ ಈ ಕೈಪಿಡಿ ಭಕ್ತಿ ಕುಸುಮವಾಗಿದೆ.

' 64ಪುಟಗಳ ರೂ ಮೂವತ್ತು ಮೌಲ್ಯದ ಪ್ರತಿಗಳಿಗೆ 9739369621ಗೆ ಕರೆಮಾಡಿ

# 20 ಗಂಟೆಗಳ ಕಾಲ ತಡವಾಗಿ ಹೊರಟು ಪ್ರಯಾಣಿಕರ ಸಂಕಷ್ಟ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಗುರುವಾರ ದೆಹಲಿಯಿಂದ ಸ್ಯಾನ್ ಫ್ರಾನ್ಸಿಸ್ಕೋಗೆ ಹೊರಡಬೇಕಿದ್ದ ಏರ್ ಇಂಡಿಯಾ ವಿಮಾನವು ಸುಮಾರು 20 ಗಂಟೆಗಳ ಕಾಲ ತಡವಾಗಿ ಹೊರಟು ಪ್ರಯಾಣಿಕರನ್ನು ಸಂಕಷ್ಟಕ್ಕೆ ಸಿಲುಕಿಸಿದೆ. ವಿಮಾನವನ್ನು ಹತ್ತಲು ಮತ್ತು ಯಾವುದೇ ಎಸಿ ಇಲ್ಲದೆ ಉಸಿರುಗಟ್ಟುವ ವಾತಾವರಣದಲ್ಲಿ ಪ್ರಯಾಣಿಕರು ಪರಿತಪಿಸಿದ್ದಾರೆ. ಈ ಬಗ್ಗೆ ಸಾಮಾಜಿಕ ಮಾಧ್ಯಮಗಳಲ್ಲಿ ಫೋಟೋಗಳು ವೈರಲ್ ಆಗಿವೆ. ಎಸಿ ಇಲ್ಲದೆ ಉಸಿರುಗಟ್ಟುವ ವಾತಾವರಣದಲ್ಲಿ ಕೆಲವು ಮಂದಿ ಮೂರ್ಛೆ ತಪ್ಪಿ ಬಿದ್ದಿರುವ ಘಟನೆಯೂ ನಡೆದಿದೆ. ಕೆಲವರು ತಲೆ ಸುತ್ತಿ ಬಿದ್ದು ಸುಧಾರಿಸಿಕೊಂಡಿದ್ದಾರೆ. ಅಲ್ಲಲ್ಲೇ ಮಲಗಿದ್ದಾರೆ. ಬಳಿಕ ಅವರನ್ನು ವಿಮಾನದಿಂದ ಕೆಳಗಿಳಿಸಲಾಗಿದೆ. ಮಕ್ಕಳು ಮತ್ತು ಮಹಿಳೆಯರ ಪಾಡು ಹೇಳತೀರದ್ದಾಗಿದೆ.

ಗುರುವಾರ ಮಧ್ಯಾಹ್ನ ಟೇಕ್ ಆಫ್ ಆಗಬೇಕಿದ್ದ ಸ್ಯಾನ್ ಫ್ರಾನ್ಸಿಸ್ಕೋ ವಿಮಾನವು 20 ಗಂಟೆಗಳ ವಿಳಂಬದ ನಂತರ ಇಂದು ಬೆಳಗ್ಗೆ 11 ಗಂಟೆಗೆ ಹೊರಡಲಿದೆ. ಗುರುವಾರ, ಟ್ವಿಟರ್‌ನಲ್ಲಿ ಪತ್ರಕರ್ತೆ ಶ್ವೇತಾ ಪುಂಜ್ ಈ ಬಗ್ಗೆ ಮಾಹಿತಿ ಹಂಚಿಕೊಂಡಿದ್ದಾರೆ. ವಿಮಾನ ಸಂಖ್ಯೆ 183ರಲ್ಲಿ ಈ ಘಟನೆ ನಡೆದಿದೆ. ದೆಹಲಿ ವಿಮಾನ ನಿಲ್ದಾಣದಲ್ಲಿ ಇದ್ದ ವಿಮಾನದಲ್ಲಿ ಪ್ರಯಾಣಿಕರಲ್ಲಿ ಕೆಲವರು ಮೂರ್ಛೆ ಹೋಗಿದ್ದಾರೆ. ಬಳಿಕ ಅವರನ್ನು ವಿಮಾನದಿಂದ ಕೆಳಗಿಳಿಯಲು ಹೇಳಲಾಯಿತು ಎಂದು ತಿಳಿಸಿದ್ದಾರೆ.

# ಲೋಕಸಭಾ ಕ್ಷೇತ್ರ: ಸೋಲಿಲ್ಲದ ಸರದಾರ ಬಿರುದು ಯಾರಿಗೆ?

## ಸೋಲಿನ ರುಚಿ ನೋಡಿದ ಮಲ್ಲಿಕಾರ್ಜುನ ಖರ್ಗೆ ಈಗ ತಮ್ಮ ಅಳಿಯನ ಮೂಲಕ ಕ್ಷೇತ್ರವನ್ನು ಮತ್ತೆ ತಮ್ಮ ತೆಕ್ಕೆಗೆ ತರಲು ಪ್ರಯತ್ನ

• ಉದಯವಾಹಿನಿ, ಕಲಬುರಗಿ

ಕಲ್ಯಾಣ ಕರ್ನಾಟಕ ಭಾಗದ ಗುಲ್ಬರ್ಗಾ ಮೀಸಲು ಕ್ಷೇತ್ರ ಕಾಂಗ್ರೆಸ್‌ನ ಭದ್ರ ಕೋಟೆಯಾಗಿದೆ. ಕಳೆದ ಲೋ ಕಸಭಾ ಚುನಾವಣೆಯಲ್ಲಿ ಬಿಜೆ ಪಿಯ ಶತಪ್ರಯತ್ನದ ಹಿನ್ನೆಲೆಯಲ್ಲಿ ಇಲ್ಲಿ ಬಿಜೆಪಿಯ ಡಾ ಉಮೇಶ್ ಜಾಧವ್ ಗೆಲಯವಿನ ನಗೆ ಬೀರಿದ್ದರು. ಆದರೀಗ ಐದು ವರ್ಷ ಕಳೆದಿದೆ. ಮೊದಲ ಬಾರಿ ಸೋಲಿನ ರುಚಿ ನೋಡಿದ ಹಿರಿಯ ಮುಖಂಡ ಮಲ್ಲಿಕಾರ್ಜುನ ಖರ್ಗೆ ಈಗ ತಮ್ಮ ಅಳಿಯನ ಮೂಲಕ ಕ್ಷೇತ್ರವನ್ನು ಮತ್ತೆ ತಮ್ಮ ತೆಕ್ಕೆಗೆ ತರಲು ಪ್ರಯತ್ನ ನಡೆಸಿದ್ದಾರೆ.

**ಕಲಬುರಗಿ ಎಂದು ಹೆಸರು ಹೊಂದಿರುವ ಈ ಕ್ಷೇತ್ರ ಗುಲ್ಬರ್ಗಾ ಲೋಕಸಭಾ ಕ್ಷೇತ್ರವಾಗಿಯೇ ಗುರುತಿಸಿಕೊಂಡಿದೆ. ಕಲಬುರಗಿಗೆ ತೊಗರಿ ಕಣಜ ಎಂಬ ಹೆಸರೂ ಇದೆ. ಕೃಷ್ಣಾ ಮತ್ತು ಭೀಮಾ ನದಿಗಳು ಇಲ್ಲಿನ ಕೃಷಿ ಮತ್ತು ಕುಡಿಯುವ ನೀರಿಗೆ ಇರುವ ಮೂಲಗಳಾಗಿವೆ.**

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ತವರು ಕ್ಷೇತ್ರವಾಗಿರುವುದರಿಂದ ಕಲಬುರಗಿ ಲೋಕಸಭಾ ಕ್ಷೇತ್ರ ಭಾರೀ ಮಹತ್ವ ಪಡೆದುಕೊಂಡಿದೆ. ಕಳೆದ ಬಾರಿ ಸೋಲು ಕಂಡಿದ್ದ ಕಾಂಗ್ರೆಸ್ ಈ ಬಾರಿ ಗೆಲ್ಲುವ ವಿಶ್ವಾಸ ಹೊಂದಿದೆ. ಕಾಂಗ್ರೆಸ್ ಅಭ್ಯರ್ಥಿಯಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಈ ಬಾರಿ ತಮ್ಮ ಅಳಿಯ ರಾಧಾಕೃಷ್ಣ ದೊಡ್ಡಮನಿ ಅವರನ್ನು ಕಣಕ್ಕೆ ಇಳಿಸಿದ್ದಾರೆ. ಇನ್ನೂ ಬಿಜೆಪಿ ಅಭ್ಯರ್ಥಿಯಾಗಿ ಹಾಲಿ ಸಂಸದ ಡಾ. ಉಮೇಶ್ ಜಾಧವ್ ಅವರು ಎರಡನೇ ಬಾರಿಗೆ ಸ್ಪರ್ಧಿಸಿದ್ದಾರೆ. ಕಲಬುರಗಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಅಫಜಲಪೂರ, ಜೇವರ್ಗಿ, ಚಿತ್ತಾಪೂರ, ಗುಲಬರ್ಗಾ ದಕ್ಷಿಣ, ಗುಲಬರ್ಗಾ ಉತ್ತರ, ಗುಲಬರ್ಗಾ ಗ್ರಾಮೀಣ, ಸೇಡಂ ಮತ್ತು ಯಾದಗಿರಿ ಜಿಲ್ಲೆಯ ಗುರು ಮಠಕಲ್ ವಿಧಾನ ಕ್ಷೇತ್ರಗಳು ಬರಲಿವೆ. ಆದರೆ ಜಿಲ್ಲೆಯ ಆಳಂದ ಮತ್ತು ಚಿಂಚೋಳಿ ವಿಧಾನ ಸಭಾ ಕ್ಷೇತ್ರಗಳು ಬೀದರ್ ಲೋಕಸಭಾ ಕ್ಷೇತ್ರಕ್ಕೆ ಒಳಪಡುತ್ತವೆ. ಗುಲ್ಬರ್ಗಾ ಲೋಕಸಭಾ ಕ್ಷೇತ್ರದ ಎಂಟು ವಿಧಾನಸಭಾ ಕ್ಷೇತ್ರಗಳ ಪೈಕಿ ಆರರಲ್ಲಿ ಕಾಂಗ್ರೆಸ್ ಶಾಸಕರೇ ಪ್ರತಿನಿಧಿಸುತ್ತಿದ್ದಾರೆ. ತಲಾ ಒಂದೊಂದು ಕ್ಷೇತ್ರದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಶಾಸಕರಿದ್ದಾರೆ.

**ಪ್ರಧಾನಿ ಮೋದಿ ಕಳೆದ ವರ್ಷ ಜಿಲ್ಲೆಯಲ್ಲಿ ಮೆಗಾ ಜವಳಿ ಪಾರ್ಕ್, ಇತ್ತೀಚೆಗೆ ಬೆಂಗಳೂರು ಮತ್ತು ಕಲಬುರಗಿ ನಡುವೆ ಎರಡು ನೇರ ರೈಲುಗಳನ್ನು ಪ್ರಾರಂಭಿಸಿದರು. ಮೋದಿ ಅವರ ಕಾರ್ಯಗಳಿಗಾಗಿ ಮತ ಚಲಾಯಿಸುವಂತೆ ಜಾಧವ್ ಕೂಡ ಸಾಕಷ್ಟು ಪ್ರಚಾರ ಮಾಡಿದ್ದಾರೆ. ಮತ ದಾರರು ಕೈಹಿಡಿಯುವ ನಿರೀಕ್ಷೆಯಲ್ಲಿ ಇದ್ದಾರೆ.**

ಅಂದಹಾಗೆ ರಾಧಾಕೃಷ್ಣ ದೊಡ್ಡಮನಿ ಅವರಿಗೆ ರಾಜ ಕಾರಣವೇನೂ ಹೊಸದಲ್ಲ. ಈ ಹಿಂದೆ ಖರ್ಗೆ ಅವರ ರಾಜಕೀಯ ಬದುಕಿಗೆ ಬೆನ್ನೆಲುಬಾಗಿ ಪರದೆಯ ಹಿಂದೆ ನಿಂತು ತಂತ್ರಗಾರಿಕೆ ರೂಪಿಸಿದ್ದ ಅವರು ಇದೇ ಮೊದಲ ಬಾರಿ ನೇರವಾಗಿ ರಾಜಕೀಯ ಅಖಾಡಕ್ಕೆ ಇಳಿದಿದ್ದಾರೆ. ಅಲ್ಲದೆ ಕ್ಷೇತ್ರದಲ್ಲಿ ಸಾಕಷ್ಟು ಪ್ರಚಾರ ಕೂಡ ಮಾಡಿದ್ದಾರೆ.

2019ರ ಸಾರ್ವತ್ರಿಕ ಚುನಾವಣೆಯಲ್ಲಿ ಸೋತ ಈ ಎಸ್‌ಸಿ–ಮೀಸಲಾತಿ ಸ್ಥಾನವನ್ನು ಗೆಲ್ಲಲು ಅವರು ತಮ್ಮ ಎಲ್ಲಾ ಪ್ರಯತ್ನ ಮಾಡುತ್ತಿದ್ದಾರೆ. ಕಲಬುರಗಿ ಕ್ಷೇತ್ರ ಖರ್ಗೆ ಅವರ ಕರ್ಮ ಭೂಮಿಯಾಗಿದ್ದು 10 ಬಾರಿ ವಿಧಾನಸಭೆಗೆ ಮತ್ತು ಎರಡು ಬಾರಿ ಲೋಕಸಭೆಗೆ ಆಯ್ಕೆಯಾಗಿದ್ದಾರೆ. ಇನ್ನೂ ಬಿಜೆಪಿಯಿಂದ 2019ರಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರನ್ನು ಸೋಲಿಸಿದ ಹಾಲಿ ಸಂಸದ ಉಮೇಶ್ ಜಾಧವ್ ಅವರನ್ನು ಗುಲ್ಬರ್ಗಾ ಕ್ಷೇತ್ರವನ್ನು ಉಳಿಸಿಕೊಳ್ಳಲು ಬಿಜೆಪಿ ಮತ್ತೆ ಕಣಕ್ಕಿಳಿಸಿದೆ. ಕ್ಷೇತ್ರ ಗೆಲ್ಲುವುದಕ್ಕಾಗಿ ಬಿಜೆಪಿ ತನ್ನೆಲ್ಲಾ ತಂತ್ರಗಳನ್ನು ಬಳಸಿ ಚುನಾವಣೆಯನ್ನು ದಾಟಿ ಬಂದಿದೆ.

ಬಹುಮನಿ ಕೋಟೆ, ಬುದ್ಧ ವಿಹಾರ, ರಾಮತೀರ್ಥ ದೇವಸ್ಥಾನ, ಖ್ವಾಜಾ ಬಂದೇ ನವಾಜ ದುರ್ಗಾ ಮುಂತಾದ ಪ್ರೇಕ್ಷಣೀಯ ಸ್ಥಳಗಳು ಇಲ್ಲಿವೆ. ರಾಷ್ಟ್ರಕೂಟರು, ಚಾಲುಕ್ಯರು, ದೇವಗಿರಿಯ ಯಾದವರು, ದ್ವಾರಸಮುದ್ರದ ಹೊಯ್ಸಳರು, ಮೊಘಲರು ಹೀಗೆ ಇತಿಹಾಸದಲ್ಲಿ ಅನೇಕ ರಾಜ್ಯದ ಆಶ್ವಿಕೆಗೆ ಒಳಪಟ್ಟ ಗುಲ್ಬರ್ಗಾ, ಸ್ವಾತಂತ್ರ್ಯ ನಂತರವೂ ಹೈದರಾಬಾದ್ ಸಂಸ್ಥಾನದ ಅಧೀನದಲ್ಲಿತ್ತು. 1948ರ ಸೆಪ್ಟೆಂಬರ್‌ನಲ್ಲಿ ಭಾರತ ಗಣರಾಜ್ಯಕ್ಕೆ ಸೇರ್ಪಡೆಯಾಯಿತು.

# ಹಿರಿಯರು ಯುವಕರು ಯಾವುದೇ ದುಶ್ಚಟಗಳಿಗೆ ಬಲಿಯಾಗಬಾರದು

• ಉದಯವಾಹಿನಿ,ಚಿಂಚೋಳಿ

ಜನರ ಭವಿಷ್ಯದ ಬಗ್ಗೆ ಚಿಂತನೆ ಮಾಡಿ ಸರ್ಕಾರಗಳು ತಂಬಾಕು ನಿಷೇಧವನ್ನು ಮಾಡುತ್ತಾರೆ, ತಂಬಾಕು ಸೇವನೆಯಿಂದ ಪ್ರತಿವರ್ಷ ವಿಶ್ವದ್ಯಂತ ಆರು ಮಿಲಿಯನಷ್ಟು ಜನರು ಪ್ರಾಣ ಕಳೆದುಕೊಳ್ಳುತ್ತಿದ್ದು ಹಿರಿಯರು ಯುವಕರು ಯಾವುದೇ ದುಶ್ಚಟಗಳಿಗೆ ಬಲಿಯಾಗಬಾರದು ಎಂದು ಜಿಲ್ಲಾ ಜನಜಾಗೃತಿ ವೇದಿಕೆ ಉಪಾಧ್ಯಕ್ಷೆ ನರಸಮ್ಮಾ ಲಕ್ಷ್ಮಣ ಆವುಂಟಿ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಸಂಸ್ಥೆ ಮತ್ತು ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಹಾಗೂ ಸರ್ಕಾರಿ ಪ್ರಥಮದರ್ಜೆ ಕಾಲೇಜು ಎನ್ ಎಸ್‌ಎಸ್ ಘಟಕಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ ವಿಶ್ವ ತಂಬಾಕು ವಿರೋಧಿ ದಿನಾಚರಣೆ ಪ್ರಯುಕ್ತ ಮಾದಕ ವಸ್ತುಗಳ ಬಗ್ಗೆ ಜಾಗೃತಿ ಕಾರ್ಯಕ್ರಮವನ್ನು ಉಧ್ಘಾಟಿಸಿ ಮಾತನಾಡಿದ ಅವರು,1987ರಲ್ಲಿ ಮೊದಲ ಬಾರಿಗೆ ವಿಶ್ವ ಆರೋಗ್ಯ


ಉದಯವಾಹಿನಿ ಚಿತ್ರ

ಸಂಸ್ಥೆಯು ತಂಬಾಕು ವಿರೋಧಿ ದಿನಾಚರಣೆಯ ಬಗ್ಗೆ ಅಧಿಸೂಚನೆ ಹೊರಡಿಸಲಾಗಿತ್ತು. ಇಂದಿನ ಹಿರಿಯರು ಕಿರಿಯರು ಯುವಕರು ಯಾವುದೇ ದುಶ್ಚಟಗಳಿಗೆ ಬಲಿಯಾಗದೆ ಪೂಜ್ಯರುಗಳಿಂದ ತಂದೆ ತಾಯಂದಿರ ಮಾತುಗಳು ಕೇಳಿ ಒಳ್ಳೆಯ ಸಂಸ್ಕೃತಿ ಸಂಸ್ಕಾರವನ್ನು ಕಲಿಯಬೇಕು ಎಂದರು.

ಪ್ರಥಮದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ಸಂತೋಷಕುಮಾರ ಕಟಕೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಸರ್ಕಾರಿ ಆಸ್ಪತ್ರೆಯ ನರ್ಸಿಂಗ್ ಅಧಿಕಾರಿ, ಸಂಪನ್ಮೂಲ ವ್ಯಕ್ತಿ ರಾಜೇಶ್ವರಿ ರಾಠೋಡ್, ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಯೋಜನಾಧಿಕಾರಿ ಗೋಪಾಲ್ ಜಿ,ಕಸಾಪ ಅಧ್ಯಕ್ಷ ಸುರೇಶ ದೇಶಪಾಂಡೆ, ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ ಸತೀಶ್ ಕೆ.ಎಚ್.ಕಾಲೇಜು ಸಿಬ್ಬಂದಿಗಳು ವಿದ್ಯಾರ್ಥಿಗಳು ವಲಯದ ಮೇಲ್ವಿಚಾರಕರು ಮತ್ತು ಸೇವಾಪ್ರತಿನಿಧಿಗಳು ಇದ್ದರು.

**ಬೀಡಿ ಸಿಗರೇಟು ತಂಬಾಕುಗಳ ಸೇವನೆಗಳಿಂದ ಜನರ ಆರೋಗ್ಯದ ಮೇಲೆ ಹಾನಿಕಾರಕವಾಗಿದೆ, ತಂಬಾಕು ಉತ್ಪನ್ನಗಳ ಬಳಕೆಯಲ್ಲಿ ಪ್ರಪಂಚ ಮೊದ ಲನೆಯ ಸ್ಥಾನದಲ್ಲಿದರೆ ಭಾರತ ಎರಡನೇಯ ಸ್ಥಾನದಲ್ಲಿದೆ, ತಂಬಾಕು ಸೇವನೆಯಿಂದ ಜಾಗತಿಕವಾಗಿ ಪ್ರತಿವರ್ಷ70ಲಕ್ಷಕ್ಕಿಂತ ಅಧಿಕವಾದರೆ ಭಾರತದಲ್ಲಿ 10ಲಕ್ಷ ಜನರು ಬೀಡಿ ಸಿಗರೇಟು ತಂಬಾಕಿನ ನೇರ ಸೇವನೆಯಿಂದ ಉಂಟಾಗುವ ಕ್ಯಾನ್ಸರ್ ಇತರೆ ಕಾಯಿಲೆಗಳಿಗೆ ಬಲಿಯಾಗುತ್ತಿದ್ದಾರೆ**

**- ನರಸಮ್ಮಾ ಲಕ್ಷ್ಮಣ ಆವುಂಟಿ ಉಪಾಧ್ಯಕ್ಷೆ**

# ನೈರುತ್ಯ ಪದವೀಧರ ಕ್ಷೇತ್ರದ ಚುನಾವಣೆ ಹಿನ್ನೆಲೆ ಉಡುಪಿ ಜಿಲ್ಲಾ ಬಿಜೆಪಿಯಲ್ಲಿ ಬಿರುಕು

• ಉದಯವಾಹಿನಿ, ಉಡುಪಿ

ನೈರುತ್ಯ ಪದವೀಧರ ಕ್ಷೇತ್ರದ ಚುನಾವಣೆ ಹಿನ್ನೆಲೆಯಲ್ಲಿ ಉಡುಪಿ ಜಿಲ್ಲಾ ಬಿಜೆಪಿಯಲ್ಲಿ ಬಿರುಕು ಕಾಣಿಸಿಕೊಂಡಿದೆ. ಮಾಜಿ ಶಾಸಕ ರಘುಪತಿ ಭಟ್ ಬಿಜೆಪಿ ಟಿಕೆಟ್ ಕೈತಪ್ಪಿದ ಹಿನ್ನೆಲೆಯಲ್ಲಿ ಬಂಡಾಯದ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದು, ಜಿಲ್ಲಾ ಬಿಜೆಪಿಯಲ್ಲಿ ಬಿರುಗಾಳಿ ಎದ್ದಿದೆ.

ಕಳೆದ ವಿಧಾನಸಭಾ ಚುನಾವಣೆಯ ಸಂದರ್ಭ ಉಡುಪಿಯಿಂದ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಲು ಬಿಜೆಪಿ ಪಕ್ಷ ಟಿಕೆಟ್ ನೀಡುತ್ತದೆ ಎಂದು ರಘುಪತಿ ಭಟ್ ಲೆಕ್ಕಾಚಾರ ಹಾಕಿದ್ದರು. ಆದರೆ ಪಕ್ಷ ಹೊಸಬರಿಗೆ ಮಣೆ ಹಾಕುವ ನಿಟ್ಟಿನಲ್ಲಿ, ರಘುಪತಿ ಭಟ್ ಅವರ ಗರಡಿ ಯಲ್ಲಿಯೇ ಪಳಗಿದ ಮೊಗವೀರ ಸಮುದಾಯದ ಯಶ್ ಪಾಲ್ ಸುವರ್ಣ ಅವರಿಗೆ ಈ ಬಾರಿ ಉಡುಪಿಯ ಶಾಸಕನಾಗಲು ಅವಕಾಶ ಮಾಡಿಕೊಟ್ಟಿತ್ತು.

ಇದರಿಂದ ರಘುಪತಿ ಭಟ್ ಅವರು ಬೇಸರದಿಂದ ಇದ್ದರು, ಮುಂದೆ ಬರುವ ನೈರುತ್ಯ ಪದವೀಧರ ಕ್ಷೇತ್ರದ


ಉದಯವಾಹಿನಿ ಚಿತ್ರ

ಚುನಾವಣೆಯಲ್ಲಿ ಪಕ್ಷ ತನಗೆ ಟಿಕೆಟ್ ನೀಡಬಹುದು ಎನ್ನುವ ಆಸೆಯಲ್ಲಿ ಹೊಸ ಪದವೀಧರ ಮತದಾರರನ್ನು ಸೇರ್ಪಡೆಸುವ ನಿಟ್ಟಿನಲ್ಲಿ ರಘುಪತಿ ಭಟ್ ಹಗಲಿರುಳು ಶ್ರಮಿಸಿದ್ದರು. ಆದರೆ ಕೊನೆಯ ಕ್ಷಣದಲ್ಲಿ ಪಕ್ಷ ಡಾ. ಧನಂಜಯ್ ಸರ್ಜಿ ಅವರಿಗೆ ಟಿಕೆಟ್ ನೀಡಲಾಯಿತು.

ಇದರಿಂದ ಮನನೊಂದ ರಘುಪತಿ ಭಟ್ ಈ ಬಾರಿ ಬಂಡಾಯ ಅಭ್ಯರ್ಥಿಯಾಗಿ ಕಣಕ್ಕಿಳಿದಿರುವುದು, ಉಡುಪಿ ಜಿಲ್ಲಾ ಬಿಜೆಪಿಯಲ್ಲಿ ಬಿರುಕು ಮೂಡಲು ಕಾರಣವಾಗಿದೆ. ಈ ಅಸಮಾಧಾನ ಕಾರ್ಯಕರ್ತರ ಗೊಂದಲ ನಿವಾರಣೆಗಾಗಿ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಬಿ.ಎಲ್ ಸಂತೋಷ್ ಉಡುಪಿಗೆ ಆಗಮಿಸಿದ್ದಾರೆ.

# ಆಯಾಮಗಳ ತನಿಖೆಗೆ ಮಾಜಿ ಸಿಎಂ ಒತ್ತಾಯ

• ಉದಯವಾಹಿನಿ, ಹುಬ್ಬಳ್ಳಿ

**ಪ್ರಜ್ವಲ್ ಕಾನೂನಾತ್ಮಕವಾಗಿ ಶರಣು**

ಹಾಸನ ಪೆನ್‌ಡ್ರೈವ್ ಪ್ರಕರಣ ಬೆಳಕಿಗೆ ಬರುತ್ತಿದ್ದಂತೆ ಒಂದು ತಿಂಗಳಿನಿಂದ ತಲೆಮರೆಸಿಕೊಂಡಿದ್ದ ಸಂಸದ ಪ್ರಜ್ವಲ್ ರೇವಣ್ಣ ನೆನ್ನೆ ತಡರಾತ್ರಿ ಸ್ವದೇಶಕ್ಕೆ ಮರಳಿದ್ದಾರೆ.



ಈ ಪ್ರಕರಣ ಕುರಿತು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರು ಪ್ರತಿಕ್ರಿಯೆ ನೀಡಿದ್ದಾರೆ. ಸಂಸದ ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ಎಸ್‌ಐಟಿ ತನಿಖಾಧಿಖಾರಿಗಳು ಎಲ್ಲಾ ಆಯಾಮಗಳಲ್ಲಿಯೂ ತನಿಖೆ ನಡೆಸಬೇಕು, ಸಂತ್ರಸ್ಥರಿಗೆ ನ್ಯಾಯ ದೊರೆ ಯಬೇಕು.

ಪೆನ್ ಡ್ರೈವ್ ವಿಚಾರದಲ್ಲಿ ಪ್ರಜ್ವಲ್ ರೇವಣ್ಣ ಕಾನೂನಾತ್ಮಕವಾಗಿ ಶರಣಾಗಿದ್ದಾನೆ. ಎಸ್ ಐಟಿಯವರು ತನಿಖೆಯನ್ನು ಕಟುಬದ್ಧವಾಗಿ ಮಾಡಬೇಕು ಎನ್ನುವುದು ಇಡೀ ಕರ್ನಾಟಕ ಜನರ ಒತ್ತಾಯ.

ಅಲ್ಲದೇ ಸಂತ್ರಸ್ತರಿಗೆ ನ್ಯಾಯ ಸಿಗಬೇಕು ಎಂದು ಅವರು ಪುನರುಚ್ಚರಿಸಿದರು. ಪ್ರಕರಣದ ಘಟನೆಗಳು ಯಾವ ರೀತಿ ಪ್ರಚಲಿತಕ್ಕೆ ಬಂತು, ಯಾರು ಪ್ರಚಾರ ಮಾಡಿದರು. ಪೆನ್ ಡ್ರೈವ್ ಯಾರ ಹತ್ತಿರ ಇತ್ತು ಅವರು ಯಾಕೆ ಬಂಧನ ಆದರೆ ಎಂಬೆಲ್ಲ ಹಲವು ಆಯಾಮಗಳನ್ನು ಪಡೆದಿತ್ತು. ಖಂಡಿತವಾಗಿಯೂ ಇದರಲ್ಲಿ ರಾಜಕಾರಣವು ಬೆರತ್ತಿದೆ. ಕಾನೂನು ಪ್ರಕಾರ ಇಂತಹದ್ದನ್ನು ಪ್ರಚಾರ ಮಾಡುವುದು ಕಾನೂನಿಗೆ ವಿರುದ್ಧವಾದದ್ದು. ಆ ನಿಟ್ಟಿನಲ್ಲಿ ಎಸ್ ಐಟಿ ಮುಂದುವರೆದು ತನಿಖೆ ಮಾಡ ಬೇಕು ಎಂದು ಅವರು ಒತ್ತಾಯಿಸಿದರು.

# ಖಾಸಗಿ ಬಸ್ ಚಾಲಕ-ನಿರ್ವಾಹಕರಿಗೆ ತಿಂಗಳಿಗೊಂದು ಕಾರ್ಯಾಗಾರ

• ಉದಯವಾಹಿನಿ, ಮಹಾನಗರ

ಸಂಚಾರ ನಿಯಮ ಪಾಲನೆ, ಒತ್ತಡದ ಮನಸ್ಸಿಗೆ ಸಮಾಲೋಚನೆ ಸಹಿತ ವಿವಿಧ ಚಟುವಟಿಕೆಗಳನ್ನಾಧರಿಸಿ ಖಾಸಗಿ ಬಸ್ ಚಾಲಕ ನಿರ್ವಾಹಕರಿಗೆ ತಿಂಗಳಿಗೊಂದು ಕಾರ್ಯಾಗಾರ ನಡೆಸಲು ಸಾರಿಗೆ ಇಲಾಖೆ ಮುಂದಾಗಿದೆ. ಕೆಲವೊಂದು ಖಾಸಗಿ ಬಸ್ ಗಳಲ್ಲಿ ಸಂಚಾರ ನಿಯಮ ಪಾಲನೆ ಮಾಡಲಾಗುತ್ತಿಲ್ಲ, ಟೈಮ್ ಕೀಪಿಂಗ್ ಹೆಸರಿನಲ್ಲಿ ಜಗಳಗಳು ನಡೆಯುತ್ತಿದೆ, ತಂಗುದಾಣದ ಎದುರು ಬಸ್ ನಿಲ್ಲುತ್ತಿಲ್ಲ, ಕರ್ಕಶ ಹಾರ್ನ್ ಬಳಕೆ ಮಾಡಲಾಗುತ್ತಿದೆ.

ಬಸ್ ಟಿಕೆಟ್ ನೀಡುತ್ತಿಲ್ಲ ಎಂಬಿತ್ಯಾದಿ ದೂರುಗಳು ಪ್ರಯಾಣಿಕರಿಂದ ಬರುತ್ತಿದೆ. ಈ ಹಿನ್ನೆಲೆಯಲ್ಲಿ ಬಸ್ ಮಾಲಕರ ಸಂಘದಿಂದ ಬ್ಯಾಚ್ ಆಧಾರವಾಗಿ ಚಾಲಕ-ನಿರ್ವಾಹಕರನ್ನು ಕಳುಹಿಸಿಕೊಟ್ಟರೆ ತರಬೇತಿ


ಉದಯವಾಹಿನಿ ಚಿತ್ರ

ನೀಡಲು ಸಾರಿಗೆ ಇಲಾಖೆ ನಿರ್ಧರಿಸಿದೆ.ಬಸ್ ಚಾಲಕರಿಗೆ ಟೈಮಿಂಗ್ ವಿಚಾರದಲ್ಲಿ ಒತ್ತಡ ಹೆಚ್ಚಾಗುತ್ತಿದ್ದು, 40ರ ವಯಸ್ಸಿನಲ್ಲಿಯೇ ಹಲವು ರೋಗಗಳು ಕಾಣಿಸಿಕೊಳ್ಳುತ್ತಿದೆ. ಬೆಳಗ್ಗೆಯಿಂದ ಸಂಜೆಯವರೆಗೆ ಒಂದೇ ರೂಟ್‌ನಲ್ಲಿ ಸಂಚರಿಸುತ್ತೇವೆ, ಇದರಿಂದ ಮನಸ್ಸಿನ ಮೇಲೆ ಪರಿಣಾಮ ಬೀರುತ್ತಿದೆ ಎಂದು ಬಸ್ ಮಾಲಕರು ಸಹಿತ ಚಾಲಕ- ನಿರ್ವಾಹಕರಿಂದ ಅಹವಾಲುಗಳು ಕೇಳಿ ಬರುತ್ತಿದೆ. ಮುಡಿಪುವಿನಲ್ಲಿ ಈಗಾಗಲೇ ಭಾರೀ ವಾಹನ ಚಾಲನ ತರಬೇತಿ ಸಂಸ್ಥೆ ಕಾರ್ಯನಿರ್ವಹಿಸುತ್ತಿದ್ದು, ಇದರಲ್ಲಿ ಪ್ರತಿ ತಿಂಗಳು 20 ಮಂದಿ ಚಾಲಕ ನಿರ್ವಾಹಕರಿಗೆ ಕಾರ್ಯಾಗಾರ ನಡೆಸಲು ನಿರ್ಧರಿಸಲಾಗಿದೆ.

**ಇನ್ನಷ್ಟು ಕಾರ್ಯಾಗಾರ ಸಂಚಾರ ನಿಯಮ ಪಾಲನೆಗೆ ಸಂಬಂಧಪಟ್ಟಂತೆ ದಕ್ಷಿಣ ಕನ್ನಡ ಜಿಲ್ಲಾ ಖಾಸಗಿ ಬಸ್ ಮಾಲಕರ ಸಂಘದಿಂದ ಬಸ್ ಚಾಲಕರು ಮತ್ತು ನಿರ್ವಾಹಕರಿಗೆ ಈಗಾಗಲೇ ಕೆಲವೊಂದು ಕಡೆಗಳಲ್ಲಿ ಕಾರ್ಯಾಗಾರ ನಡೆಸಲಾಗಿದೆ. ಮುಂದಿನ ದಿನಗಳಲ್ಲಿ ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ಮಂಗಳೂರಿನ ಇನ್ನಷ್ಟು ಕಡೆಗಳಲ್ಲಿ ಕಾರ್ಯಾಗಾರ ನಡೆಸಲು ಸಂಘ ಮುಂದಾಗಿದೆ.**

# ಕಳವು ಮಾಡಿದ್ದ ಆರೋಪಿ ಬಂಧನ; ಮತ್ತೊಬ್ಬ ಪರಾರಿ

• ಉದಯವಾಹಿನಿ, ಬಳ್ಳಾರಿ

ನಗರದ ಪಾಲಿಕೆ ಕಚೇರಿ ಆವರಣದಲ್ಲಿನ ಬಳ್ಳಾರಿ ಒನ್ ಕೇಂದ್ರದಲ್ಲಿ ಕಳೆದ ತಿಂಗಳು ನಡೆದಿದ್ದ 75 ಲಕ್ಷ ರೂ. ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಇಲ್ಲಿನ ಗಾಂಧಿನಗರ ಠಾಣೆಯ ಪೊಲೀಸರು ಒಬ್ಬನನ್ನು ಬಂಧಿಸಿದ್ದಾರೆ.

ತಾಲ್ಲೂಕಿನ ಶ್ರೀಧರಗಡ್ಡೆ ಗ್ರಾಮದ ನಿವಾಸಿ ಎಸ್.ಟಿ.ಎಂ.ಕೆ.ಚಂದ್ರಶೇಖರಯ್ಯ ಬಂಧಿತ ಆರೋಪಿಯಾಗಿದ್ದು, ಮತ್ತೊಬ್ಬ ಆರೋಪಿ ಕೆ. ಮಹಾಲಿಂಗಯ್ಯ


ಉದಯವಾಹಿನಿ ಚಿತ್ರ

ನಾಪತ್ತೆಯಾಗಿದ್ದಾನೆ. ನಗರದ ಪಾಲಿಕೆ ಕಚೇರಿ ಆವರಣದಲ್ಲಿದ್ದ ಬಳ್ಳಾರಿ ಒನ್ ಕೇಂದ್ರದಲ್ಲಿ ಕಳೆದ ಏಪ್ರಿಲ್ 28 ರಂದು ರಾತ್ರಿ ಕೇಂದ್ರದಲ್ಲಿದ್ದ 75 ಲಕ್ಷ ರೂ.ಗಳು ಕಳುವಾಗಿತ್ತು. ಆದರೆ, ಕೇಂದ್ರದ ಯಾವುದೇ ಬೀಗ ಮುರಿಯದೇ ಹಣ ಕಳುವಾಗಿದ್ದು, ಕೇಂದ್ರದ ಬೀಗ ಇಟ್ಟುಕೊಳ್ಳುತ್ತಿದ್ದ ಸಿಬ್ಬಂದಿ ಅಂದ್ರಾಳ್ ಗ್ರಾಮದ ಕೆ.ಮಹಾಲಿಂಗ ಎನ್ನುವವನು ಹಣವನ್ನು ಕಳ್ಳತನ ಮಾಡಿ ದುರುಪಯೋಗ ಪಡಿಸಿಕೊಂಡಿದ್ದಾನೆ ಎಂದು ಕರ್ನಾಟಕ ಕೇಂದ್ರದ ರಾಜ್ಯ ಯೋಜನಾ ವ್ಯವಸ್ಥಾಪಕ ಉದಯಕುಮಾರ್ ಅರ್ಕಸಾಲಿ ಎನ್ನುವವರು ಇಲ್ಲಿನ ಗಾಂಧಿನಗರ ಠಾಣೆಯಲ್ಲಿ ದೂರು ನೀಡಿದ್ದು, ಪ್ರಕರಣ ದಾಖಲಾಗಿತ್ತು. ಪ್ರಕರಣವನ್ನು ಭೇದಿಸಲು ಎಸ್ ಪಿ ರಂಜಿತ್ ಕುಮಾರ್ ಬಂಡಾರು ಅವರು ಗಾಂಧಿನಗರ ಠಾಣೆಯ ಸಿಪಿಐ ಸಿದ್ದರಾಮೇಶ್ವರ ಗಡಾದ, ಪಿಎಸ್ ಐ ಸೌಮ್ಯ, ನಾರಾಯಣ ಸ್ವಾಮಿ, ಅಪರಾಧ ವಿಭಾಗದ ಸಿಬ್ಬಂದಿಗಳ ತಂಡವನ್ನು ರಚಿಸಿದ್ದು, ತನಿಖೆ ಕೈಗೊಂಡ ತಂಡವು ಹಲವು ವೈಜ್ಞಾನಿಕ ವಿಧಾನಗಳನ್ನು ಬಳಸಿ ತಾಲ್ಲೂಕಿನ ಶ್ರೀಧರಗಡ್ಡೆ ಗ್ರಾಮದ ನಿವಾಸಿಯಾದ ಆರೋಪಿ ಎಸ್.ಟಿ.ಎಂ.ಕೆ.ಚಂದ್ರಶೇಖರಯ್ಯನನ್ನು ಬಂಧಿಸಿದೆ.

**ಬಂಧಿತನಿಂದ 72 ಲಕ್ಷ ರೂ. ನಗದು ಹಣ, ಕೃತ್ಯಕ್ಕೆ ಬಳಸಿದ್ದ ಒಂದು ಎಸ್ ಪಿ ಮೋಟರ್ ಬೈಕ್, ಕಳ್ಳತನ ಮಾಡಿದ್ದ ಹಣದಲ್ಲಿ ಖರೀದಿಸಿದ್ದ ಎರಡು ಮೊಬೈಲ್ ಗಳನ್ನು ವಶಕ್ಕೆ ಪಡೆದುಕೊಳ್ಳಲಾಗಿದೆ.**

# ಯಾರಿಗೂ ಬೇಡವಾದ ಶುದ್ಧ ನೀರಿನ ಘಟಕಗಳು

• ಉದಯವಾಹಿನಿ, ಕುಂಡಡಕ್ಕಪುತ್ತೂರು

ಈ ಬೇಸಗೆಯಲ್ಲಿ ತಾಲ್ಲೂಕಿನ ಕೆಲವು ಭಾಗಗಳಲ್ಲಿ ನೀರಿಗೂ ತತ್ವಾರ ಉಂಟಾಗಿತ್ತು. ಹಾಗಂತ ಲಕ್ಷ-ಲಕ್ಷ ರೂ. ಖರ್ಚು ಮಾಡಿ ನೀರು ಪೂರೈಸಲೆಂದೇ ನಿರ್ಮಿಸಲಾಗಿದ್ದ ಶುದ್ಧ ಕುಡಿಯುವ ನೀರಿನ ಘಟಕ ಹನಿ ನೀರು ಕೊಡುವ ಸ್ಥಿತಿಯಲ್ಲಿರಲಿಲ್ಲ.ಪಕ್ಕಾ ರಹಸ್ಯ ಬಂಗಲೆಯನ್ನು ನೆನಪಿಸುತ್ತಿರುವ ಈ ಘಟಕದ ಸ್ಥಿತಿಗೆ ಆಡಳಿತ ವ್ಯವಸ್ಥೆ ತಲೆ ತಗ್ಗಿಸುವಂತಿದೆ. ಈ ಬಾರಿ ಬಯಲಾದದ್ದು ಬರಗಾಲವಲ್ಲ, ಶುದ್ಧ ನೀರಿನ ಘಟಕದ ವ್ಯವಸ್ಥೆಯ ಬಂಡವಾಳ.

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ನೇತೃತ್ವದಲ್ಲಿ 2016 ರಲ್ಲಿ ಶುದ್ಧ


ಉದಯವಾಹಿನಿ ಚಿತ್ರ

ಕುಡಿಯುವ ನೀರಿನ ಘಟಕ ನಿರ್ಮಾಣ ಯೋಜನೆ ಪ್ರಸ್ತಾಪ ವಾದಾಗದ. ಕ.ಜಿಲ್ಲೆಗೆ ಸೂಕ್ತ ಅಲ್ಲ ಅನ್ನುವ ಅಭಿಪ್ರಾಯ ಕೇಳಿ ಬಂದಿತ್ತು. ಮುಂದೊಂದು ದಿನ ನೀರಿಗಾಗಿ ಹಾಹಾಕಾರ ಉಂಟಾದಾಗ ಪ್ರಯೋಜನ ಆದೀತು ಎನ್ನುವ ಉತ್ತರ ನೀಡಿ ಯೋಜನೆ ತರಾತುರಿಯಲ್ಲಿ ಚಾಲನೆ ನೀಡಲಾಯಿತು.

ಗ್ರಾ.ಪಂ. ವ್ಯಾಪ್ತಿಗಳಲ್ಲಿ 12 ಲಕ್ಷ ರೂ. ವೆಚ್ಚದಲ್ಲಿ ಘಟಕ ನಿರ್ಮಾಣ ಕೈಗೆತ್ತಿಕೊಳ್ಳಲಾಗಿತ್ತು. ಕೆಆರ್‌ಡಿಎಲ್ ಕಾಮಗಾರಿ ನಿರ್ವಹಣೆ ಜವಾಬ್ದಾರಿ ಹೊಂದಿತ್ತು.

ಈ ಯೋಜನೆ ಪ್ರಕಾರ ಜನವಸತಿ ಪ್ರದೇಶದಲ್ಲಿ ಘಟಕ ನಿರ್ಮಿಸಿ ನೀರಿನ ಅಗತ್ಯವುಳ್ಳ ವ್ಯಕ್ತಿಯು 2 ರೂ.ಕಾಯಿನ್ ಹಾಕಿ 20 ಲೀಟರ್ ನೀರನ್ನು ಪಡೆದುಕೊಳ್ಳುವುದಾಗಿತ್ತು. 13 ಸ್ಥಳ, 7 ಘಟಕ ತಾಲೂಕಿನಲ್ಲಿ 13 ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಿಸಲು ಸ್ಥಳ ಗುರುತು ಮಾಡಿದ್ದರೂ ಪೂರ್ಣಗೊಂಡದ್ದು 7 ಮಾತ್ರ. ಉಳಿದದ್ದು ಆರಂಭದಲ್ಲೇ ನಿಂತಿತ್ತು. ಕೆಲವೆಡೇ ಅಡಿಪಾಯ ಹಂತದಲ್ಲೇ ಬಾಕಿಯಾಯಿತು.

# ಪಂಪಾ ಸರೋವರದ ಬಳಿ ಗವಿವರ್ಣ ಚಿತ್ರಗಳು ಪತ್ತೆ

• ಉದಯವಾಹಿನಿ, ಕೊಪ್ಪಳ

ಹಂಪಿ ವಿಶ್ವ ಪರಂಪರೆ ಪ್ರದೇಶದಲ್ಲಿರುವ ಜಿಲ್ಲೆಯ ಗಂಗಾವತಿ ತಾಲ್ಲೂಕಿನ ಆನೆಗೊಂದಿಯ ಹತ್ತಿರದ ಪಂಪ ಸರೋವರಕ್ಕೆ ಹೋಗುವ ದಾರಿಯ ಎಡಬದಿಯ ಗುಡ್ಡದಲ್ಲಿರುವ ಬಂಡೆಯಲ್ಲಿ ಗವಿವರ್ಣ ಚಿತ್ರಗಳು ಪತ್ತೆಯಾಗಿವೆ. ರಾಜ್ಯ ಪುರಾತತ್ವ ಸಂಗ್ರಹಾಲಯಗಳು ಪರಂಪರೆ ಇಲಾಖೆಯ ಕಮಲಾಪುರ ಹಂಪಿಯ ಉಪ ನಿರ್ದೇಶಕ ಆರ್.ಶೇಜೇಶ್ವರ ಹಾಗೂ ಪುರಾತತ್ವ ಸಹಾಯಕ ಆರ್.ಮಂಜನಾಯ್ಕ ಕ್ಷೇತ್ರ ಕಾರ್ಯ ಕೈಗೊಂಡಾಗ ಇವು ಪತ್ತೆಯಾಗಿವೆ.

ಕಿತ್ತಳೆ ಕೆಂಪು ವರ್ಣದಿಂದ ಮೂಡಿಸಿದ ಚಿತ್ರಗಳಾಗಿದ್ದು, ನಿಂತಿರುವ ಗೂಳಿಯು ಡುಬ್ಬದಿಂದ ಕೂಡಿವೆ. ಈ ಗೂಳಿಯ ಕಾಲುಗಳನ್ನು ಹುಲಿಯು ಹಿಡಿದಿರುವಂತೆ ಚಿತ್ರಿಸಲಾಗಿದ್ದು, ಹುಲಿಯು ದಷ್ಟಪುಷ್ಟವಾಗಿದ್ದು ಪಟ್ಟೆಗಳಿಂದ ಕೂಡಿದೆ. ಹುಲಿಯ ಚಿತ್ರ 50 ಸೆಂ.ಮೀ ಉದ್ದ ಹಾಗೂ 20 ಸೆಂ.ಮೀ ಅಗಲವಾಗಿದೆ. ಗೂಳಿಯು 40.ಸೆಂ.ಮೀ ಉದ್ದ ಹಾಗೂ 20 ಸೆಂ.ಮೀ ಅಗಲವಾಗಿದೆ. ಇನ್ನೆರಡು ಚಿಕ್ಕ ಚಿಕ್ಕ ಗೂಳಿಗಳ ಅಸ್ಪಷ್ಟ ಚಿತ್ರಗಳು ಗೋಚರಿಸುತ್ತವೆ. ಈ ಚಿತ್ರಗಳ ಅಕ್ಕಪಕ್ಕದಲ್ಲಿ ಅಸ್ಪಷ್ಟ ಕಿತ್ತಳೆ ಕೆಂಪು ವರ್ಣದಿಂದ ಮೂಡಿಸಿದ ಇತರ ಚಿತ್ರಗಳು ಸಹ ಕಂಡುಬರುತ್ತವೆ.

ಈ ಗವಿ ವರ್ಣ ಚಿತ್ರಗಳು ನೈಸರ್ಗಿಕವಾಗಿ ಎರಡು ಬಂಡೆಗಳಿರುವ ಒಂದು ಬೃಹದಾಕಾರದ ಬಂಡೆಯು ಸಣ್ಣ ಪ್ರಮಾಣದ ಬಂಡೆಯ ಮೇಲೆ ವಾಲಿ ನಿಂತಿದ್ದು ಇದರಲ್ಲಿ ವರ್ಣ ಚಿತ್ರ ಮೂಡಿರುವ ಸಣ್ಣ ಬಂಡೆಗೆ ರಕ್ಷಣೆಯಂತಿದೆ. ಇದನ್ನು ಬಳಸಿಕೊಂಡು ವರ್ಣ ಚಿತ್ರಕ್ಕೆ ನೈಸರ್ಗಿಕವಾಗಿ ಮಳೆ ಗಾಳಿ ಬಿಸಿಲು ಮುಂತಾದ ನೈಸರ್ಗಿಕ ವಿಕೋಪಕ್ಕೆ ಹಾಳಾಗದೆ ಇರುವ ಜಾಗವನ್ನು ಆಯ್ಕೆ ಮಾಡಿಕೊಂಡಿರುವುದು ಗವಿ ವರ್ಣ ಚಿತ್ರಗಳನ್ನು ಚಿತ್ರಿಸಿರುವುದು ಚಿತ್ರಕಾರನ ಕೌಶಲತೆ ಸೂಚಿಸುತ್ತದೆ. ಇವು ಪ್ರಾಗೈತಿಹಾಸ ಕಾಲದ ಗವಿವರ್ಣ ಚಿತ್ರಗಳಾಗಿದ್ದು, ಸುಮಾರು 2,500 ವರ್ಷಗಳ ಹಿಂದಿನ ವರ್ಣ ಚಿತ್ರಗಳೆಂದು ಹೇಳಬಹುದಾಗಿದೆ ಎಂದು ಇಲಾಖೆಯ ಪ್ರಕಟಣೆ ತಿಳಿಸಿದೆ.

# ಎಲ್ಲಾ ಅರ್ಹ ಮತದಾರರು ಮತದಾನ ಮಾಡಿ

## ನೋಂದಾಯಿತ ಪದವೀಧರರು ಕಡ್ಡಾಯವಾಗಿ ಮತದಾನ ಮಾಡಿ

• ಉದಯವಾಹಿನಿ, ಸಿಂಧನೂರು



ವಿಧಾನ ಪರಿಷತ್ ಈಶಾನ್ಯ ಕರ್ನಾಟಕ ಪದವೀಧರ ಮತ ಕ್ಷೇತ್ರ ಚುನಾವಣೆ ಯಲ್ಲಿ ಅರ್ಹ ನೋಂದಾಯಿತ ಪದವೀಧರರು ದಿನಾಂಕ 03-06-2024 ರಂದು ಮತದಾರರು ಬೆಳಿಗ್ಗೆ 08 ರಿಂದ ಸಾಯಂಕಾಲ 04 ಗಂಟೆ ತನಕ ಮತ ಚಲಾಯಿಸಲು ಅವಕಾಶ ವಿರುತ್ತದೆ ಎಂದು ತಾಲ್ಲೂಕು ತಹಶೀಲ್ದಾರ್ ಅರುಣ್ ಎಚ್ ದೇಸಾಯಿ ಅವರು ಪತ್ರಿಕೆ ಪ್ರಕಟಣೆ ಮೂಲಕ ತಿಳಿಸಿದರು. ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಪದವೀಧರ ಕ್ಷೇತ್ರ ಸಿಂಧನೂರುನಲ್ಲಿ ತಾಲ್ಲೂಕಿನಲ್ಲಿ ಒಟ್ಟು 05 ಮತದಾನದ ಕೇಂದ್ರಗಳನ್ನು ತೆರೆಯಲಾಗಿದೆ.

**ಐದು ಮತದಾನದ ಕೇಂದ್ರ**

**ಮತದಾನದ ಮತಗಟ್ಟೆಗಳ ವಿವರ ಈ ರೀತಿಯಾಗಿವೆ:**
ನಗರ ಪ್ರದೇಶಗಳ ಪದವೀಧರರು ಸಿಂಧನೂರು ತಾಲ್ಲೂಕು ತಹಶೀಲ್ದಾರ್ ಕಚೇರಿಯಲ್ಲಿ ಸಿಬ್ಬಂದಿ ಕೊಠಡಿ ಸಂಖ್ಯೆ 03 ರಲ್ಲಿ ಮತದಾನದ ಮಾಡಲು ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದರು. ಗ್ರಾಮೀಣ ಪ್ರದೇಶದ ಮತದಾನದ ಪದವೀಧರರು ತಾಲ್ಲೂಕು ಪಂಚಾಯಿತಿ ಕಾರ್ಯಾಲಯ ಸಿಂಧನೂರುನಲ್ಲಿ ಸಿಂಧನೂರು ಗ್ರಾಮೀಣ ಪ್ರದೇಶ. ಜಾಲಿಹಾಳ. ಸಾಲಗುಂದ, ಕುನ್ನಟಗಿ ಗೋರೇಬಾಳ, ಹುಡಾ. ಬಾದರ್ಲಿ ಕಂದಾಯ ಹೋಬಳಿಗಳು ಎಲ್ಲಾ ಅರ್ಹ ಮತದಾರರು ಮತದಾನ ಮಾಡಬೇಕು ಎಂದು ಹೇಳಿದರು. ಸರ್ಕಾರಿ ಪ್ರೌಢ ಶಾಲೆ ಜವಳಗೇರಾ ಹೋಬ ಳಿಯಲ್ಲಿ ಜವಳಗೇರಾ. ಮತ್ತು ವಲ್ಕಂದಿನ್ನಿ ಮತ್ತು ಹೆಡಗಿನಾಳ ಕಂದಾಯ ಹೋಬಳಿ ಮತದಾರರ ಜವಳಗೇರಾ ಹೋಬಳಿಯಲ್ಲಿ ಮತಗಟ್ಟೆಯಲ್ಲಿ ಮತದಾನದ ಮಾಡಬೇಕು ಎಂದು ಹೇಳಿದರು. ಸಿಂಧನೂರು ತಾಲ್ಲೂಕಿನನಲ್ಲಿ ಅರ್ಹ ನೋಂದಾಯಿತ ಪದವೀಧರರು ಪುರುಷ ಮತದಾರರು 2832 ಇದ್ದು. ಮಹಿಳಾ ಮತದಾರರ 1257 ಮತದಾರರು ಇದ್ದು. ಒಟ್ಟು 4089 ಮತದಾರರು ಇದ್ದು.

ಕರ್ನಾಟಕ ವಿ ಧಾನ ಪರಿಷತ್ತು ಈಶಾನ್ಯ ಪದವೀಧರ ಕ್ಷೇತ್ರದ ಮತದಾನಕ್ಕೆ ನೋಂದಾಯಿತ ಪದವೀಧರರು ಕಡ್ಡಾಯವಾಗಿ ಮತದಾನ ಮಾಡಬೇಕೆಂದು ಅರುಣ್ ಕುಮಾರ್ ಎಚ್ ದೇಸಾಯಿ ಅವರು ಪತ್ರಿಕೆ ಪ್ರಕಟಣೆ ಮೂಲಕ ತಿಳಿಸಿದರು.


**ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ತುರ್ವಿಹಾಳ ಹೋಬಳಿಯಲ್ಲಿ ತುರ್ವಿಹಾಳ ಮತ್ತು ಗುಂಜಳ್ಳಿ ಕಂದಾಯ ಹೋಬಳಿ ಮತದಾರರ ತುರ್ವಿಹಾಳ ಹೋಬಳಿಯಲ್ಲಿ ಮತಗಟ್ಟೆಯಲ್ಲಿ ಮತದಾನ ಮಾಡಬೇಕು**

**-ಅರುಣ್ ಎಚ್. ದೇಸಾಯಿ ತಹಶೀಲ್ದಾರ್**

# 371(ಜೆ) ಯಿಂದ ಕಲ್ಯಾಣ ಕರ್ನಾಟಕ ಭಾಗಕ್ಕೆ ಅನ್ಯಾಯ

• ಉದಯವಾಹಿನಿ, ಸಿಂಧನೂರು

ತಾಲ್ಲೂಕಿನಲ್ಲಿ ಸಮಸ್ಯೆಗಳು ಮತ್ತು 371(ಜೆ) ಕಲಂದಿಂದ ಅನ್ಯಾಯ ಆಗುವುದನ್ನು. ಇತರ ಎಲ್ಲಾ ವಿಚಾರಗಳು ವಿಷಯಗಳ ಕುರಿತು ಚರ್ಚಿಸಿ ಒಂದು ಸೂಕ್ತ ತಿರ್ಮಾನ ತೆಗೆ ದುಕೊಳ್ಳ ದೃಷ್ಟಿಯಿಂದ ಪಕ್ಷಾತೀತವಾಗಿ ರಾಜಕೀಯ ಮು ಖಂಡರು, ವಿವಿಧ ಧರ್ಮಗಳು ನಾಯಕರು ಮಠಾಧೀಶರು, ಸಾಹಿತಿಗಳು ಹಾಗೂ ಚಿಂತಕರು ಎಲ್ಲಾ ಸಂಘ ಸಂಸ್ಥೆಗಳು ದಿನಾಂಕ 02-06-2024ರ ಭಾನುವಾರದಂದು ನಗರದ ಸತ್ಯ ಗಾರ್ಡನ್‌ನಲ್ಲಿ ಈ ಸಭೆಯನ್ನು ಕರೆಯಲಾಗಿದ್ದು. ಅನುಭವಿ ಅಶಕ್ತರೆಲ್ಲರೂ ಚರ್ಚೆಯಲ್ಲಿ ಭಾಗವಹಿಸಿ ಸೂಕ್ತ ತಿರ್ಮಾನ ತೆಗೆದುಕೊಳ್ಳಲು ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಈ ಸಭೆಯನ್ನು ಕರೆಯಲಾಗಿದೆ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಮಾಜಿ ಸಂಸದರಾದ ಕೆ ವಿರುಪಾಕ್ಷಪ್ಪ ಅವರು ಕಲ್ಯಾಣ ಕರ್ನಾಟಕ ಭಾಗದಲ್ಲಿ 371(ಜೆ) ಪ್ರಕಾರ ಸರ್ಕಾರಿ ನೇಮಕಾತಿಯನ್ನು ಶೇ 80%.7 ಜಿಲ್ಲೆಗಳ ನೇಮಕಾತಿಯಲ್ಲಿ. ಶೇ 8% ಕಲ್ಯಾಣ ಕರ್ನಾಟಕ ಕ್ಕೆ ಮೀಸಲೀಡಿ ಬೇಕೆನ್ನುವ ಸರ್ಕಾರಿ ಆದೇಶವನ್ನು ಉಲ್ಲಂಘಿಸು ತ್ತಿರುವ ಅನೇಕ ಉದಾಹರಣೆಗಳು ನಮ್ಮ ಕಣ್ಣು ಮುಂದೆ ನಡೆದಿರುವಂತದ್ದು 24 ಜಿಲ್ಲೆಯವರು ಶೇ 8% ಮೀಸಲಾತಿ ವಿರೋಧಿಸುತ್ತಾರೆ. ಕಾನೂನು ಸಚಿವರ ಮಾನ್ಯ ಮುಖ್ಯಮಂತ್ರಿಗಳಿಗೆ ಬರೆದಿರುವ ಪತ್ರ ರಾಜ್ಯದಲ್ಲಿ ಗೊಂದಲ ಉಂಟು ಮಾಡುತ್ತದೆ ಎಂದು ಆರೋಪ.7ಜಿಲ್ಲೆಗಳು ಯುವಕರು ನೇಮಕಾತಿಯಲ್ಲಿ ಯಾವುದೇ ಅನ್ಯಾಯವಾಗದಂತೆ ಸರಕಾರದ ಗಮನ ಸೆಳೆಯಲು ಕ್ರಮಗಳು ಕುರಿತು ಚರ್ಚಿ ತೀರ್ಮಾನಿಸುವುದು ಸಿಂಧನೂರು ತಾಲ್ಲೂಕನ್ನು ಜಿಲ್ಲಾ ಕೇಂದ್ರವನ್ನಾಗಿ ಘೋಷಿಸಲು ಸರ್ಕಾರಕ್ಕೆ ಒತ್ತಾಯಿಸುವುದು ರಾಜ್ಯದಲ್ಲಿ ತಾಲ್ಲೂಕು ಮಟ್ಟದ ಅತಿ ಹೆಚ್ಚು ಶಿಕ್ಷಣ ಸಂಸ್ಥೆಗಳ ಹೊಂದಿರುವುದು ಶೈಕ್ಷಣಿಕ ಜಿಲ್ಲೆ ಎಂದು ಘೋಷಿಸಲು. ಅತಿ ಹೆಚ್ಚು ವಾಹನಗಳು ಮಾರಾಟವಾಗುತ್ತಿದ್ದು.ಆರ್ ಟಿ ಓ ಆಫೀಸ್ ಸಿಂಧನೂರು ತಾಲ್ಲೂಕಿನ ಸ್ಥಾಪಿಸುವುದು. ಕಲ್ಯಾಣ ಕರ್ನಾಟಕದ ರಾಯಚೂರು ಜಿಲ್ಲೆಯ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿ.ನವಲಿ ಜಲಾಶಯ ಕಾರ್ಯ ಶೀಘ್ರದಲ್ಲಿ ಪ್ರಾರಂಭಿಸುವ ಎಲ್ಲಾ ವಿಚಾರಗಳು ವಿಷಯಗಳ ಬಗ್ಗೆ ಚರ್ಚಿಸಿ ತೀರ್ಮಾನ ಕೈಗೊಳ್ಳಲು ಎಲ್ಲರೂ ಭಾಗವಹಿಸಿ ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ನಿರುಪಾದಿಪ್ಪ, ವೆಂಕೋಬ ನಾಯಕ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಮಿನಿ ನ್ಯೂಸ್

### ಟಿ.ಟಿ ಭೀಮರಾವಗೆ ವಿ.ಪ.ಗೆ ನಾಮನಿರ್ದೇಶನ ಮಾಡಲು ಮನವಿ

• ಉದಯವಾಹಿನಿ,ಚಿಂಚೋಳಿ



ತಾಲ್ಲೂಕಿನ ಕಾಂಗ್ರೆಸ್ ಹಿರಿಯ ಮುಖಂಡ ಟಿಟಿ ಭೀಮರಾವರವರು ಕಳೆದ ಅನೇಕ ದಶಕಗಳಿಂದ ಕಾಂಗ್ರೆಸ್ ಪಕ್ಷದಲ್ಲಿ ನಿಷ್ಠಾವಂತರಾಗಿ ದುಡಿದು ಪಕ್ಷ ನೀಡಿದ ಎಲ್ಲಾ ಜವಾಬ್ದಾರಿಗಳು ನಿಭಾಯಿಸಿದ್ದಾರೆ ಕಾರಣ ಬರುವ ವಿಧಾನ ಪರಿಷತ್ ಎಂಎಲ್ಸಿಗೆ ನಾಮನಿರ್ದೇಶನ ಮಾಡಬೇಕು ಎಂದು ಕರ್ನಾಟಕ ದಲಿತ ಸಂಘರ್ಷ ಸಮಾಜಿಕ ನ್ಯಾಯ ಸಮಿತಿಯ ಅಧ್ಯಕ್ಷ ರಾಹುಲ್ ಗಣಪತರಾವ ಅಣವಾರಕರ್ ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಲ್ಲಿ ರಾಜ್ಯಾಧ್ಯಕ್ಷರಲ್ಲಿ ಮನವಿ ಮಾಡಿದ್ದಾರೆ.

ಪತ್ರಿಕಾ ಪ್ರಕಟನೆ ಹೊರಡಿಸಿದ ಅವರು, ಟಿ ಟಿ ಭೀಮರಾವ ಅವರು ಒಮ್ಮೆ ಜಿಪಂ.ಅಧ್ಯಕ್ಷರಾಗಿ, ಜಿಪಂ.ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ಸದಸ್ಯರಾಗಿ ಕಾರ್ಯನಿರ್ವಹಿಸಿ ಬಡವರಿಗೆ ದಿನದಲಿತರಿಗೆ ಹಿಂದುಳಿದ ವರ್ಗದವರಿಗೆ ಅಲ್ಪಸಂಖ್ಯಾತರಿಗೆ, ಬಹುಸಂಖ್ಯಾತರಿಗೆ ಎಲ್ಲಾ ಜಾತಿ ಜನಾಂಗದವರಿಗೆ ಸಮಾಜಿಕ ನ್ಯಾಯ ಕಲ್ಪಿಸಿಕೊಟ್ಟಿದ್ದಾರೆ.

ಇಂಥಹ ಕ್ರಿಯಾಶೀಲ ಮುಖಂಡನಿಗೆ ವಿಧಾನ ಪರಿಷತ್ ನಾಮನಿರ್ದೇಶನ ಮಾಡಿದರೆ ಪಕ್ಷ ಸಂಘಟನೆ ಮಾಡುವಲ್ಲಿ ಇನ್ನಷ್ಟು ಶಕ್ತಿಬಲ ಬರುತ್ತದೆ, ಬಡವರಿಗೆ ರೈತರಿಗೆ ಇನ್ನಷ್ಟು ಸೇವೆ ಮಾಡಲು ಅನುಕೂಲವಾಗುತ್ತದೆ, ಕಾರಣ ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ರಾಜ್ಯಾದ್ಯಕ್ಷ ಡಿ.ಕೆ ಶಿವಕುಮಾರ ಹಾಗೂ ಕಲಬುರ್ಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ರವರು ಕಲಬುರ್ಗಿಯಿಂದ ಟಿಟಿ ಭೀಮರಾವಗೆ ವಿಧಾನ ಪರಿಷತ್‌ಗೆ ನಾಮನಿರ್ದೇಶನ ಮಾಡಬೇಕು ಎಂದು ಮನವಿ ಮಾಡಿದರು.

### ಕೆರೆಯಲ್ಲಿ ಮುಳುಗಿ ಮೂವರು ಮಕ್ಕಳು ದುರ್ಮರಣ

• ಉದಯವಾಹಿನಿ, ಹಾಸನ

ಇತ್ತೀಚಿಗೆ ಹಾಸನ ಜಿಲ್ಲೆಯ ಆಲೂರು ತಾಲ್ಲೂಕಿನ ಕದಾಳು ಸಮೀಪದ ಮುತ್ತಿಗೆ ಗ್ರಾಮದ ಕೆರೆಯಲ್ಲಿ ನಾಲ್ಕು ಜನ ಮಕ್ಕಳು ಮುಳುಗಿ ಸಾವನ್ನಪ್ಪಿದ್ದರು ಇದೀಗ, ಬೇಲೂರು ತಾಲ್ಲೂಕಿನ ನರಸೀಪುರ ಗ್ರಾಮದಲ್ಲಿ ಕೆರೆಯಲ್ಲಿ ಮುಳುಗಿ ಮೂವರು ಮಕ್ಕಳು ದಾರುಣವಾಗಿ ಸಾವನ್ನಪ್ಪಿರುವ ಘಟನೆ ನಡೆದಿದೆ ಎಂದು ಹೇಳಲಾಗುತ್ತಿದೆ.

ಹೌದು ಹಾಸನ ಜಿಲ್ಲೆಯೇ ಬೇಲೂರು ತಾಲ್ಲೂಕಿನ ನರಸೀಪುರದ ಕೆರೆಯಲ್ಲಿ ಮುಳುಗಿ ಮೂರು ಮಕ್ಕಳು ಸಾವನ್ನಪ್ಪಿದ್ದರೆ. ದೀಕ್ಷಿತ್ (10) ನಿತ್ಯಶ್ರೀ (12) ಕುಸುಮ (6) ಮೃತ ಪಟ್ಟ ಮಕ್ಕಳು ಎಂದು ಹೇಳಲಾಗುತ್ತಿದೆ. ಹಸುಗಳನ್ನು ಕೆರೆ ಬಳಿ ಕಟ್ಟಿ ಆಟ ಆಡುತ್ತಿದ್ದ ವೇಳೆ ದುರಂತ ಸಂಭವಿಸಿದೆ. ಘಟನಾ ಸ್ಥಳದಲ್ಲಿ ಪೋಷಕರ ಆಕ್ರಂದನ ಮುಗಿಲುಮುಟ್ಟಿದ್ದು, ಹಳೇಬೀಡು ಪೊಲೀಸ್ ಠಾಣ ವ್ಯಾಪ್ತಿಯಲ್ಲಿ ಈ ಒಂದು ಘಟನೆ ನಡೆದಿದೆ. ಅಲ್ಲದೆ ಕಳೆದ ಕೆಲವು ದಿನಗಳ ಹಿಂದೆ ಜಿಲ್ಲೆಯ ಆಲೂರು ತಾಲ್ಲೂಕಿನ ಕದಾಳು ಸಮೀಪ ಮುತ್ತಿಗೆ ಗ್ರಾಮದಲ್ಲಿ ಮೇ. 16 ರಂದು ಈಜಲು ತೆರಳಿದ್ದ ನಾಲ್ವರು ಮಕ್ಕಳಾದ ವಿಶ್ವಾಸ್, ಪೃಥ್ವಿ, ಜೀವನ್, ಬೇಲೂರು ತಾಲ್ಲೂಕು ಮೂಲದ ಸಾತ್ವಿಕ್ ನೀರುಪಾಲಾಗಿದ್ದರು. ಘಟನೆ ವಾಸುವ ಮುನ್ನವೇ ಇದೀಗ ಹಾಸನ ಜಿಲ್ಲೆಯಲ್ಲಿ ಮತ್ತೊಂದು ದುರ್ಘಟನೆ ಸಂಭವಿಸಿದೆ.

### ಕುರುವಂಕ ಗ್ರಾ. ಪಂ. ಅಭಿವೃದ್ಧಿ ಅಧಿಕಾರಿಗೆ ನಿವೃತ್ತಿ ಬೀಳ್ಕೊಡುಗೆ


ಉದಯವಾಹಿನಿ ಚಿತ್ರ

• ಅರಸೀಕೆರೆ ಉದಯವಾಹಿನಿ

ತಾಲ್ಲೂಕಿನ ಕುರುವಂಕ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪರಮೇಶ್ ಅವರ ನಿವೃತ್ತಿಯ ಅಂಗವಾಗಿ ಗ್ರಾಮ ಪಂಚಾಯಿತಿ ವತಿಯಿಂದ ನಿವೃತ್ತಿ ಬೀಳ್ಕೊಡುಗೆ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು.

ಸಮಾರಂಭದಲ್ಲಿ ಕುರುವಂಕ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಬೈರ ಗೊಂಡನಹಳ್ಳಿ ನವೀನ್ ಬಾಣಾವರ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಬಿ ಎಂ ಜಯಣ್ಣ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪರಮೇಶ್ವರವರ ಸುದೀರ್ಘ ಸೇವೆ ಜನಪರ ಕಾಳ ಜಿ, ಸಾಮಾಜಿಕ ಕಳಕಳಿಯಿಂದ ನಿಸ್ವಾರ್ಥ ಸೇವೆ ಸಲ್ಲಿಸಿ ತಮ್ಮ ವೃ ತ್ತಿ ಜೀವನದಲ್ಲಿ ಉತ್ತಮ ಸೇವೆ ಸಲ್ಲಿಸಿದ್ದಾರೆಂದು ತಿಳಿಸಿದರು ಸ ಮಾರಂಭದಲ್ಲಿ ಕುರುವಂಕ ಗ್ರಾಮ ಪಂಚಾಯಿತಿ ಉಪಾಧ್ಯಕ್ಷರು ಸದ ಸ್ಯರು ಸೇರಿದಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಹೆದ್ದಾರಿಯಲ್ಲೇ ಪಲ್ಟಿಯಾದ ಗ್ಯಾಸ್ ಟ್ಯಾಂಕರ್; ತಪ್ಪಿದ ಭಾರೀ ಅನಾಹುತ

• ಉದಯವಾಹಿನಿ, ಬಂಟ್ವಾಳ

ಗ್ಯಾಸ್ ಟ್ಯಾಂಕರ್ ಪಲ್ಟಿಯಾಗಿ ಡಿವೈಡರ್ ಗೆ ಬಿದ್ದ ಘಟನೆ ರಾ.ಹೆ.75ರ ತುಂಬೆ ಸಮೀಪದ ಕಡೆಗೋಳಿಯಲ್ಲಿ ಶುಕ್ರವಾರ ಬೆಳಗ್ಗೆ ನಡೆದಿದೆ. ಮಂಗಳೂರಿನಿಂದ ಗ್ಯಾಸ್ ತುಂಬಿಕೊಂಡು ಹೋಗುತ್ತಿದ್ದ ಟ್ಯಾಂಕರ್ ಪಲ್ಟಿಯಾಗಿದ್ದು, ಯಾವುದೇ ಲಿಕೇಜ್ ಇಲ್ಲದೇ ಇರುವುದರಿಂದ ಹೆಚ್ಚಿನ ಹಾನಿ ಉಂಟಾಗಿಲ್ಲ. ಬಂಟ್ವಾಳ ಅಗ್ನಿಶಾಮಕ ದಳದವರು, ಸಂಚಾರ ಪೊಲೀಸರು, ಸ್ಥಳೀಯ ವಾಹನಗಳ ಸುಗಮ ಸಂಚಾರಕ್ಕೆ ವ್ಯವಸ್ಥೆ ಕಲ್ಪಿಸಿದ್ದಾರೆ.

### ಪರೀಕ್ಷೆ ಮುಗಿದ 3 ಗಂಟೆಗಳಲ್ಲಿ ವಿಟಿಯು ಫಲಿತಾಂಶ ಪ್ರಕಟ

• ಉದಯವಾಹಿನಿ, ಬೆಳಗಾವಿ

ಇಲ್ಲಿನ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯ 25 ವರ್ಷಗಳ ಇತಿಹಾಸದಲ್ಲಿಯೇ ಪರೀಕ್ಷಾ ಫಲಿತಾಂಶ ಪ್ರಕಟನೆಯಲ್ಲಿ ಹೊಸ ದಾಖಲೆ ಮಾಡಿದ್ದು, ಅಂತಿಮ ವರ್ಷದ ಬಿಇ, ಬಿ.ಟೆಕ್, ಬಿ.ಆರ್ಕ್, ಬಿ.ಪ್ಲಾನ್ ಸೆಮಿಸ್ಟರ್ ಪರೀಕ್ಷೆ ಮುಗಿದ ದಿನ 3 ತಾಸಿನೊಳಗೆ ಅಂತಿಮ ಸೆಮಿಸ್ಟರ್‌ನ 42,323 ವಿದ್ಯಾರ್ಥಿಗಳ ಫಲಿತಾಂಶವನ್ನು ಪ್ರಕಟಿಸಿದೆ. ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ಅಡಿಯಲ್ಲಿ ಬರುವ ಎಲ್ಲಾ ಎಂಜಿನಿಯರಿಂಗ್ ಮಹಾವಿದ್ಯಾಲಯಗಳ ಅಂತಿಮ ಸೆಮಿಸ್ಟರ್‌ನಲ್ಲಿ ಪರೀಕ್ಷೆ ಬರೆದ 42,323 ವಿದ್ಯಾರ್ಥಿಗಳ ಪರೀಕ್ಷೆ ಗುರುವಾರ ಮೇ 30ರಂದು ಸಂಜೆ 5.30ಕ್ಕೆ ಕೊನೆಗೊಂಡಿದ್ದು, ರಾತ್ರಿ 8.30ಕ್ಕೆ ಫಲಿತಾಂಶವನ್ನು ನೇರವಾಗಿ ವಿದ್ಯಾರ್ಥಿಗಳ ವಾಟ್ಸ್ಆ್ಯಪ್‌ಗೆ ಕಳುಹಿಸಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ನೀವು ನಿಮ್ಮದೇ ರೀತಿಯ ಸಂವೇದನೆ ಹೊಂದಿರುವ ಜನರ ಸಂಪರ್ಕಕ್ಕೆ ಬರಲು ನಿಮಗೆ ಸಹಾಯ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ನಿಮ್ಮ ಅಚ್ಚುಮೆಚ್ಚಿನವರನ್ನು ಕ್ಷಮಿಸಲು ಮರೆಯಬೇಡಿ.

**ವೃಷಭ** ಖಿನ್ನತೆಯನ್ನು ಹೊಡೆದೋಡಿಸಿ , ಇದ ನಿಮ್ಮನ್ನು ಆವರಿಸಿಕೊಳ್ಳುತ್ತಿದೆ ಮತ್ತು ನಿಮ್ಮ ಪ್ರಗತಿಗೆ ಅಡ್ಡಿಪಡಿಸುತ್ತಿದೆ. ಕೆಲವರಿಗೆ ಪ್ರಯಾಣದ ಗಡಿಬಿಡಿ ಮತ್ತು ಒತ್ತಡದಿಂದ ಕೂಡಿರುತ್ತವೆ.

**ಮಿಥುನ** ಕೆಲವು ಮನರಂಜನೆ ಮತ್ತು ಉಲ್ಲಾಸಕ್ಕೆ ಒಳ್ಳೆಯ ದಿನ. ನಿಮ್ಮ ವೈವಾಹಿಕ ಜೀವನ ಯಾವುದೇ ರೋಮಾಂಚನವನ್ನು ಹೊಂದಿಲ್ಲ. ನಿಮ್ಮ ಸಂಗಾತಿಯ ಜೊತೆ ಮಾತನಾಡಿ ಮತ್ತು ಆನಂದಕರವಾದ್ದೇನಾದರೂ ಯೋಜಿಸಿ.

**ಕರ್ಕಾಟಕ** ಪತ್ನಿಯ ವ್ಯವಹಾರಗಳಲ್ಲಿ ಮೂಗು ತೂರಿಸುವುದು ಅವಳಿಗೆ ಕೋಪ ತರಬಹುದಾದ್ದರಿಂದ ಹಾಗೆ ಮಾಡಬೇಡಿ. ನಿಮ್ಮ ಕೆಲಸ ನೋಡಿಕೊಳ್ಳುವುದು ಉತ್ತಮ. ಆದಷ್ಟು ಕಡಿಮೆ ಹಸ್ತಕ್ಷೇಪ ಮಾಡಿ.

**ಸಿಂಹ** ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ಕೈಬಿಡಬೇಡಿ. ಚಂದ್ರನ ಸ್ಥಾನದಿಂದಾಗಿ, ಇಂದು ನಿಮ್ಮ ಹಣವನ್ನು ಅನಗತ್ಯ ಕೆಲಸಗಳಿಗೆ ಖರ್ಚು ಮಾಡಬಹುದು.

**ಕನ್ಯಾ** ನಿಮಗೇನು ಒಳ್ಳೆಯದೆಂದು ನಿಮಗೆ ಮಾತ್ರ ಗೊತ್ತು – ಆದ್ದರಿಂದ ದೃಢವಾಗಿರಿ ಮತ್ತು ಧೈರ್ಯಶಾಲಿಗಳಾಗಿರಿ ಮತ್ತು ತಕ್ಷಣದ ನಿರ್ಧಾರಗಳನ್ನು ತೆಗೆದುಕೊಳ್ಳಿ ಹಾಗೂ ಫಲಿತಾಂಶಗಳಿಗೆ ಸಿದ್ಧವಾಗಿರಿ.

**ತುಲಾ** ಒತ್ತಡ ನಿಮ್ಮ ಆರೋಗ್ಯವನ್ನು ನಾಶಮಾಡಬಹುದು. ನೀವು ಮಾನಸಿಕ ಸ್ಪಷ್ಟತೆಯನ್ನು ಕಾಯ್ದುಕೊಳ್ಳಲು ಗೊಂದಲ ಮತ್ತು ಹತಾಶೆಯನ್ನು ತಡೆಗಟ್ಟಬೇಕು. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ.

**ವೃಶ್ಚಿಕ** ಅನಿರೀಕ್ಷಿತ ಪ್ರಣಯ ಭಾವ ಸಂಜೆಯ ಹೊತ್ತಿಗೆ ನಿಮ್ಮ ಮನಸ್ಸನ್ನು ಆವರಿಸುತ್ತದೆ. ಮಿತಿಯಿಲ್ಲದ ಸೃಜನಶೀಲತೆ ಮತ್ತು ಉತ್ಸಾಹ ನಿಮ್ಮನ್ನು ಮತ್ತೊಂದು ಅನುಕೂಲಕರ ದಿನಕ್ಕೆ ಕೊಂಡೊಯ್ಯುತ್ತದೆ.

**ಧನಸ್ಸು** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು.

**ಮಕರ** ಮಕ್ಕಳ ಸಂಗದಲ್ಲಿ ಶಾಂತಿ ಪಡೆಯಿರಿ. ನಿಮ್ಮ ಸ್ವಂತದ್ದಷ್ಟೇ ಅಲ್ಲದೇ ಬೇರೆಯವರ ಮಕ್ಕಳ ಚಿಕಿತ್ಸಕ ಶಕ್ತಿಗಳೂ ನಿಮಗೆ ಸಾಂತ್ವನ ನೀಡಬಹುದು ಮತ್ತು ನಿಮ್ಮ ಆತಂಕವನ್ನು ಶಮನಗೊಳಿಸಬಹುದು.

**ಕುಂಭ** ಧ್ಯಾನ ಮತ್ತು ಆತ್ಮ ಸಾಕ್ಷಾತ್ಕಾರ ಪ್ರಯೋಜನಕಾರಿಯಾಗಬಹುದು. ಇಂದು, ಒಂದು ಪಾರ್ಟಿಯಲ್ಲಿ ನೀವು ಆರ್ಥಿಕ ಭಾಗವನ್ನು ಬಲಪಡಿಸಲು ಪ್ರಮುಖ ಸಲಹೆಯನ್ನು ನೀಡುವ ವ್ಯಕ್ತಿಯನ್ನು ಭೇಟಿ ಮಾಡಬಹುದು.

**ಮೀನ** ನಿಮ್ಮ ಮೇಲೆ ಬಹಳಷ್ಟು ಅವಲಂಬಿಸಿರುತ್ತದೆ ಮತ್ತು ನಿರ್ಣಯಗಳನ್ನು ತೆಗೆದುಕೊಳ್ಳಲು ಮಾನಸಿಕ ಸ್ಪಷ್ಟತೆ ಅಗತ್ಯವಾಗಿರುತ್ತದೆ. ಎಲ್ಲಾ ಬದ್ಧತೆಗಳು ಮತ್ತು ಆರ್ಥಿಕ ವ್ಯವಹಾರಗಳನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು.

## ಬಾಗಲಕೋಟೆಯಲ್ಲಿ ಘೋರ ದುರಂತ : ಮನೆ ಮೇಲ್ಛಾವಣಿ ಕುಸಿದು ಅಕ್ಕ-ತಮ್ಮ ದುರ್ಮರಣ

• ಉದಯವಾಹಿನಿ ಬಾಗಲಕೋಟೆ

ಮನೆ ಮೇಲ್ಛಾವಣಿ ಕುಸಿದು ಅಕ್ಕ-ತಮ್ಮ ಸಾವನ್ನಪ್ಪಿದ ಘಟನೆ ಬಾಗಲಕೋಟೆ ಜಿಲ್ಲೆಯ ಇಳಕಲ್ ತಾಲ್ಲೂಕಿನ ಕಂದಗಲ್ಲ ಗ್ರಾಮದಲ್ಲಿ ನಡೆದಿದೆ. ಗೀತಾ ಆದಾಪುರಮಠ(14) ರುದ್ರಯ್ಯ(10) ಎಂದು ಗುರುತಿಸಲಾಗಿದೆ. ಸದ್ಯ ಮೃತರ ದೇಹಗಳನ್ನು ಹೊರಕ್ಕೆ ತೆಗೆಯಲಾಗಿದ್ದು, ಘಟನೆ ನಡೆದ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಶಿಥಿಲಾವಸ್ಥೆಯಲ್ಲಿದ್ದ ಮನೆ ಮೇಲ್ಛಾವಣಿ ಕುಸಿದಿದೆ ಎಂದು ಹೇಳಲಾಗಿದೆ. ಈ ಬಗ್ಗೆ ಇನ್ನಷ್ಟು ಮಾಹಿತಿ ಅಪ್ ಡೇಟ್ ಆಗಲಿದೆ.

## ಅಪಘಾತ : ದಂಪತಿಯನ್ನು ಆಸ್ಪತ್ರೆಗೆ ದಾಖಲಿಸಿ ಮಾನವೀಯತೆ ಮೆರೆದ ಶಾಸಕ

• ಉದಯವಾಹಿನಿ ಶಿವಮೊಗ್ಗ


ಉದಯವಾಹಿನಿ ಚಿತ್ರ

ಬೈಕ್ ಸ್ಕಿಡ್ ಆಗಿ ಸಂಭವಿಸಿದ ಭೀಕರ ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡು ರಸ್ತೆಯಲ್ಲಿಯೇ ನರಳಾಡುತ್ತಿದ್ದ ದಂಪತಿಯನ್ನು ಶಾಸಕ ಬೇಳೂರು ಗೋಪಾಲಕೃಷ್ಣ ತಮ್ಮದೇ ವಾಹನದಲ್ಲಿ ಆಸ್ಪತ್ರೆಗೆ ದಾಖಲಿಸಿ ಮಾನವೀಯತೆ ಮೆರೆದಿದ್ದಾರೆ.ಶಿವಮೊಗ್ಗ ಜಿಲ್ಲೆಯ ಸಾಗರ-ಆನಂದಪುರ ಹೆದ್ದಾರಿಯಲ್ಲಿ ಈ ಅಪಘಾತ ಸಂಭವಿಸಿದೆ. ಶಾಸಕರು ಇದೇ ಮಾರ್ಗದಲ್ಲಿ ತೆರಳುತ್ತಿದ್ದರು. ಅಪಘಾತದಲ್ಲಿ ರಕ್ತದ ಮಡುವಲ್ಲಿ ಬಿದ್ದಿದ್ದ ದಂಪತಿಯನ್ನು ಕಂಡು ತಕ್ಷಣ ವಾಹನ ನಿಲ್ಲಿಸಿ ತಮ್ಮದೇ ಬೆಂಗಾವಲು ಪಡೆ ವಾಹನದಲ್ಲಿ ಗಾಯಾಳು ದಂಪತಿಯನ್ನು ಸಾಗರ ಆಸ್ಪತ್ರೆಗೆ ದಾಖಲಿಸಿ, ಚಿಕಿತ್ಸೆ ಕೊಡಿಸಿದ್ದಾರೆ. ಸಿಗಂದೂರು ದೇವಸ್ಥಾನಕ್ಕೆ ತೆರಳಿ ದಂಪತಿ ವಾಪಾಸ್ ಆಗುತ್ತಿದ್ದಾಗ ಬೈಕ್ ಸ್ಕಿಡ್ ಆಗಿ ಅಪಘಾತ ಸಂಭವಿಸಿದೆ. ಶಾಸಕರ ಮಾನವೀಯತೆಗೆ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಸಾಮರಸ್ಯ ಕದಡಲು ಸರಕಾರದಿಂದಲೇ ವಿಷ

• ಉದಯವಾಹಿನಿ ಮಂಗಳೂರು



ರಸ್ತೆಯಲ್ಲಿಯೇ ನಮಾಜ್ ಮಾಡಿ ಸಾರ್ವಜನಿಕರ ಸಂಚಾರಕ್ಕೆ ಅಡ್ಡಿಯನ್ನುಂಟು ಮಾಡಿದವರ ಮೇಲೆ ದಾಖಲಾಗಿದ್ದ ಪ್ರಕರಣದ ತನಿಖೆ ನಡೆಸದೆ ಬಿ ರಿಪೋರ್ಟ್ ಸಲ್ಲಿಸುವ ಮೂಲಕ ಕಾಂಗ್ರೇಸ್ ಸರಕಾರ ಸಮಾಜದ ಸಾಮರಸ್ಯ ಕೆಡಿಸಲು ವಿಷ ಬೀಜ ಹಾಕಿದೆ. ಮುಂದೆ ರಸ್ತೆಯಲ್ಲಿಯೇ ನಮಾಜ್ ಮಾಡುವುದು ಚಾಳಿಯಾಗಲಿದೆ. ಇತರರು ಕೂಡ ಯಾವುದೇ ಪರವಾನಿಗೆ ಪಡೆಯದೆ ರಸ್ತೆಯಲ್ಲಿಯೇ ಪ್ರಾರ್ಥನೆ, ಇತರ ಕಾರ್ಯಕ್ರಮ ನಡೆಸಲು ಆಸ್ಪದ ನೀಡಲು ಈ ಪ್ರಕರಣ ಪ್ರೇರಣೆಯಾಗಲಿದೆ. ಸಾಮರಸ್ಯವನ್ನು ಗುತ್ತಿಗೆ ತೆಗೆದುಕೊಂಡಂತೆ ಮಾತನಾಡುವ ಕಾಂಗ್ರೇಸ್ಸಿಗರೇ ಇಂತಹ ಅವ್ಯವಸ್ಥೆಗೆ ಅವಕಾಶ ಮಾಡಿಕೊಡುತ್ತಿದ್ದಾರೆ ಎಂದು ಮಂಗಳೂರು ನಗರ ಉತ್ತರ ವಿಧಾನಸಭಾ ಕ್ಷೇತ್ರದ ಶಾಸಕ ಡಾ| ವೈ.ಭರತ್ ಶೆಟ್ಟಿ ಹೇಳಿದ್ದಾರೆ.

ಮಂಗಳೂರಿನಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೇಸ್ ತುಷ್ಟೀಕರಣವನ್ನು ಮಾಡುತ್ತಲೇ ಬಂದಿದೆ. ಜನನಿಬಿಡ, ವಾಹನ ದಟ್ಟಣೆ ಇರುವ ಸ್ಥಳದಲ್ಲಿ ನಮಾಜ್ ಮಾಡುವುದು ಸರಿಯಾ? ಎಂದು ಪ್ರಶ್ನಿಸಿದರೆ, ಯಕ್ಷಗಾನ ಬೇರೆ ಕಾರ್ಯಕ್ರಮ ಮಾಡುತ್ತೀರಿ ಎನ್ನುತ್ತಾರೆ. ಅದಕ್ಕೆಲ್ಲ ಪರ್ಮಿಷನ್ ತೆಗೆದುಕೊಳ್ಳಲಾಗುತ್ತದೆ. ವರ್ಷಕ್ಕೊಮ್ಮೆ ಎಲ್ಲಾ ಮತದವರ ಹಬ್ಬ ಆಗುತ್ತದೆ. ಪರವಾನಿಗೆ ಪಡೆದು ಮಾಡಲಾಗುತ್ತದೆ. ಅದು ಬೇರೆ ವಿಷಯ. ಏಕಾಏಕಿ ರಸ್ತೆಗೆ ಬಂದು ನಮಾಜ್ ಮಾಡುವುದು ಸರಿಯಾ, ಸುಮಟೊ ಕೇಸ್ ವಾಪಸ್ ತೆಗೆದು ಕೇಸ್ ಹಾಕಿದ ಅಧಿಕಾರಿಯನ್ನು ರಜೆ ಮೇಲೆ ಕಳುಹಿಸಿದ್ದು ಸರಿಯಾ, ಯಾವುದೇ ತನಿಖೆ ನಡೆಸದ ಬಿ ರಿಪೋರ್ಟ್ ಹಾಕಿರುವುದು ಸರಿಯಾ. ಇದು ರಾಜಕೀಯ ಒತ್ತಡದಿಂದ ಆಗಿದೆ ಎಂದರು.

# ಒಂದೇ ಕುಟುಂಬದ ಮೂವರ ಶವ ಪತ್ತೆ ಪ್ರಕರಣಕ್ಕೆ ಟ್ವಿಸ್ಟ್

### ಆತ್ಮಹತ್ಯೆ ಪ್ರಕರಣದ ಬಗ್ಗೆ ಪೊಲೀಸರು ತನಿಖೆ ನಡೆಸಿದ್ದು, ಇದೊಂದು ಪೂರ್ವ ನಿಯೋಜಿತ ಕೊಲೆ ಎಂಬುದು ಬೆಳಕಿಗೆ

• ಉದಯವಾಹಿನಿ ಕೊಪ್ಪಳ

ಕೊಪ್ಪಳದ ಗ್ರಾಮವೊಂದರಲ್ಲಿ ಒಂದೇ ಕುಟುಂಬದ ಮೂವರು ಶವವಾಗಿ ಪತ್ತೆಯಾಗಿದ್ದ 'ಆತ್ಮಹತ್ಯೆ' ಪ್ರಕರಣದ ಬಗ್ಗೆ ಪೊಲೀಸರು ತನಿಖೆ ನಡೆಸಿದ್ದು, ಇದೊಂದು ಪೂರ್ವ ನಿಯೋಜಿತ ಕೊಲೆ ಎಂಬುದು ಬೆಳಕಿಗೆ ಬಂದಿದೆ.

ಮೃತ ಮಹಿಳೆ ವಸಂತ (32) ಪತಿ ಆರಿಫ್ ಮೊಹಮ್ಮದ್ ಗೌಸ್ ಈ ಕೊಲೆ ಮಾಡಿರುವುದಾಗಿ ಪೊಲೀಸರು ತಿಳಿಸಿದ್ದಾರೆ. ರಾಜೇಶ್ವರಿ (52), ಹಾಗೂ ಮಲ ಮಗ ಸಾಯಿಧರ್ಮತೇಜ (5) ಮತ್ತು ಪತ್ನಿ ವಸಂತಾಳನ್ನು ಆರಿಫ್ ಕೊಲೆ ಮಾಡಿದ್ದಾನೆ ಎಂಬುದು ಬಹಿರಂಗವಾಗಿದೆ.

ಮೃತದೇಹದ ಬಳಿ ವಿಷದ ಬಾಟಲಿ ಪತ್ತೆಯಾಗಿದ್ದರಿಂದ ಮೂವರು ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂದು ಪೊಲೀಸರು ಆರಂಭದಲ್ಲಿ ನಂಬಿದ್ದರು. ಆದರೆ, ಮರಣೋತ್ತರ ಪರೀಕ್ಷೆ ವರದಿಯಲ್ಲಿ ಮೂವರನ್ನು ಕತ್ತು ಹಿಸುಕಿ ಸಾಯಿಸಲಾಗಿದೆ ಎಂದು ತಿಳಿದುಬಂದಿದೆ. ಆರೋಪಿಗಳ ಪತ್ತೆಗೆ ಜಿಲ್ಲಾ ಪೊಲೀಸರು ತಂಡ ರಚಿಸಿದ್ದರು. ಆರೋಪಿ ಆರಿಫ್ ಅಪರಾಧ ಸ್ಥಳಕ್ಕೆ ಭೇಟಿ ನೀಡದ ಕಾರಣ ಮತ್ತು ಅವರ ಮೊಬೈಲ್ ಫೋನ್ ಸಹ ಸ್ವಿಚ್ ಆಫ್ ಆಗಿರುವುದರಿಂದ ಸಾವಿನಲ್ಲಿ ಆತನ ಪಾತ್ರವಿದೆ ಎಂಬುದು ಸ್ಪಷ್ಟವಾಗಿತ್ತು. ಅರಿಫ್‌ನ ಆಪ್ತ ಸ್ನೇಹಿತನನ್ನು ನಾವು ಬಂಧಿಸಿದ್ದು, ಆತನ ಮೂಲಕ ಹೊಸಪೇಟೆಯಲ್ಲಿ ಆರಿಫ್ ನನ್ನು ಬಂಧಿಸಲು ಸಾಧ್ಯವಾಯಿತು. ಬುಧವಾರ ರಾತ್ರಿ ಕೊಪ್ಪಳಕ್ಕೆ ಕರೆತರಲಾಯಿತು ಎಂದು ತನಿಖಾಧಿಕಾರಿಯೊಬ್ಬರು ತಿಳಿಸಿದರು.

**ಪ್ಲಾನ್‌ಗಳ ಬಗ್ಗೆ ಮಾಹಿತಿ**

ಇತ್ತೀಚೆಗೆ ಹುಬ್ಬಳ್ಳಿಯಲ್ಲಿ ನಡೆದ ನೇಹಾ ಹಿರೇಮಠ ಕೊಲೆ ಪ್ರಕರಣದ ಬಗ್ಗೆ ಆರೋಪಿ ಆರಿಫ್ ತನ್ನ ಸ್ನೇಹಿತರ ಬಳಿ ಹೇಳಿಕೊಂಡಿದ್ದು ಬೆಳಕಿಗೆ ಬಂದಿದೆ. ಅವರ ಆಪ್ತ ಸ್ನೇಹಿತ ಅರಿಫ್‌ನ ಅನೇಕ ಆಲೋಚನೆಗಳು ಪ್ಲಾನ್‌ಗಳ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಿದ್ದಾನೆ. ಬುರ್ಖಾ ಧರಿಸದ ಹುಡುಗಿಯರಿಗಿಂತ ಅದನ್ನು ಧರಿಸಿದ ಹುಡುಗಿಯರು ಸುರಕ್ಷಿತವಾಗಿರುತ್ತಾರೆ ಎಂದು ಅವರು ಪ್ರಚಾರ ಮಾಡುತ್ತಾರೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

**ಪೂರ್ವ ನಿಯೋಜಿತ ಕೊಲೆ**

ವಸಂತ ಅವರ ತಾಯಿ ರಾಜೇಶ್ವರಿ ಅವರ ನಿವಾಸದಲ್ಲಿ ಮುಸುಕು ಹಾಕಿ ಕತ್ತು ಹಿಸುಕಿ ಕೊಲೆ ಮಾಡಿರುವುದಾಗಿ ಆರಿಫ್ ಒಪ್ಪಿಕೊಂಡಿದ್ದಾನೆ. ವಸಂತಾಳನ್ನು ಮತಾಂತರ ಮಾಡುವಂತೆ ಮನವೊಲಿಸಲು ಆಕೆಯ ಮನೆಗೆ ಬಂದಿದ್ದ. ತಾಯಿ ಒಪ್ಪದಿದ್ದಾಗ ಆಕೆಯನ್ನು ಕೊಂದಿದ್ದಾನೆ. ವಸಂತಾ ಅವರು ಗೊಂಬೆ ತಯಾರಿಕಾ ಘಟಕದಲ್ಲಿ ಕೆಲಸದ ಸ್ಥಳದಲ್ಲಿದ್ದಾಗ ಆಕೆಗೆ ದೂರವಾಣಿ ಕರೆ ಮಾಡಿದ್ದಾನೆ. ತನ್ನ ತಾಯಿ ಸತ್ತಿರುವ ಬಗ್ಗೆ ತಿಳಿಯದೆ, ಆಕೆ ಮನೆಗೆ ಮರಳಿದ್ದಾಳೆ. ಇದೇ ವೇಳೆ ಆಕೆಯ ಐದು ವರ್ಷದ ಮಗ ಹತ್ತಿರದಲ್ಲೇ ಇರುವ ಅವರ ಸಂಬಂಧಿಕರ ಮನೆಗೆ ಹೋಗಿದ್ದ.

ವಸಂತ ತನ್ನ ಕಾರ್ಖಾನೆಯ ಸಹೋದ್ಯೋಗಿಯೊಂದಿಗೆ ಸ್ನೇಹ ಬೆಳೆಸಿದ್ದರಿಂದ ಹತಾಶೆಗೊಂಡಿದ್ದಾಗಿ ಆರೋಪಿ ಹೇಳಿದ್ದಾನೆ. ಅವಳು ತನ್ನ ಗಂಡನಿಂದ ಬೇರ್ಪಟ್ಟಾಗ ನಾನು ಅವಳಿಗೆ ಹೊಸ ಜೀವನ ಕೊಟ್ಟಿದ್ದೆ. ನಾನು ಮೋಸ ಹೋದಾಗ, ಇಡೀ ಕುಟುಂಬವನ್ನು ಮುಗಿಸಲು ನಿರ್ಧರಿಸಿದೆ ಎಂದು ಆತ ಪೊಲೀಸರಿಗೆ ತಿಳಿಸಿದರು.

> ಆರೋಪಿಯು ವಸಂತಾ ಅವರನ್ನು ಮುಸ್ಲಿಂ ಧರ್ಮಕ್ಕೆ ಮತಾಂತರಗೊಳಿಸುವಂತೆ ಮತ್ತು ಬುರ್ಖಾ ಧರಿಸಲು ಒತ್ತಾಯಿಸುತ್ತಿದ್ದ ಎಂದು ಮೃತರ ಸಂಬಂಧಿಕರು ದೂರಿದ್ದಾರೆ. ರಂಜಾನ್ ಸಮಯದಲ್ಲಿ ಆರಿಫ್ ವಸಂತಾ ತನ್ನ ಸಂಪ್ರದಾಯಗಳನ್ನು ಅನುಸರಿಸುತ್ತಿಲ್ಲ ಎಂದು ಆರೋಪಿಸಿದಾಗ ದಂಪತಿಗಳ ನಡುವೆ ಜಗಳವಾಗಿತ್ತು. ವಸಂತಾ ಆರಿಫ್ ಗೆ ಎರಡನೇ ಪತ್ನಿ. ಆರಿಫ್ ಆರಂಭದಲ್ಲಿ ವಸಂತಾ ಮತ್ತು ಆಕೆಯ ಮಗುವನ್ನು ಹಿಂದೂಗಳಾಗಿ ಸ್ವೀಕರಿಸಲು ಒಪ್ಪಿಕೊಂಡಿದ್ದ. ಆದರೆ ಅನಂತರ ತನ್ನ ಧರ್ಮವನ್ನು ಅನುಸರಿಸಲು ಅವರಿಗೆ ಒತ್ತಾಯಿಸುತ್ತಿದ್ದ ಎನ್ನಲಾಗಿದೆ. ರಂಜಾನ್ ನಂತರ ಆತ ವಿಚಿತ್ರವಾಗಿ ವರ್ತಿಸಲು ಪ್ರಾರಂಭಿಸಿ, ಕುಟುಂಬವನ್ನು ಮತಾಂತರಗೊಳ್ಳುವಂತೆ ಒತ್ತಡ ಹೇರುತ್ತಿದ್ದ ಎಂದು ಅಧಿಕಾರಿಯೊಬ್ಬರು ಹೇಳಿದರು. -ಅಧಿಕಾರಿ

## ತಂಬಾಕು ಉತ್ಪನ್ನಗಳ ಉದ್ಯಮಗಳಿಂದ ಮಕ್ಕಳನ್ನು ರಕ್ಷಿಸುವುದು ಎಲ್ಲರ ಕರ್ತವ್ಯ

• ಉದಯವಾಹಿನಿ ಚಿತ್ರದುರ್ಗ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಚಿತ್ರದುರ್ಗ, ಶ್ರೀ ಹೋ.ಚಿ.ಬೋರಯ್ಯ ಸ್ಮಾರಕ ಪ್ರೌಢ ಶಾಲೆ ಬಿ.ಬಿ.ಹಟ್ಟಿ ಇವರುಗಳ ಸರಕಾರದೊಂದಿಗೆ ಚಿತ್ರದುರ್ಗ ತಾಲ್ಲೂಕಿನ ಬೆಳ ಗಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಹೋ.ಚಿ.ಬೋರಯ್ಯನಹಟ್ಟಿ ಗ್ರಾಮದಲ್ಲಿ ಶುಕ್ರವಾರ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದ ಅಡಿಯಲ್ಲಿ ವಿಶ್ವ ತಂಬಾಕು ರಹಿತ ದಿನದ ಅಂಗವಾಗಿ ಜಾಗೃತಿ ಜಾಥ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ತಂಬಾಕು ಪದಾರ್ಥಗಳ ದುಷ್ಪರಿಣಾಮಗಳನ್ನು ಬಿಂಬಿಸುವ ಬ್ಯಾನರ್ ಹಾಗೂ ಫಲಕಗಳನ್ನು ಹಿಡಿದ ಮಕ್ಕಳು ತಂಬಾಕು ತ್ಯಜಿಸಿ ಜೀವ ರಕ್ಷಿಸಿ , ತಂಬಾಕು ರಹಿತ ಜೀವನ ಸುಖಕ್ಕೆ ಸೋಪಾನ ಎಂಬ ಘೋಷ ವಾಕ್ಯಗಳನ್ನು ಕೂಗುತ್ತಾ ಗ್ರಾಮದ ಜನರಲ್ಲಿ ಜಾಗೃತಿ ಮೂಡಿಸಿದರು.

ಇದಕ್ಕೂ ಮೊದಲು ಆಯೋಜಿಸಿದ್ದ ವೇದಿಕೆ ಕಾರ್ಯಕ್ರಮದಲ್ಲಿ ಹೋ.ಚಿ. ಬೋರಯ್ಯ ಸ್ಮಾರಕ


ಉದಯವಾಹಿನಿ ಚಿತ್ರ

**ತಂಬಾಕು ರಹಿತ ದಿನಾಚರಣೆ**

ಪ್ರೌಢಶಾ ಲೆಯ ಮುಖ್ಯೋಪಾಧ್ಯಾಯ ಜಯಣ್ಣ ಸಿ ಮಾತನಾಡಿ ಪ್ರೌಢಶಾಲಾ ಹಂತದಲ್ಲಿ ಮಕ್ಕಳು ತಂಬಾಕು ಉತ್ಪನ್ನಗಳು ಸೇರಿದಂತೆ ಅನೇಕ ದುಶ್ಚಟಗಳ ಕಡೆಗೆ ಆಕರ್ಸಿತರಾಗುವುದು ಸಹಜ ಇಂತಹ ಸಮಯದಲ್ಲಿ ಮಕ್ಕಳು ತುಂಬಾ ಎಚ್ಚರಿಕೆಯಿಂದ ಮನಸ್ಸನ್ನು ಸನ್ಮಾರ್ಗದಲ್ಲಿ ಕೊಂಡೊಯ್ಯಬೇಕು ದೇಶದ ಯುವಜನರ ಶತ್ರುವಾಗಿರುವ ತಂಬಾಕು ಉತ್ಪನ್ನಗಳನ್ನು ಮಕ್ಕಳು ತ್ಯಜಿಸುವುದರ ಜೊತೆಗೆ ತಮ್ಮ ಕುಟುಂಬದ ಸದಸ್ಯರನ್ನೂ ಇವುಗಳಿಂದ ದೂರ ಇರುವಂತೆ ಹೇಳಬೇಕು ಎಂದು ಹೇಳಿದರು.

ಬೆಳಗಟ್ಟ ಪ್ರಾ.ಆ.ಕೇಂದ್ರದ ಆರೋಗ್ಯ ನಿರೀಕ್ಷಣಾಧಿಕಾರಿ ಮಹೇಶ್ ಡಿ. ಮಾತನಾಡಿ ಪ್ರತಿ ವರ್ಷ ಮೇ 31 ರಂದು, ವಿಶ್ವ ಆರೋಗ್ಯ ಸಂಸ್ಥೆಯು ತಂಬಾಕು ಮತ್ತು ಅದರ ಉತ್ಪನ್ನದ ಸೇವನೆಯಿಂದ ಉಂಟಾಗುವ ಅಪಾಯ ಮತ್ತು ಕುಟುಂಬ, ಸಮಾಜ ಮತ್ತು ಪರಿಸರದ ಮೇಲೆ ಅದರ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ವಿಶ್ವ ತಂಬಾಕು ರಹಿತ ದಿನವನ್ನು ಆಯೋಜಿಸುತ್ತದೆ ಈ ವರ್ಷದ ಘೋಷವಾಕ್ಯ ತಂಬಾಕು ಉದ್ಯಮದ ಹಸ್ತಕ್ಷೇಪದಿಂದ ಮಕ್ಕಳನ್ನು ರಕ್ಷಿಸುವುದು ಅದರಂತೆ ನಮ್ಮ ಮಕ್ಕಳನ್ನು ನಾವು ತಂಬಾಕು ಉತ್ಪನ್ನಗಳ ದುಷ್ಪರಿಣಾಮಗಳಿಂದ ರಕ್ಷಿಸಬೇಕಿದೆ ಎಂದು ಕಾರ್ಯಕ್ರಮದ ಉದ್ದೇಶವನ್ನು ತಿಳಿಸಿದರು.


ಕಾರ್ಯಕ್ರಮದಲ್ಲಿ ಯೋಗ ತರಬೇತುದಾರ ರವಿಕೆ.ಅಂಬೇಕರ್ ಸಮುದಾಯ ಆರೋಗ್ಯಾಧಿಕಾರಿ ಮುಂಜುಶ್ರೀ, ಆರೋಗ್ಯ ಸುರಕ್ಷಣಾಧಿಕಾರಿ ಶುಭಶ್ರೀ ಆಶಾ ಕಾರ್ಯಕರ್ತೆಯರಾದ ಶ್ರೀಮತಿ ಜಮುನಾ, ಬೋರಮ್ಮ, ಸಹಶಿಕ್ಷಕರಾದ ತಿಪ್ಪೇಸ್ವಾಮಿ ಪ್ರದೀಪ್ , ನವ್ಯಶ್ರೀ ಜಯಣ್ಣ ಹಾಗು ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

## ರಾಮತೀರ್ಥ ಶಾಲೆಯಲ್ಲಿ ಬೇಸಿಗೆ ಶಿಬಿರ ಸಮಾರಂಭ

• ಉದಯವಾಹಿನಿ ಚಿತ್ತಾಪುರ

ಆಟದ ಮೂಲಕ ಪಾಠ ಸಹಪಠ್ಯ ಚಟುವಟಿಕೆಗಳಾದ ಹಾಡು ಮತ್ತು ನಾಟಕ ಚಿತ್ರ ನೋಡಿ ಕಲೆ ರಚನೆ ಇತ್ಯಾದಿ ಚಟುವಟಿಕೆಗಳು ಮಕ್ಕಳ ಕಲಿಕಾ ಅಂತರವನ್ನು ತುಂಬಲು ಕಲಿಕೆಯನ್ನು ಪ್ರೋತ್ಸಾಹಿಸಲು ಹಾಗೂ ಅವರಲ್ಲಿನ ಪ್ರತಿಭೆ ಅನಾವರಣಗೊಳಿಸಲು ಬೇಸಿಗೆ ಶಿಬಿರ ಯಶಸ್ವಿಯಾಗಿದೆ ಎಂದು ಅಶೋಕ್ ಲೈಲ್ಯಾಂಡ್ ಸಿಎಸ್ಆರ್ ವ್ಯವಸ್ಥಾಪಕ ವೆಂಕಟ್ ಸುಬ್ರಹ್ಮಣ್ಯಂ ಹೇಳಿದರು.

ತಾಲ್ಲೂಕಿನ ರಾಮತೀರ್ಥ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅಶೋಕ್ ಲೈಲ್ಯಾಂಡ್ ಲರ್ನಿಂಗ್ ಲಿಂಕ್ ಫೌಂಡೇಶನ್ ರೋಡ್ ಟು ಸ್ಕೂಲ್ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 21 ದಿನಗಳ ಕಾಲ ನಡೆದ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ವಿದ್ಯಾರ್ಥಿಗಳ ಬೇಸಿಗೆ ರಜೆ ಕೇವಲ ಮಜಾವಾಗದೆ ಕಲಿಕೆಯ ಹಬ್ಬವಾಗಿತ್ತು. ವಿದ್ಯಾರ್ಥಿಗಳ ಬಾಲ್ಯ ಶಿಕ್ಷಣದಲ್ಲಿ ಕನ್ನಡ ಗಣಿತ


ಉದಯವಾಹಿನಿ ಚಿತ್ರ

ಕಲಿಕೆ ಮೂಲ ಬುನಾದಿ ಹಾಕುವುದಕ್ಕೆ ಬೇಸಿಗೆ ಶಿಬಿರ ಅತ್ಯಂತ ಪರಿಣಾಮಕಾರಿಯಾಗಿರುವುದು ಕಂಡು ಬಂದಿದೆ ಎಂದು ಹೇಳಿದರು.

ಎಲ್ಎಲ್ಎಫ್ ನಿರ್ದೇಶಕ ಅನೀಲಕುಮಾರ ಕೊಡಂಬಲ್, ಕ್ಷೇತ್ರ ವ್ಯವಸ್ಥಾಪಕ ಸಂತೋಷ ಕುಮಾರ, ಶಿಕ್ಷಣ ಸಂಯೋಜಕ ಸಂತೋಷ ಕುಮಾರ ಶಿರನಾಳ್, ಸಿಆರ್‌ಪಿ ವಿಜಯಲಕ್ಷ್ಮಿ ವಿವಿಧ ಶಾಲಾ ಮುಖ್ಯ ಗುರುಗಳು, ಎಲ್ಎಲ್ಎಫ್ ಸಂಪನ್ಮೂಲ ವ್ಯಕ್ತಿಗಳು ಶಾಲಾ ಮಕ್ಕಳು ಎಸ್‌ಡಿಎಂಸಿ ಸದಸ್ಯರು ಮತ್ತು ಪಾಲಕರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರೂ. ಮಲ್ಲಿಕಾರ್ಜುನ್ ಆರ್‌ಪಿ ನಿರೂಪಿಸಿದ್ದರು, ಮುಖ್ಯಗುರು ಮಂಜುನಾಥ ಸ್ವಾಗತಿಸಿದ್ದರು, ಎಸ್ಆರ್‌ಪಿ ದಿಲೀಪಕುಮಾರ ವಂದಿಸಿದ್ದರು.

## ಕಳ್ಳನ ಬಂಧನ: 3.30 ಲಕ್ಷ ಮೌಲ್ಯದ ಚಿನ್ನಾಭರಣ ಜಪ್ತಿ

• ಉದಯವಾಹಿನಿ ಯಡ್ರಾಮಿ

ಮನೆ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಯನ್ನು ಬಂದಿಸಿರುವ ಯಡ್ರಾಮಿ ಪೊಲೀಸರು 3.30 ಲಕ್ಷದ ರೂಪಾಯಿ ಮೌಲ್ಯದ 55 ಗ್ರಾಂ ಬಂಗಾರದ ಆಭರಣ ಮತ್ತು 1500 ರೊ ನಗದು ಜಪ್ತಿ ಮಾಡಿ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಕಲಬುರ್ಗಿ ನಗರದ ಶಾ ಜಿಲಾನಿ ದರ್ಗಾ ಏರಿಯಾ ನಿವಾಸಿ ಮೊಹಮ್ಮದ್ ರಫೀಕ್ ಅಲಿ ಯಾಸ್ ರಫೀಕ್ ತಂದೆ ಅಬ್ದುಲ್ ಗನಿ ಇನಾಮ್ದಾರ್ ಬಂಧಿಸಿದ್ದಾರೆ.

ಪಿಎಸ್‌ಐ ವಿಶ್ವನಾಥ್ ರೆಡ್ಡಿ ಮತ್ತು ಸಿಬ್ಬಂದಿ ತನಿಕಾ ನಡೆಸಿ ಆರೋಪಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸುವ ಕಾರ್ಯದಲ್ಲಿ ಯಶಸ್ವಿಯಾಗಿದ್ದಾರೆ. ಕಳೆದ ಕೆಲವು ದಿನಗಳಿಂದ ಪಟ್ಟಣದಲ್ಲಿ ಮನೆ ಕಳ್ಳತನ ಪ್ರಕರಣಗಳು ನಡೆಯುತಲ್ಲಿದ್ದವು. ಕಳ್ಳಕಾಕರ ಕಾಟದಿಂದ ಜನ ಮನೆ ಬಿಟ್ಟು ಹೊರ ಹೋಗಲು ಎದುರು ಅಂತ ಪರಿಸ್ಥಿತಿ ನಿರ್ಮಾಣವಾಗಿತ್ತು. ಇದೀಗ ಕಳ್ಳರನ್ನು ಪೊಲೀಸರು ಬಂಧಿಸಿ ನ್ಯಾಯಾಂಗ ಬಂಧನ ಒಪ್ಪಿಸಿರುವುದರಿಂದ ಜನರು ನೆಮ್ಮದಿಯಿಂದ ನಿಟ್ಟುಸಿರು ಬಿಡುವಂತಾಗಿದೆ. ಈ ಸಂದರ್ಭದಲ್ಲಿ ಪೊಲೀಸ್ ಸಿಬ್ಬಂದಿಗಳು ಮತ್ತು ಎಸ್ ಐ ಹೆಡ್ ಕಾನ್ಸ್‌ಟೇಬಲ್ ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ಆರೋಪಿ ನ್ಯಾಯಾಂಗ ಬಂಧನಕ್ಕೆ**

## ಕಾನೂನು ಸೇವಾ ಪ್ರಾಧಿಕಾರದಿಂದ ವಿಶ್ವ ತಂಬಾಕು ವಿರೋಧಿ ದಿನಾಚರಣೆ

• ಉದಯವಾಹಿನಿ ಸಿರುಗುಪ್ಪ

ನಗರದ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ತಾಲ್ಲೂಕು ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘದ ವತಿಯಿಂದ ವಿಶ್ವ ತಂಬಾಕು ವಿರೋಧಿ ದಿನಾಚರಣೆಯ ನಿಮಿತ್ತ ನಡೆದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಜೆ.ಎಮ್.ಎಫ್.ಸಿ ನ್ಯಾಯಾಧೀಶರಾದ ಹಾಜಿ ಹುಸೇನ್‌ಸಾಬ್ ಯಾದವಾಡ ಅವರು ಸಸಿಗೆ ನೀರೆರೆದು ಉದ್ಘಾಟಿಸಿದರು.

ನಂತರ ಮಾತನಾಡಿ ತಂಬಾಕು ಉತ್ಪನ್ನ ಘಟಕವನ್ನೇ ಮುಚ್ಚಿಸುವುದರಿಂದ ತಂಬಾಕಿನಿಂದಾಗುವ ಸಾವು ನೋವುಗಳ ಅವಘಡಗಳನ್ನು ನಿಲ್ಲಿಸಲು ಸಾಧ್ಯವಿದೆ. ಆದರೆ ಮೊದಲು ನಾವೆಲ್ಲಾ ಜಾಗೃತಿಗೊಳ್ಳಬೇಕಿದೆಂದರು. ಸಾರ್ವಜನಿಕ ಸ್ಥಳಗಳಾದ ಬಸ್‌ನಿಲ್ದಾಣ, ಚಿತ್ರಮಂದಿರ, ಆಸ್ಪತ್ರೆ, ಸರ್ಕಾರಿ ಕಛೇರಿಗಳು, ವಿದ್ಯಾಲಯಗಳು ಇನ್ನಿತರ ಕಡೆಗಳಲ್ಲಿ


ಉದಯವಾಹಿನಿ ಚಿತ್ರ

ಯಾರಾದರೂ ದೂಮಪಾನ, ಹಾಗೂ ತಂಬಾಕು ಸೇವನೆ ಮಾಡುವುದನ್ನು ಕಂಡುಬಂದಲ್ಲಿ ನಾವೆಲ್ಲರೂ ಒಗ್ಗಟ್ಟಿನಿಂದ ವಿರೋಧಿಸುವಂತಾಗಬೇಕೆಂದು ತಿಳಿಸಿದರು. ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಈರಣ್ಣ ಅವರು ಮಾತನಾಡಿ ಸರ್ಕಾರಿಯಿಂದ ನಿರ್ದೇಶನಗಳಿವೆ, ತಂಬಾಕು ವಸ್ತುಗಳ ಮೇಲೆಯು ಕ್ಯಾನ್ಸರ್ ಇನ್ನಿತರ ಮಾರಕ ರೋಗಗಳ ಸೂಚನೆಯಿದೆ. ತಂಬಾಕಿನಲ್ಲಿರುವ ನಿಕೋಟಿನಿಂದಾಗಿ ದುಷ್ಪರಿಣಾಮಗಳ ಬಗ್ಗೆ ಯುವಜನತೆಗೆ ತಿಳಿಸುವುದರೊಂದಿಗೆ ತಂಬಾಕು ಮುಕ್ತ ದೇಶವನ್ನಾಗಿಸೋಣವೆಂದರು.

ಇದೇ ವೇಳೆ ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಎಸ್.ಮಂಜನಾಥಗೌಡ, ಕಾರ್ಯದರ್ಶಿ ಹೆಚ್.ಪ್ಯಾಟೆಗೌಡ, ಪ್ಯಾನಲ್ ವಕೀಲರಾದ ಟಿ.ವೆಂಕಟೇಶ ನಾಯ್ಕ್, ಮಲ್ಲಿಗೌಡ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಖಾಸೀಂ, ತಾಲ್ಲೂಕು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಭೀಮರೆಡ್ಡಿ, ನಗರ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಚಂದ್ರಶೇಖರ ಹಾಗೂ ಆಶಾ ಕಾರ್ಯಕರ್ತೆಯರು, ಇನ್ನಿತರ ಸಿಬ್ಬಂದಿಗಳಿದ್ದರು.

> ಇತ್ತೀಚೆಗೆ ತಂಬಾಕು ಸೇವನೆಯು ಸಮಾಜದಲ್ಲಿ ಹೆಮ್ಮರವಾಗಿ ಬೆಳೆದು ನಿಂತಿದೆ. ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬಂತೆ ಈಗಿನ ಮಕ್ಕಳಿಗೆ ಶಾಲಾ ಪಾಠದೊಂದಿಗೆ ಸಮಾಜದಲ್ಲಿ ಅನುಸರಿಸಬೇಕಾದ ನೈತಿಕ ಪಾಠದ ಅಗತ್ಯವಿದೆ. -ಎನ್.ಅಬ್ದುಲ್‌ಸಾಬ್, ಹಿರಿಯ ಪ್ಯಾನಲ್ ವಕೀಲ

## ಡೆತ್‌ನೋಟ್ ಬರೆದಿಟ್ಟು ಮತ್ತೋರ್ವ ಗುತ್ತಿಗೆದಾರ ಆತ್ಮಹತ್ಯೆ

• ಉದಯವಾಹಿನಿ ದಾವಣಗೆರೆ

ಕೆ.ಆರ್.ಐ.ಡಿ.ಎಲ್ ನಿಂದ ಬಾಕಿ ಬಿಲ್ ಪಾವತಿಸಿಲ್ಲ ಎಂದು ಆರೋಪಿಸಿ ಗುತ್ತಿಗೆದಾರರೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ದಾವಣಗೆರೆಯ ಸಂತೆಬೆನ್ನೂರಿನಲ್ಲಿ ನಡೆದಿದೆ.ಪಿ.ಎಸ್.ಗೌಡರ್ (48) ಆತ್ಮಹತ್ಯೆ ಮಾಡಿಕೊಂಡಿರುವ ಗುತ್ತಿಗೆದಾರ.

ಕೆ.ಆರ್.ಐ.ಡಿ.ಎಲ್ ನಿಂದ 2023-24ನೇ ಸಾಲಿನ ಬಾಕಿ ಬಿಲ್ ಪಾವತಿ ಮಾಡಿಲ್ಲ ಎಂದು ಡೆತ್ ನೋಟ್ ಬರೆದಿಟ್ಟು ನೇಣಿಗೆ ಕೊರಳೊಡ್ಡಿದ್ದಾರೆ.

ಚನ್ನಗಿರಿಯ ಸಂತೇಬೆನ್ನೂರಿನಲ್ಲಿ ವಾಸವಾಗಿದ್ದ ಪಿ.ಎಸ್.ಗೌಡರ್, ಸಂತೇಬೆನ್ನೂರಿನ ಕೃಷಿ ಇಲಾಖೆ ಆವರಣದಲ್ಲಿ 2023-24ರಲ್ಲಿ ನಡೆದ ಕಾಮಗಾರಿಗೆ ಸಂಬಂಧಿಸಿದ ಹಣ ಬಿಡುಗಡೆ ಮಾಡದೇ ಕೆ.ಆರ್.ಐ.ಡಿ.ಎಲ್ ಅಧಿಕಾರಿಗಳು ಸತಾಯಿಸಿದ್ದರು. ಅಲ್ಲದೇ ಇಬ್ಬರು ಸಹೋದರರು ಕೂಡ ಹಣಕಾಸಿನ ವಿಚಾರವಾಗಿ ಮೋಸ ಮಾಡಿದ್ದರು. ಅಧಿಕಾರಿಗಳ ವರ್ತನೆ, ಸಹೋದರರ ಮೋಸದಿಂದ ಬೇಸತ್ತು ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಕೆ.ಆರ್.ಐ.ಡಿ.ಎಲ್ ನಿಂದ ದೊಡ್ಡ ಮೊತ್ತದ ಪರಿಹಾರ ನೀಡಬೇಕು ಎಂದು ಡೆತ್ ನೋಟ್ ನಲ್ಲಿ ಉಲ್ಲೇಖಿಸಿದ್ದಾರೆ. ಪತಿ ಆತ್ಮಹತ್ಯೆ ಹಿನ್ನೆಲೆಯಲ್ಲಿ ಪಿ.ಸಿ.ಗೌಡರ್ ಪತ್ನಿ ವಸಂತಕುಮಾರಿ ಸಂತೇಬೆನ್ನೂರು ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ.


ಉದಯವಾಹಿನಿ ಚಿತ್ರ

**ಹಣ ಬಿಡುಗಡೆ ಮಾಡದೇ ಕೆಆರ್‌ಐಡಿಎಲ್ ಅಧಿಕಾರಿಗಳು ಸತಾಯಿಸಿದ್ದರು**

## ತಂಬಾಕು ವಿರೋಧಿ ನಿಮಿತ್ತ ಗುಲಾಬಿ ಆಂದೋಲನ ಜಾಥಾ

• ಉದಯವಾಹಿನಿ ಸಿರುಗುಪ್ಪ

ನಗರದ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಕಛೇರಿ ಹಾಗೂ ತಂಬಾಕು ನಿಯಂತ್ರಣ ಕೋಶಗಳ ಸಹಯೋಗದಲ್ಲಿ ನಡೆದ ವಿಶ್ವ ತಂಬಾಕು ವಿರೋದಿ ದಿನಾಚರಣೆಯ ನಿಮಿತ್ತ ಗುಲಾಬಿ ಆಂದೋಲನ ಜಾಥಾಕ್ಕೆ ಜೆ.ಎಮ್.ಎಫ್.ಸಿ ನ್ಯಾಯಾಧೀಶರಾದ ಹಾಜಿ ಹುಸೇನ್ ಸಾಬ್ ಯಾದವಾಡ ಅವರು ಚಾಲನೆ ನೀಡಿದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಈರಣ್ಣ ಅವರು ಮಾತನಾಡಿ ನಗರದ ಪ್ರಮುಖ ಬೀದಿಗಳಲ್ಲಿ ಜಾಥಾವನ್ನು ನಡೆಸಿ ಸಾರ್ವಜನಿಕ ಸ್ಥಳಗಳಲ್ಲಿನ ದೂಮಪಾನ ನಿಷೇದದ ಕುರಿತು


ಉದಯವಾಹಿನಿ ಚಿತ್ರ

ಮಾಹಿತಿ ನೀಡಿ ಹಾಗೂ ಅದರಿಂದಾಗು ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ಗುಲಾಬಿ ಹೂ ನೀಡುವುದರೊಂದಿಗೆ ಗುಲಾಬಿ ಆಂದೋಲನ ಮಾಡಲಾಗುತ್ತಿದೆಂದು ತಿಳಿಸಿದರು.

ಇದೇ ವೇಳೆ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಖಾಸೀಂ, ತಾಲ್ಲೂಕು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಭೀಮರೆಡ್ಡಿ, ನಗರ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಚಂದ್ರಶೇಖರ ಹಾಗೂ ಆಶಾ ಕಾರ್ಯಕರ್ತೆಯರು, ಇನ್ನಿತರ ಸಿಬ್ಬಂದಿಗಳಿದ್ದರು.

# ಮಡಿಕೇಶ್ವರ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ

### ಬಸನಗೌಡ ಪಾಟೀಲ್ ಅವರ ನೇತೃತ್ವದಲ್ಲಿ ತಹಶೀಲ್ದಾರ್ ಮೂಲಕ ಸಂಬಂಧಿಸಿದ ಇಲಾಖೆಗಳಿಗೆ ಅಬಕಾರಿ ಸಚಿವರಿಗೆ ಮನವಿ

• ಉದಯವಾಹಿನಿ ಮುದ್ದೇಬಿಹಾಳ

ನಮ್ಮೂರಾಗ ದಾರು (ಸಾರಾಯಿ) ಬಂದ್ ಮಾಡ್ಸರ್ರೀ ನಮ್ಮ ಮಕ್ಕಳು ಹೆಂಡತಿ ಮಕ್ಕಳನ್ನು ಬಿಟ್ಟು ಸಾಯುತ್ತಿದ್ದಾರೆ ನಿಮಗೆ ಪುಣ್ಯ ಬರುತ್ತದೆ ಎಂದು ತಹಶಿಲ್ದಾರ ಬಸವರಾಜ ನಾಗರಾಳ ಅವರ ಕಾಲು ಮುಗಿಯಲು ಹೋದ ಘಟನೆ ಶುಕ್ರವಾರ ನಡೆಯಿತು.

ತಾಲ್ಲೂಕಿನ ಮಡಿಕೇಶ್ವರ ಗ್ರಾಮದಲ್ಲಿ ಅಕ್ರಮವಾಗಿ ಮದ್ಯಮಾರಾಟ ಕಳ್ಳಬಟ್ಟಿ ಸಾರಾಯಿ ಮಾರಾಟ ಮಾಡಲಾಗುತ್ತಿದೆ ಕಿರಾಣಿ ಅಂಗಡಿ ಚಹಾದ ಅಂಗಡಿಗಳಲ್ಲಿ ಸಾರಾಯಿ ಮಾರಾಟ ಮಾಡುತ್ತಿದ್ದಾರೆ ಇದನ್ನು ಬಂದ್ ಮಾಡಬೇಕು ಅಕ್ರಮ ಮದ್ಯ ಮಾರಾಟಗಾರರ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕೆಂದು ಮಡಿಕೇಶ್ವರ ಗ್ರಾಮದ 30 ಕ್ಕೂ ಹೆಚ್ಚು ಮಹಿಳೆಯರು ಗ್ರಾಮದ ಮುಖಂಡ ಬಸನಗೌಡ ಪಾಟೀಲ್ ಅವರ ನೇತೃತ್ವದಲ್ಲಿ ತಹಶಿಲ್ದಾರ ಮೂಲಕ ಸಂಬಂಧಿಸಿದ ಇಲಾಖೆಗಳಿಗೆ ಅಬಕಾರಿ ಸಚಿವರಿಗೆ ಮನವಿಯನ್ನು ಸಲ್ಲಿಸಿದರು. ಈ ವೇಳೆ ಮಾತನಾಡಿದ ಮುಖಂಡ ಬಸನಗೌಡ ಪಾಟೀಲ್ ಮಡಿಕೇಶ್ವರ ಗ್ರಾಮದಲ್ಲಿ ಹಾಡುಹಗಲೇ ಕಳ್ಳಬಟ್ಟಿ ಸಾರಾಯಿ ಸೇರಿದಂತೆ ಅಕ್ರಮ ಮದ್ಯ ಮಾರಟ ನಡೆಯುತ್ತಿದೆ ಇದರಿಂದ ಗ್ರಾಮದಲ್ಲಿ ಅಶಾಂತಿ ಉಂಟಾಗಿದೆ ಗಲಾಟೆಗಳು ನಿತ್ಯ ನಡೆಯುತ್ತಿವೆ ಮನೆಯಲ್ಲಿ ಹೆಣ್ಣು ಮಕ್ಕಳು ದುಡಿದು ತಂದ ಹಣ ಕಸಿದುಕೊಂಡು ಸಾರಾಯಿ, ಗಾಂಜಾ ಸೇದುತ್ತಾರೆ ಈ ಕುರಿತು ಅಬಕಾರಿ ಇಲಾಖೆಯವರಿಗೆ ತಿಳಿಸಿದರು ಕ್ರಮಕೈಗೂಂಡಿಲ್ಲವೆಂದು 15 ದಿನದ ಗಡುವು ನೀಡ್ತವೆ ಇದಕ್ಕೆ ಕಡಿವಾಣ ಹಾಕದೆ ಇದ್ದರೆ ತಹಶಿಲ್ದಾರ ಕಚೇರಿಯ ಮುಂದೆ ಆಮರಣ ಉಪವಾಸ ಸತ್ಯಾಗ್ರಹವನ್ನು ಮಾಡುತ್ತೇವೆ ಎಂದು ಎಚ್ಚರಿಸಿದರು.

> ಮಡಿಕೇಶ್ವರ ಗ್ರಾಮಸ್ಥರ ಈ ಮನವಿಯನ್ನು ನಾವು ಗಂಭಿರವಾಗಿ ಪರಿಗಣಿಸುತ್ತೇವೆ ಸಂಬಂಧಿಸಿದ ಅಬಕಾರಿ ಇಲಾಖೆಯವರು ಅಕ್ರಮ ಮದ್ಯ , ಕಳ್ಳಬಟ್ಟಿ ಮಾರಾಟ ಮಾಡುವವರ ಮೇಲೆ ಕಟ್ಟುನಿಟ್ಟಿನ ಕ್ರಮಕೈಗೊಳ್ಳುತ್ತೇವೆ -ಬಸವರಾಜ ನಾಗರಾಳ, (ತಹಶಿಲ್ದಾರ ಮುದ್ದೇಬಿಹಾಳ )


ಉದಯವಾಹಿನಿ ಚಿತ್ರ

> ಮಡಿಕೇಶ್ವರ ಗ್ರಾಮದಲ್ಲಿ 99% ಜನರು ಕುಡಿತಕ್ಕೆ ದಾಸರಾಗಿದ್ದಾರೆ ಮಹಿಳೆಯರು ಕುಟುಂಬ ನಿರ್ವಹಣೆ ಮಾಡುತ್ತಿದ್ದಾರೆ ಗ್ರಾಮದಲ್ಲಿ ಕಳ್ಳಬಟ್ಟಿ ಹಾಗೂ ಅಕ್ರಮ ಮದ್ಯಸೇವಿಸಿ ಈಗಾಗಲೇ ಎಂಟತ್ತು ಮಂದಿ ಸಾವನ್ನುಪ್ಪಿದ್ದಾರೆ ಈಗ ಎಂಟತ್ತು ಜನ ಕಿಡ್ನಿ ಲಿವರ್ ಫೇಲ್ ಆಗಿ ಸಾವಿನ ನೀರಿಕ್ಷೆಯಲ್ಲಿದ್ದಾರೆ ನಮ್ಮ ಗ್ರಾಮದ ಶಾಲಾ ಹೈಸ್ಕೂಲ್ ಆವರಣ ಮಧ್ಯದ ಬಾಟಲಿಗಳಿಂದ ತುಂಬಿವೆ - ಬಸನಗೌಡ ಪಾಟೀಲ್

ಮಡಿಕೇಶ್ವರ ಗ್ರಾಮದ ಕಾಶಿಬಾಯಿ ಚಲವಾದಿ, ಮಹಾದೇವಿ ಹಳಿಯ್ಯಾಳ, ಶಕುಂತಲಾ ಕರಹಳ್ಳಿ ಸಾವಿತ್ರಿ ಹಿರೇಮಠ ಕಸ್ತೂರಿ ಬಿರಾದಾರ ಮಾತನಾಡಿ ನಮ್ಮ ಊರಲ್ಲಿ ಗಂಡು ಮಕ್ಕಳು ಕುಡಿದು ಸಾಯುತ್ತಿದ್ದಾರೆ ಸಣ್ಣ ಸಣ್ಣ ಮಕ್ಕಳನ್ನು ನಾವು ಸಾಕಬೇಕಿದೆ ಉಳಿದವರು ಸಹ ಈ ಕುಡಿಯುವುದು ಬಿಟ್ಟಿಲ್ಲಾ ಮನೆಯಲ್ಲಿಯ ಜೋಳ , ರೇಷನ್ ಅಕ್ಕಿ ದಾರು ಮಾರುವರಿಗೆ ನೀಡಿ ಕುಡಿಯುತ್ತಾರೆ ,ತಾಂಡಾಗಳಲ್ಲಿ ಸಾರಾಯಿ ಮಾರುವವರಿಗೆ ಊರಿನ ಹೆಣ್ಣು ಮಕ್ಕಳು ಕೈ ಮುಗಿದು ಮಾರಾಟ ಮಾಡಬೇಡಿ ಎಂದು ಹೇಳಿದ್ದೇವೆ ದಯವಿಟ್ಟು ಸರಕಾರ ಮತ್ತು ಅಧಿಕಾರಿಗಳು ನಮ್ಮ ಊರಲ್ಲಿ ಸಂಪೂರ್ಣ ಸಾರಾಯಿ ಬಂದ್ ಮಾಡಿ ನಮ್ಮ ಜೀವನ ನೆಮ್ಮದಿಯಾಗಿರುವಂತೆ ಮಾಡಬೇಕು ಇಲ್ಲಾಂದ್ರೆ ತಹಶಿಲ್ದಾರ ಆಫೀಸ್ ಮುಂದೆ ಹೋರಾಟ ಮಾಡಬೇಕಾಗುತ್ತದೆ ಎಂದರು.

ಸರಕಾರ ಕಳ್ಳಬಟ್ಟಿ ಸಂಪೂರ್ಣ ನಿರ್ಮೂಲನೆ ಮಾಡಬೇಕು ಎಂದು ಹೇಳಿದರು ಸಂಬಂಧಿಸಿದ ಇಲಾಖೆಯವರು ಮಾತ್ರ ಅದನ್ನು ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಪಾಲಿಸುತ್ತಿಲ್ಲವೆಂದ ಮಾತು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ.

**ಕಳ್ಳಬಟ್ಟಿ ಸಾರಾಯಿ ಸಂಸಾರ ಹಾಳು**

ಈ ಸಂದರ್ಭದಲ್ಲಿ ಮುಖಂಡ ಬಸನಗೌಡ ಪಾಟೀಲ್, ಗುರುರಾಜ ಬಡಿಗೇರ, ಬೋರಮ್ಮ ಹಿರೇಮಠ, ಮಹಾದೇವಿ ಕೆಂಭಾವಿ, ಬೋರಮ್ಮ ಹೂಗಾರ,ಅಯ್ಯಮ್ಮಾ ಹೈಯ್ಯಾಳ,ಶಿವಮ್ಮ ಬಾವೂರ, ಪ್ರೇಮಾ ಬಿರಾದಾರ, ಕಸ್ತೂರಿ ಬಿರಾದಾರ, ಸಾವಿತ್ರಿ ಹಿರೇಮಠ, ಶರಣಮ್ಮ ಬಾವೂರ, ದೇವಕ್ಕಮ್ಮಾ ನಾಯ್ಕೋಡಿ, ನಾಗವ್ವ ಚಲವಾದಿ,ಹಣಮವ್ವ ಚಲವಾದಿ,ಚಂದ್ರವ್ವ ಚಲವಾದಿ,ಕಾಶಿಬಾಯಿ ಚಲವಾದಿ ಸಿದ್ದಮ್ಮ ಚಲವಾದಿ ಮಡಿವಾಳಪ್ಪ ಚಲವಾದಿ ಸೇರಿದಂತೆ ಇತರರು ಭಾಗವಹಿಸಿದ್ದರು.

ತಹಶಿಲ್ದಾರ ಹಾಗೂ ಅಬಕಾರಿ ಇಲಾಖೆಯ ಅಧಿಕಾರಿಗಳಿಗೆ ಪ್ರತ್ಯೇಕ ಮನವಿ ಸಲ್ಲಿಸಿದರು.



# ಡಾಲಿಯ 'ಕೋಟಿ' ಮನರಂಜನೆಗೆ ಕಿಚ್ಚ ಎಂಟ್ರಿ

ಕೋಟಿ ಸಿನಿಮಾದ ಪ್ರೀರಿಲೀಸ್ ವಿಶೇಷ ಟೀವಿ ಕಾರ್ಯಕ್ರಮ ಇತ್ತೀಚೆಗೆ ಅದ್ದೂರಿಯಾಗಿ ನಡೆಯಿತು. ಈ ಕಾರ್ಯಕ್ರಮವನ್ನು 'ಕೋಟಿ ಮನರಂಜನೆ' ಎಂದು ಕರೆಯಲಾಗಿದ್ದು, ಕಾರ್ಯಕ್ರಮದಲ್ಲಿ ಸಿನಿಮಾದ ತಾರಾಬಳಗವೇ ತುಂಬಿತ್ತು. ಕೋಟಿಯ ನಾಯಕ ಡಾಲಿ ಧನಂಜಯ ಸೇರಿದಂತೆ ನಾಯಕಿ ಮೋಕ್ಷಾ ಕುಶಾಲ್ ಮತ್ತು ಹಿರಿಯ ತಾರೆಗಳಾದ ತಾರಾ ಅನುರಾಧ, ರಂಗಾಯಣ ರಘು, ರಮೇಶ್ ಇಂದಿರಾ, ಸರ್ದಾರ್ ಸತ್ಯ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ಈ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದದ್ದು ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ಅದ್ಭುತ ಲೈಟಿಂಗ್ ಮತ್ತು ಕೋರಿಯಾಗ್ರಫಿಯ ಮೂಲಕ ಆದ ಕಿಚ್ಚನ ಎಂಟ್ರಿಯ ನೋಡಿ ಜನರ ಕೇಕೆ ಮತ್ತು ಶಿಳ್ಳೆಗಳ ಸದ್ದು ಮುಗಿಲ ಮುಟ್ಟಿತ್ತು. ಸುದೀಪ್ ಅವರು ಸುಮಾರು ಒಂದು ತಾಸಿಗೂ ಹೆಚ್ಚಿನ ಕಾಲ ವೇದಿಕೆಯ ಮೇಲಿದ್ದು ನೆರೆದಿದ್ದ ಜನರನ್ನು ಹಾಸ್ಯಭರಿತ ಮಾತುಗಳಿಂದ ರಂಜಿಸಿದರು. ನಿರೂಪಕ ಅಕುಲ್ ಬಾಲಾಜಿ ಮತ್ತು ಸುದೀಪ್ ಮಾತುಕತೆ ಪ್ರೇಕ್ಷಕರಿಗೆ ನಗುವಿನ ಕಚಗುಳಿ ಇಡುವಂತಿತ್ತು. ಸುದೀಪ್ ಕೋಟಿ ಚಿತ್ರದ ಹೊಸ ಪೋಸ್ಟರನ್ನು ಅನಾವರಣಗೊಳಿಸಿ ತಂಡಕ್ಕೆ ಶುಭ ಕೋರಿದರು. ಕೋಟಿಯ ನಾಯಕಿ 'ಮೋಕ್ಷಾ' ಅವರ ಡಾನ್ಸ್ ಕಾರ್ಯಕ್ರಮಕ್ಕೆ ಪ್ರೇಕ್ಷಕರಿಂದ ಭರ್ಜರಿ ಪ್ರತಿಕ್ರಿಯೆ ದೊರೆಯಿತು. ಕೋಟಿಯ ಇತರ ನಟ ನಟಿಯರಿಂದ ವಿಶೇಷ ಡಾನ್ಸ್ ಕಾರ್ಯಕ್ರಮಗಳು ಮತ್ತು ಗಿಚ್ಚಿ ಗಿಲಿಗಿಲಿ ತಂಡದಿಂದ ಹೊಟ್ಟೆ ಹುಣ್ಣಾಗಿಸುವ ಹಾಸ್ಯ ಕಾರ್ಯಕ್ರಮ ನಡೆದವು. ಧನಂಜಯ ಅವರಿಗಾಗಿ ಮಕ್ಕಳು ಮಾಡಿದ ವಿಶೇಷ ಡಾನ್ಸ್ ಕಾರ್ಯಕ್ರಮ 'ಕೋಟಿ ಮನರಂಜನೆ'ಯ ಪ್ರಮುಖ ಆಕರ್ಷಣೆಗಳಲ್ಲೊಂದಾಗಿತ್ತು.

ಧನಂಜಯ ಅವರು ಮಕ್ಕಳ ನೃತ್ಯವನ್ನು ಮೆಚ್ಚಿ ವೇದಿಕೆಯ ಮೇಲೆ ಬಂದು ಮಕ್ಕಳ ಜತೆ ಸೆಲ್ಫಿ ತೆಗೆದುಕೊಂಡರು. ಈ ಚಿತ್ರದ ರಾಗ ಸಂಯೋಜಕರಾದ ವಾಸುಕಿ ವೈಭವ್ 'ಕೋಟಿ' ಸಿನಿಮಾದ ಹಾಡುಗಳನ್ನು ಹಾಡಿದರು. ಕೋಟಿಯ ಹಾಡುಗಳಿಗೆ ಸಾಹಿತ್ಯ ರಚಿಸಿರುವ ಯೋಗರಾಜ್ ಭಟ್ ''ಕನ್ನಡದ ಜನತೆಗಾಗಿ ಯಾರೇ ಕಷ್ಟಪಟ್ಟರೂ ನಾಡಿನ ಜನತೆ ಅವರ ಕೆಲಸವನ್ನು ಗೆಲ್ಲಿಸುತ್ತಾರೆ'' ಎಂದು ಹೇಳಿದರು. ದಶಕಗಳ ಕಾಲ ಕಲರ್ಸ್ ಕನ್ನಡ ಚಾನೆಲನ್ನು ಮುನ್ನಡೆಸಿದ್ದ ಪರಮ್ ಅವರಿಗೆ ಚಾನೆಲ್ಲಿನ ಸಿಬ್ಬಂದಿ ವಿಶೇಷ ವಿಡಿಯೋ ಮೂಲಕ ಶುಭ ಕೋರಿದರು.

ವಿಡಿಯೋದಲ್ಲಿ ತಮ್ಮ ಹಳ್ಳಿಮನೆಯ ಚಿತ್ರ ನೋಡಿದ ಪರಮ್ ಭಾವುಕರಾದರು.



# ರಣ್ವೀರ್ ಸಿಂಗ್ ಜೊತೆ ಸಿನಿಮಾ ಮಾಡ್ತಿಲ್ಲ

'ಹನುಮಾನ್' ಸಿನಿಮಾದ ಸಕ್ಸಸ್ ನಂತರ ಡೈರೆಕ್ಟರ್ ಪ್ರಶಾಂತ್ ವರ್ಮಾ 'ರಾಕ್ಷಸ್' ಸಿನಿಮಾಗಾಗಿ ರಣ್‌ವೀರ್ ಸಿಂಗ್ ಜೊತೆ ಕೈಜೋಡಿಸಿದ್ದರು ಎಂದು ಹೇಳಲಾಗಿತ್ತು. ಕೆಲ ಮನಸ್ತಾಪಗಳಿಂದ ರಣವೀರ್ ಸಿಂಗ್ 'ಹನುಮಾನ್' ನಿರ್ದೇಶಕನ ಮುಂಬರುವ ಚಿತ್ರಕ್ಕೆ ಗುಡ್ ಬೈ ಹೇಳಿದ್ದಾರೆ ಎನ್ನುವ ಸುದ್ದಿಯೂ ಇತ್ತು. ಈಗ ರಣವೀರ್‌ಗಾಗಿ ತಾವು ಸಿನಿಮಾ ಮಾಡುತ್ತಿಲ್ಲ ಎಂದು ಸ್ವತಃ ವರ್ಮಾ ಹೇಳಿದ್ದಾರೆ. ಡೈರೆಕ್ಟರ್ ಪ್ರಶಾಂತ್ ವರ್ಮಾ ಮತ್ತು ರಣ್‌ವೀರ್ ಸಿಂಗ್ ನಡುವೆ ಕತೆ ಮತ್ತು ಮೇಕಿಂಗ್ ವಿಷಯವಾಗಿ ಭಿನ್ನಾಭಿಪ್ರಾಯಗಳು



ಮೂಡಿದ ಕಾರಣದಿಂದ ರಣ್‌ವೀರ್ ಸಿಂಗ್ ಈ ಸಿನಿಮಾದಿಂದ ಹೊರನಡೆದಿದ್ದಾರೆ. ಇತ್ತೀಚೆಗೆ ರಣ್‌ವೀರ್ ಹೈದರಾಬಾದ್‌ಗೆ ಹೋಗಿ ಸಿನಿಮಾದ ಫೋಟೋಶೂಟ್‌ನಲ್ಲಿ ಸಹ ಭಾಗಿಯಾಗಿ ಬಂದಿದ್ದರು. ಆದರೆ ಅದಾದ ಬಳಿಕ ಇಬ್ಬರ ನಡುವೆ ಉಂಟಾದ ಭಿನ್ನಾಭಿಪ್ರಾಯದಿಂದಾಗಿ 'ಪದ್ಮಾವತ್' ಹೀರೋ ಸಿನಿಮಾದಿಂದ ಹೊರಬಂದಿದ್ದಾರೆ ರಣ್‌ವೀರ್ ಕೈಬಿಟ್ಟ ಪ್ರಾಜೆಕ್ಟ್‌ಗೆ ಇದೀಗ ಹೊಸ ನಟನ ಹುಡುಕಾಟದಲ್ಲಿದೆ ಚಿತ್ರತಂಡ.

'ರಾಕ್ಷಸ್'ಗಾಗಿ ನಟರಾಕ್ಷಸನ ಹುಡುಕಾಟದಲ್ಲಿದೆ ಟೀಮ್. ಹಾಗಾದ್ರೆ ಯಾರು ಈ ಚಿತ್ರತಂಡವನ್ನು ಸೇರಿಕೊಳ್ತಾರೆ ಕಾದುನೋಡಬೇಕಿದೆ.

ಸದ್ಯ ಸಿಂಗಂ ಅಗೇನ್, ಡಾನ್ 3, ಡೈರೆಕ್ಟರ್ ಎಸ್. ಶಂಕರ್ ಜೊತೆ 'ಅನ್ನಿಯನ್' ಸಿನಿಮಾ ಸೇರಿದಂತೆ ಹಲವು ಪ್ರಾಜೆಕ್ಟ್‌ಗಳು ರಣ್‌ವೀರ್ ಸಿಂಗ್ ಕೈಯಲ್ಲಿವೆ.

# ಕಾಗದ ಲವ್ ಸ್ಟೋರಿ

ಕನ್ನಡದಲ್ಲಿ ಸಾಕಷ್ಟು ಪ್ರೇಮಕಥೆಗಳು ಬಂದಿದೆ. ಆದರೆ ಒಂದಕ್ಕಿಂತ ಒಂದು ಭಿನ್ನ. ಅಂತಹ ಮತ್ತೊಂದು ವಿಭಿನ್ನ ಪ್ರೇಮ ಕಥಾನಕ ಕಾಗದ ಅರುಣ್ ಕುಮಾರ್ ಆಂಜನೇಯ ಅವರ ನಿರ್ಮಾಣದಲ್ಲಿ ರಂಜಿತ್ ಅವರು ನಿರ್ದೇಶಿಸಿರುವ ''ಕಾಗದ''




ಚಿತ್ರದ ಟೀಸರ್ ಇತ್ತೀಚೆಗೆ ಜಂಕಾರ್ ಮ್ಯೂಸಿಕ್ ಮೂಲಕ ಬಿಡುಗಡೆಯಾಗಿದೆ. ಟೀಸರ್ ಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದೆ. ''ಕಾಗದ'' ಮೊಬೈಲ್ ಬರುವ ಮುಂಚೆ ನಡೆದ ಪ್ರೇಮಕಥೆ. ಹಳ್ಳಿಹಳ್ಳಿಗಳ ನಡುವಿನ ವೈಷಮ್ಯದ ನಡುವೆಯೂ ಅರಳಿದ ಪ್ರೇಮಕಥೆಯೂ ಹೌದು. ಪ್ರಸ್ತುತ ಈ ಚಿತ್ರದ ಚಿತ್ರೀಕರಣ ಹಾಗೂ ನಂತರದ ಚಟುವಟಿಕೆಗಳು ಮುಕ್ತಾಯವಾಗಿದೆ. ತೆರೆಗೆ ಬರಲು ಸಿದ್ದತೆ ನಡೆಯುತ್ತಿದೆ.



# ಅಂಜಲಿ ಜೊತೆ ದುರ್ವರ್ತನೆ

ತೆಲುಗಿನ ಹೆಸರಾಂತ ನಟ ಬಾಲಕೃಷ್ಣ 'ಗ್ಯಾಂಗ್ಸ್ ಆಫ್ ಗೋದಾವರಿ' ಸಿನಿಮಾ ಇವೆಂಟ್ ವೇಳೆ ನಟಿ ಜೊತೆ ದುರ್ವರ್ತನೆ ತೋರಿದ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ವೇದಿಕೆಯ ಮೇಲೆ ಬಂದ ಬಾಲಕೃಷ್ಣ ನಟಿ ಅಂಜಲಿಯನ್ನು ತಳ್ಳಿದರು. ಕ್ಷಣ ಹೊತ್ತು ಅಂಜಲಿ ಶಾಕ್ ಒಳಗಾಗಿ ಆಮೇಲೆ ಸುಧಾರಿಸಿಕೊಳ್ಳುತ್ತಾರೆ. ಈ ವಿಡಿಯೋ ಕುರಿತು ಪರ ವಿರೋಧ ಚರ್ಚೆ ಶುರುವಾಗಿತ್ತು. ಬಾಲಕೃಷ್ಣ ವೇದಿಕೆಗೆ ಬರುವ ಮುಂಚೆ ವೇದಿಕೆಯ ಮುಂಭಾಗದಲ್ಲಿ ಕೂತಿದ್ದರು. ಅಲ್ಲಿ ಅವರಿಗೆ ಕುಡಿಯಲು ಮದ್ಯ ಇಡಲಾಗಿತ್ತು. ಮದ್ಯವನ್ನು ನೀರಿನೊಂದಿಗೆ ಬೆರೆಸಿದ್ದ ಬಾಟಲ್ ಪತ್ತೆಯಾಗಿತ್ತು. ಹಾಗಾಗಿ ಕುಡಿದು ಬಾಲಕೃಷ್ಣ ಅವರು ಆ ರೀತಿ ನಡೆದುಕೊಂಡಿದ್ದಾರೆ ಎನ್ನುವುದು ದೊಡ್ಡ ಸುದ್ದಿ ಆಗಿತ್ತು. ಈ ಕುರಿತಂತೆ ಸಿನಿಮಾ ನಿರ್ದೇಶಕರು ಪ್ರತಿಕ್ರಿಯೆ ನೀಡಿದ್ದು, ಬಾಲಕೃಷ್ಣ ಅವರು ಕುಡಿದಿರಲಿಲ್ಲ. ಗ್ರಾಫಿಕ್ಸ್ ಮಾಡಿ ಬಾಟಲ್ ಇಡಲಾಗಿದೆ ಎಂದಿದ್ದಾರೆ. ನಟಿ ಅಂಜಲಿ ಕೂಡ ಪ್ರತಿಕ್ರಿಯೆ ನೀಡಿ, ಬೇಕು ಅಂತ ಬಾಲಕೃಷ್ಣ ಅವರು ನನ್ನನ್ನು ತಳ್ಳಿಲ್ಲ. ಅದೊಂದು ಫನ್ನಿ ಸನ್ನಿವೇಶ ಎಂದಿದ್ದಾರೆ.



# ನಟಿ ಮಲ್ಲೈಕಾ ಅರೋರಾ- ಅರ್ಜುನ್ ಕಪೂರ್ ಬ್ರೇಕಪ್

ಬಿಟೌನ್ ಟಾಕ್

ಸೋಷಿಯಲ್ ಮೀಡಿಯಾದಲ್ಲಿ ನಟಿ ಮಲೈಕಾ ಅರೋರಾ ಮತ್ತು ಅರ್ಜುನ್ ಕಪೂರ್ ಟ್ರೆಂಡಿಂಗ್ ನಲ್ಲಿದ್ದಾರೆ. ಬಿಟೌನ್ ನಲ್ಲಿ ಹರಿದಾಡುತ್ತಿರುವ ಮಾಹಿತಿಯ ಪ್ರಕಾರ ಮಲೈಕಾ ಮತ್ತು ಅರ್ಜುನ್ ನಡುವೆ ಬ್ರೇಕ್ ಅಪ್ ಆಗಿದೆಯಂತೆ. ಪರಸ್ಪರ ಇಬ್ಬರೂ ಒಪ್ಪಿಗೆ ಪಡೆದುಕೊಂಡೇ ದೂರವಾಗಿದ್ದಾರೆ ಎಂದು ಹೇಳಲಾಗ್ತಿದೆ. ಅಲ್ಲಿಗೆ ಆರು ವರ್ಷದ ಡೇಟಿಂಗ್ ಸಮಾಚಾರಕ್ಕೆ ಕೊನೆ ಮೊಳೆ ಹೊಡೆದಿದ್ದಾರೆ. ಬಿಟೌನ್ ಅಂಗಳದ ಅಚ್ಚು ಮೆಚ್ಚಿನ ಜೋಡಿಗಳಲ್ಲಿ ಮಲೈಕಾ ಅರೋರಾ ಮತ್ತು ಅರ್ಜುನ್ ಕಪೂರ್ ಕೂಡ ಒಬ್ಬರಾಗಿದ್ದರು. ಸಾಕಷ್ಟು ವರ್ಷಗಳಿಂದ ಲಿವ್ ಇನ್ ರಿಲೇಷನ್ ಶಿಪ್‌ನಲ್ಲಿರೋ ಈ ಜೋಡಿ, ಭವಿಷ್ಯದಲ್ಲಿ ಒಟ್ಟಿಗೆ ಇರುವ ಆಲೋಚನೆ ಕುರಿತು ನಟಿ ಮಲೈಕಾ ಸಾಕಷ್ಟು ಬಾರಿ ಹೇಳಿಕೊಂಡಿದ್ದರು.

ನಟಿ ಮಲೈಕಾ ಅರ್ಜುನ್ ಕಪೂರ್‌ಗಿಂತ ವಯಸ್ಸಿನಲ್ಲಿ ದೊಡ್ಡವರು, ಇವರ ಲವ್ವಿ ಡವ್ವಿ ನೋಡಿರೋ ನೆಟ್ಟಿಗರು ಅದೆಷ್ಟೋ ಬಾರಿ ಇವರಿಬ್ಬರದ್ದು ಟೈಮ್ ಪಾಸ್ ಲವ್ ಎಂದು ಹೇಳಿದ್ದು ಇದೆ. ಆದರೆ ಈ ಹಿಂದೆ ಮಲೈಕಾ ತಮ್ಮ ಪ್ರೀತಿಯ ಜೀವನದ ಕುರಿತು ಮನಬಿಚ್ಚಿ ಸಂದರ್ಶನವೊಂದರಲ್ಲಿ ಮಾತಾನಾಡಿದ್ದರು. ಪ್ರತಿಯೊಂದು ರಿಲೇಶನ್‌ಶಿಪ್‌ನಲ್ಲಿಯೂ ತನ್ನದೇ ಆದ ರೀತಿ ನೀತಿಗಳಿರುತ್ತದೆ. ನಾವು ಒಟ್ಟಿಗೆ ಭವಿಷ್ಯವನ್ನು ಕಳೆಯುವ ವಿಚಾರ ನಮಗೆಷ್ಟೇ ತಿಳಿದಿರಬೇಕು ಎಂದು ಇನಿಯನ ಜತೆ ಭವಿಷ್ಯವನ್ನು ಒಟ್ಟಿಗೆ ಕಳೆಯುವ ಆಸೆಯನ್ನು ವ್ಯಕ್ತಪಡಿಸಿದ್ದರು. ಕೆಲ ದಿನಗಳ ಹಿಂದೆ ಇವರಿಬ್ಬರ ಬ್ರೇಕ್ ಅಪ್ ವಿಚಾರ ಕೂಡ ಸಿಕ್ಕಾಪಟ್ಟೆ ಸದ್ದು ಮಾಡಿತ್ತು. ಆದರೆ ಮಲೈಕಾರ ಈ ಮಾತು ಬ್ರೇಕ್ ಅಪ್ ಕಥೆಗೂ ಅಂತ್ಯ ಹಾಡಿತ್ತು. ನಾವು ಬಹಳಷ್ಟು ವಿಷಯಗಳನ್ನು ಒಟ್ಟಿಗೆ ಚರ್ಚಿಸುತ್ತೇವೆ. ನಾವು ಒಂದೇ ರೀತಿಯ ಆಲೋಚನೆಯನ್ನು ಹೊಂದಿದ್ದೇವೆ ಮತ್ತು ಒಬ್ಬರನೊಬ್ಬರು ತುಂಬಾ ಇಷ್ಟಪಡುತ್ತೇವೆ. ನಾವು ಭವಿಷ್ಯದಲ್ಲಿ ಒಟ್ಟಿಗೆ ಇರಲು ಬಯಸುತ್ತೇವೆ. ಸಂಬಂಧದಲ್ಲಿ ಯಾವಾಗೂ ನಾವು ಸೇಫ್ ಮತ್ತು ಪಾಸಿಟಿವ್ ಎಂಬ ಭಾವನೆ ಇರಬೇಕು ಎಂದು ಹೇಳಿಕೊಂಡಿದ್ದರು. ಈಗ ನೋಡಿದರೆ ಎಲ್ಲಾವೂ ಉಲ್ಟಾ ಆಗಿದೆ.

# ಆಸೀಸ್ ವಿರುದ್ಧ 257 ರನ್ ವಿಂಡೀಸ್‌ಗೆ 37 ರನ್ ಜಯ!

ಅಭ್ಯಾಸ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ತಂಡ ಆಸ್ಟ್ರೇಲಿಯಾವನ್ನು 35 ರನ್‌ಗಳಿಂದ ಸೋಲಿಸಿ, ಟೂರ್ನಿ ಆರಂಭದಲ್ಲೇ ಕಾಂಗರೂಗಳಿಗೆ ಸೋಲಿನ ಶಾಕ್ ನೀಡಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ವೆಸ್ಟ್ ಇಂಡೀಸ್ ಪರ ತಂಡದ ಬ್ಯಾಟ್ಸ್‌ಮನ್‌ಗಳು ಸಿಡಿಲಬ್ಬರದ ಬ್ಯಾಟಿಂಗ್ ನಡೆಸಿದರು. ಹೀಗಾಗಿ ಆತಿಥೇಯ ವಿಂಡೀಸ್ 20 ಓವರ್‌ಗಳಲ್ಲಿ 257 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಆಸ್ಟ್ರೇಲಿಯಾ ತಂಡ ಕೇವಲ 222 ರನ್ ಗಳಿಸಲಷ್ಟೇ ಶಕ್ತವಾಯಿತು. ಟಿ20 ವಿಶ್ವಕಪ್ ಆರಂಭವಾಗಲು ಕೇವಲ ಇನ್ನೊಂದೆ ದಿನ ಬಾಕಿ ಉಳಿದಿದೆ. ಅದರ ಹೊರತಾಗಿಯೂ ಈಗಾಗಲೇ ವಿಶ್ವಕಪ್ ಜ್ವರ ಏರಲು ಶುರುವಾಗಿದೆ. ಜೂನ್ 2 ರಿಂದ ಚುಟುಕು ಮಾದರಿಯ ವಿಶ್ವಸಮರ 20 ತಂಡಗಳ ನಡುವೆ ಆರಂಭವಾಗಲಿದೆ. ಆದರೆ ಅದಕ್ಕೂ ಮುನ್ನ ಎಲ್ಲಾ ತಂಡಗಳು ಸಿದ್ಧತೆಗಾಗಿ ಅಭ್ಯಾಸ ಪಂದ್ಯಗಳನ್ನು ಆಡುತ್ತಿವೆ. ಅದರ ಭಾಗವಾಗಿ ನಡೆದ ಅಭ್ಯಾಸ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ತಂಡ ಆಸ್ಟ್ರೇಲಿಯಾವನ್ನು 35 ರನ್‌ಗಳಿಂದ ಸೋಲಿಸಿ, ಟೂರ್ನಿ ಆರಂಭದಲ್ಲೇ ಕಾಂಗರೂಗಳಿಗೆ ಸೋಲಿನ ಶಾಕ್ ನೀಡಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ವೆಸ್ಟ್ ಇಂಡೀಸ್ ಪರ ತಂಡದ ಬ್ಯಾಟ್ಸ್‌ಮನ್‌ಗಳು ಸಿಡಿಲಬ್ಬರದ ಬ್ಯಾಟಿಂಗ್ ನಡೆಸಿದರು. ಹೀಗಾಗಿ ಆತಿಥೇಯ ವಿಂಡೀಸ್ 20 ಓವರ್‌ಗಳಲ್ಲಿ 257 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಆಸ್ಟ್ರೇಲಿಯಾ ತಂಡ ಕೇವಲ 222 ರನ್ ಗಳಿಸಲಷ್ಟೇ ಶಕ್ತವಾಯಿತು.

## ಪೂರನ್- ಪೊವೆಲ್ ಸಿಡಿಲಬ್ಬರದ ಅರ್ಧಶತಕ

ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ವೆಸ್ಟ್ ಇಂಡೀಸ್ ತಂಡ 4 ವಿಕೆಟ್ ಕಳೆದುಕೊಂಡು ಇನ್ನಿಂಗ್ಸ್ ಅಂತ್ಯಕ್ಕೆ 257 ರನ್ ಕಲೆಹಾಕಿತು. ತಂಡದ ಪರವಾಗಿ ನಿಕೋಲಸ್ ಪೂರನ್ ಮತ್ತು ರೋವ್ಮನ್ ಪೊವೆಲ್ ಅದ್ಭುತ ಇನ್ನಿಂಗ್ಸ್ ಆಡಿದರು. ಈ ಬ್ಯಾಟ್ಸ್‌ಮನ್‌ಗಳಿಂದಲೇ ವೆಸ್ಟ್ ಇಂಡೀಸ್ ತಂಡ ದೊಡ್ಡ ಸ್ಕೋರ್ ಮಾಡುವಲ್ಲಿ ಯಶಸ್ವಿಯಾಯಿತು. ಪೂರನ್ 25 ಎಸೆತಗಳಲ್ಲಿ ಐದು ಬೌಂಡರಿ ಹಾಗೂ 8 ಸಿಕ್ಸರ್‌ಗಳ ನೆರವಿನಿಂದ 75 ರನ್ ಕಲೆಹಾಕಿದರೆ, ರೋವ್ಮನ್ ಪೊವೆಲ್ 52 ರನ್ ಕೊಡುಗೆ ನೀಡಿದರು. ಆಸ್ಟ್ರೇಲಿಯಾ ಪರ ಆಡಮ್ ಝಂಪಾ ಗರಿಷ್ಠ ಎರಡು ವಿಕೆಟ್ ಪಡೆದರು.


ವಿಂಡೀಸ್ ನೀಡಿದ ಬೃಹತ್ ಗುರಿ ಬೆನ್ನಟ್ಟಿದ ಆಸ್ಟ್ರೇಲಿಯಾಕ್ಕೆ ಉತ್ತಮ ಆರಂಭ ಸಿಗಲಿಲ್ಲ. ಅನುಭವಿ ವಾರ್ನರ್ 15 ರನ್‌ಗಳಿಗೆ ಇನ್ನಿಂಗ್ಸ್ ಮುಗಿಸಿದರೆ, ಮತ್ತೊಬ್ಬ ಆರಂಭಿಕ ಆಸ್ಟನ್ ಆಗರ್ 28 ರನ್‌ಗಳಿಗೆ ಬ್ಯಾಟ್ ಎತ್ತಿಟ್ಟರು. ತಂಡದ ನಾಯಕ ಮಿಚೆಲ್ ಮಾರ್ಷ್ ತಮ್ಮ ಕಳಪೆ ಫಾರ್ಮ್ ಅನ್ನು ಇಲ್ಲೂ ಮುಂದುವರೆಸಿ ಕೇವಲ 4 ರನ್‌ಗಳಿಗೆ ಸುಸ್ತಾದರು. ಹೀಗಾಗಿ ತಂಡ ಆರಂಭದಲ್ಲೇ ಆಘಾತ ಎದುರಿಸಿತು. ತಂಡದ ಪರ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಜೋಸ್ ಇಂಗ್ಲಿಷ್ ಅತ್ಯಧಿಕ 55 ರನ್ ಗಳಿಸಿದರು. ಅವರನ್ನು ಹೊರತುಪಡಿಸಿ ಇತರ ಬ್ಯಾಟ್ಸ್‌ಮನ್‌ಗಳು ಉತ್ತಮ ಪ್ರದರ್ಶನ ನೀಡಲು ಸಾಧ್ಯವಾಗಲಿಲ್ಲ. ಟಿಮ್ ಡೇವಿಡ್ 25 ರನ್, ಮ್ಯಾಥ್ಯೂ ವೇಡ್ 25 ರನ್ ಮತ್ತು ನಾಥನ್ ಎಲ್ಲಿಸ್ 39 ರನ್ ಕೊಡುಗೆ ನೀಡಿದರು.



# ವಿಶ್ವಕಪ್‌ಗೂ ಮುನ್ನ ಪಾಕ್ ತಂಡಕ್ಕೆ ವೈಟ್ ವಾಶ್ ಮುಖಭಂಗ
# ಬಾಬರ್ ನಾಯಕತ್ವದಲ್ಲೂ ಜಯ ಸಿಗಲಿಲ್ಲ!

2024 ರ ಟಿ20 ವಿಶ್ವಕಪ್‌ನಲ್ಲಿ ಯಶಸ್ಸು ಸಿಗುವ ಭರವಸೆಯೊಂದಿಗೆ, ಪಾಕಿಸ್ತಾನ ಕ್ರಿಕೆಟ್ ಮಂಡಳಿ ಮತ್ತೆ ಬಾಬರ್ ಆಝಂ ಅವರನ್ನು ತಂಡದ ನಾಯಕನನ್ನಾಗಿ ನೇಮಕ ಮಾಡಿದೆ. ನಾಯಕತ್ವ ಕಳೆದುಕೊಂಡ 5 ತಿಂಗಳ ನಂತರ ಬಾಬರ್ ಮತ್ತೆ ತಂಡದ ನಾಯಕನಾಗಿ ಆಯ್ಕೆಯಾಗಿದ್ದಾರೆ. ಆದರೆ ನಾಯಕತ್ವ ಬದಲಾದರೂ ತಂಡದ ಪ್ರದರ್ಶನ ಮಾತ್ರ ಮೊದಲಿನಂತೆಯೇ ಇದೆ. ಮೊದಲು ನ್ಯೂಜಿಲೆಂಡ್ ಬಿ ತಂಡದ ವಿರುದ್ಧ ಸರಣಿ ಡ್ರಾ ಮಾಡಿಕೊಂಡಿದ್ದ ಪಾಕ್, ಐರ್ಲೆಂಡ್ ವಿರುದ್ಧ ಸರಣಿ ಗೆಲ್ಲುವಲ್ಲಿ ಯಶಸ್ವಿಯಾಗಿತ್ತು. ಆದರೆ ಇದೀಗ ಇಂಗ್ಲೆಂಡ್ ವಿರುದ್ಧ ಹೀನಾಯ ಸೋಲು ಪಾಕ್ ತಂಡದ ಟಿ20 ವಿಶ್ವಕಪ್ ತಯಾರಿಯನ್ನು ಬಯಲು ಮಾಡಿದೆ. ಲಂಡನ್‌ನಲ್ಲಿ ನಡೆದ ಕೊನೆಯ ಟಿ20 ಪಂದ್ಯದಲ್ಲಿ ಇಂಗ್ಲೆಂಡ್ ತಂಡ ಪಾಕಿಸ್ತಾನವನ್ನು 7 ವಿಕೆಟ್‌ಗಳಿಂದ ಸೋಲಿಸಿ 2-0 ಅಂತರದಲ್ಲಿ ಸರಣಿ ವಶಪಡಿಸಿಕೊಂಡಿದೆ.

ಬಾಬರ್ ಮತ್ತೆ ತಂಡದ ನಾಯಕ



### ಚೇತರಿಸಿಕೊಳ್ಳದ ಪಾಕ್ ಪಡೆ

ವಿಶ್ವಕಪ್‌ಗೂ ಮುನ್ನ ಪಾಕಿಸ್ತಾನ ತಂಡ ಐರ್ಲೆಂಡ್ ಮತ್ತು ಇಂಗ್ಲೆಂಡ್ ಪ್ರವಾಸ ಕೈಗೊಂಡಿದ್ದು, ಅದರ ಸಿದ್ಧತೆಗಳನ್ನು ಪರಿಶೀಲಿಸಿತ್ತು. ಐರ್ಲೆಂಡ್ ತಲುಪಿದ ತಕ್ಷಣ ಮೊದಲ ಪಂದ್ಯದಲ್ಲಿ ಹೀನಾಯ ಸೋಲನ್ನು ಎದುರಿಸಬೇಕಾಗಿ ಬಂದರೂ ಆ ಬಳಿಕ ಮತ್ತೆ ತಿರುಗೇಟು ನೀಡಿದ ತಂಡ ಮುಂದಿನ 2 ಪಂದ್ಯಗಳನ್ನು ಹೇಗೋ ಗೆದ್ದುಕೊಂಡಿತು. ಆದರೆ ಬಲಿಷ್ಠ ಇಂಗ್ಲೆಂಡ್ ಎದುರು ಪಾಕ್ ತಂಡದ ಆಟ ನಡೆಯಲ್ಲಿಲ್ಲ. ಹೀಗಾಗಿ ತಂಡ ಸರಣಿ ಕಳೆದುಕೊಂಡಿತು. ನಾಲ್ಕು ಪಂದ್ಯಗಳ ಸರಣಿಯ ಎರಡು ಪಂದ್ಯಗಳು ಮಳೆಯಿಂದಾಗಿ ರದ್ದಾಗಿದ್ದವು ಇದು ಪಾಕಿಸ್ತಾನ ಮತ್ತು ಇಂಗ್ಲೆಂಡ್ ಸಿದ್ಧತೆಗಳ ಮೇಲೆ ಪರಿಣಾಮ ಬೀರಿತ್ತು. ಆದರೆ ಹಾಲಿ ಟಿ20 ವಿಶ್ವಕಪ್ ಚಾಂಪಿಯನ್ ಇಂಗ್ಲೆಂಡ್, ಉಳಿದ 2 ಪಂದ್ಯಗಳನ್ನು ಗೆಲ್ಲುವ ಮೂಲಕ ಮತ್ತೊಮ್ಮೆ ಪ್ರಶಸ್ತಿ ಗೆಲ್ಲಲು ಸಜ್ಜಾಗಿದೆ ಎಂದು ತೋರಿಸಿದೆ. ಲಂಡನ್‌ನ ಓವಲ್‌ನಲ್ಲಿ ನಡೆದ ಸರಣಿಯ ಕೊನೆಯ ಪಂದ್ಯ ಇದಕ್ಕೆ ಅತ್ಯುತ್ತಮ ಉದಾಹರಣೆಯಾಗಿದ್ದು, ಮೊದಲು ಇಂಗ್ಲೆಂಡ್‌ನ ಬೌಲರ್‌ಗಳು ಪಾಕ್ ತಂಡವನ್ನು ಅಲ್ಪ ರನ್‌ಗಳಿಗೆ ಕಟ್ಟಿಹಾಕಿದರೆ, ನಂತರ ತಂಡದ ಬ್ಯಾಟ್ಸ್‌ಮನ್‌ಗಳು ಅದ್ಭುತ ಬ್ಯಾಟಿಂಗ್ ನಡೆಸಿ ಪಾಕ್ ತಂಡವನ್ನು ಸುಲಭವಾಗಿ ಸೋಲಿಸಿದರು.

### ಇಂಗ್ಲೆಂಡ್‌ಗೆ ಸುಲಭ ಜಯ

**ಈ ಗುರಿ ಬೆನ್ನಟ್ಟಿದ ಇಂಗ್ಲೆಂಡ್ ಪರ ಆರಂಭಿಕರಾದ ಫಿಲ್ ಸಾಲ್ಟ್ ಮತ್ತು ನಾಯಕ ಜೋಸ್ ಬಟ್ಲರ್ 6.2 ಓವರ್‌ಗಳಲ್ಲಿ 82 ರನ್ ಗಳಿಸಿ ಸುಲಭ ಜಯವನ್ನು ಖಚಿತಪಡಿಸಿದರು. ಮಧ್ಯದಲ್ಲಿ, ವೇಗದ ಬೌಲರ್ ಹ್ಯಾರಿಸ್ ರೌಫ್ ಮೂರು ವಿಕೆಟ್‌ಗಳನ್ನು ಕಬಳಿಸುವ ಮೂಲಕ ಸ್ವಲ್ಪ ಪುನರಾಗಮನದ ಭರವಸೆ ಮೂಡಿಸಿದರು. ಆದರೆ ಜಾನಿ ಬೈರ್‌ಸ್ಟೋವ್ ಮತ್ತು ಹ್ಯಾರಿ ಬ್ರೂಕ್ 27 ಎಸೆತಗಳಲ್ಲಿ 46 ರನ್‌ಗಳ ಸ್ಫೋಟಕ ಜೊತೆಯಾಟವನ್ನು ಮಾಡಿ ಕೇವಲ 15.3 ಓವರ್‌ಗಳಲ್ಲಿ ತಂಡವನ್ನು ಗೆಲುವಿನತ್ತ ಕೊಂಡೊಯ್ದರು. ರೌಫ್ ಬಿಟ್ಟರೆ ಪಾಕಿಸ್ತಾನದ ಯಾವುದೇ ಬೌಲರ್‌ಗೆ ವಿಕೆಟ್ ಪಡೆಯಲು ಸಾಧ್ಯವಾಗಲಿಲ್ಲ.**

### ಬ್ಯಾಟಿಂಗ್, ಬೌಲಿಂಗ್‌ನಲ್ಲೂ ಪಾಕ್ ಫೇಲ್

ಪಂದ್ಯದಲ್ಲಿ ಪಾಕಿಸ್ತಾನ ಉತ್ತಮ ಆರಂಭ ಪಡೆದಿತ್ತು. ಆರಂಭಿಕ ಜೋಡಿ ನಾಯಕ ಬಾಬರ್ ಆಝಂ ಮತ್ತು ಮೊಹಮ್ಮದ್ ರಿಜ್ವಾನ್ ಇಬ್ಬರೂ ಪವರ್‌ಪ್ಲೇ ಅಂತ್ಯಕ್ಕೆ 59 ರನ್ ಸೇರಿಸಿದರು. ಬಾಬರ್ ವಿಶೇಷವಾಗಿ ಹೆಚ್ಚು ಆಕ್ರಮಣಕಾರಿಯಾಗಿ ಕಾಣಿಸಿಕೊಂಡರು ಮತ್ತು ಮುಕ್ತವಾಗಿ ಬೌಂಡರಿಗಳನ್ನು ಬಾರಿಸಿದರು. ಆದರೆ ಜೋಫ್ರಾ ಆರ್ಚರ್ ಪವರ್‌ಪ್ಲೇಯ ಕೊನೆಯ ಎಸೆತದಲ್ಲಿ ಬಾಬರ್‌ಗೆ ಪೆವಿಲಿಯನ್ ಹಾದಿ ತೋರಿಸಿದರು. ಆ ನಂತರ ಪಾಕಿಸ್ತಾನ ಕೇವಲ 27 ರನ್‌ಗಳ ಅಂತರದಲ್ಲಿ 5 ವಿಕೆಟ್‌ಗಳನ್ನು ಕಳೆದುಕೊಂಡಿತು. ಆರನೇ ವಿಕೆಟ್‌ಗೆ ಉಸ್ಮಾನ್ ಖಾನ್ ಮತ್ತು ಇಫ್ತಿಕರ್ ಅಹ್ಮದ್ ನಡುವೆ 40 ರನ್‌ಗಳ ಜೊತೆಯಾಟ ಇಲ್ಲದಿದ್ದರೆ, ಪಾಕಿಸ್ತಾನ ತಂಡ ಇನ್ನೂ ಕಡಿಮೆ ಮೊತ್ತಕ್ಕೆ ಆಲೌಟ್ ಆಗುತ್ತಿತ್ತು. ಅಂತಿಮವಾಗಿ ತಂಡ 157 ರನ್‌ಗಳಿಗೆ ಇನ್ನಿಂಗ್ಸ್ ಮುಗಿಸಿತು.


# ಮಿನಿ ವಿಶ್ವಸಮರ ಗೆಲ್ಲಲು ನ್ಯೂಯಾರ್ಕ್‌ಗೆ

ಸುದೀರ್ಘ ಕಾಯುವಿಕೆಯ ನಂತರ, ಭಾರತದ ಬ್ಯಾಟ್ಸ್‌ಮನ್ ವಿರಾಟ್ ಕೊಹ್ಲಿ ಅಂತಿಮವಾಗಿ ಟಿ20 ವಿಶ್ವಕಪ್‌ನಲ್ಲಿ ಭಾಗವಹಿಸಲು ನ್ಯೂಯಾರ್ಕ್‌ಗೆ ತೆರಳಿದ್ದಾರೆ. ಮುಂಬೈ ವಿಮಾನ ನಿಲ್ದಾಣದಲ್ಲಿ ಕೊಹ್ಲಿ ಕಾಣಿಸಿಕೊಂಡಿದ್ದು, ಶೀಘ್ರದಲ್ಲೇ ಅವರು ಭಾರತ ತಂಡವನ್ನು ಸೇರಿಕೊಳ್ಳಲಿದ್ದಾರೆ.

ಸುದೀರ್ಘ ಕಾಯುವಿಕೆಯ ನಂತರ, ಭಾರತದ ಬ್ಯಾಟ್ಸ್‌ಮನ್ ವಿರಾಟ್ ಕೊಹ್ಲಿ ಅಂತಿಮವಾಗಿ ಟಿ20 ವಿಶ್ವಕಪ್‌ನಲ್ಲಿ ಭಾಗವಹಿಸಲು ನ್ಯೂಯಾರ್ಕ್‌ಗೆ ತೆರಳಿದ್ದಾರೆ. ಮುಂಬೈ ವಿಮಾನ ನಿಲ್ದಾಣದಲ್ಲಿ ಕೊಹ್ಲಿ ಕಾಣಿಸಿಕೊಂಡಿದ್ದು, ಶೀಘ್ರದಲ್ಲೇ ಅವರು ಭಾರತ ತಂಡವನ್ನು ಸೇರಿಕೊಳ್ಳಲಿದ್ದಾರೆ. ಕೊಹ್ಲಿ ಹೊರತುಪಡಿಸಿ ಟಿ20 ವಿಶ್ವಕಪ್ ತಂಡದಲ್ಲಿರುವ ಎಲ್ಲಾ ಆಟಗಾರರು ಹಾಗೂ ನಾಲ್ವರು ಮೀಸಲು ಆಟಗಾರರು ಈಗಾಗಲೇ ನ್ಯೂಯಾರ್ಕ್ ತಲುಪಿದ್ದಾರೆ. ಹಾಗೆಯೇ ಬುಧವಾರದಿಂದ ತರಬೇತಿಯನ್ನೂ ಆರಂಭಿಸಿದ್ದಾರೆ. ಇನ್ನು ವಿಮಾನ ಏರಲು ಮುಂಬೈ ವಿಮಾನ ನಿಲ್ದಾಣಕ್ಕೆ ಬಂದ ವಿರಾಟ್ ಕೊಹ್ಲಿ ಅಲ್ಲೂ ಸಹ ಮಡದಿ ಅನುಷ್ಕಾ ಶರ್ಮಾರನ್ನು ನೆನೆದಿದ್ದಾರೆ. ಇದೀಗ ಅದರ ವಿಡಿಯೋ ಎಲ್ಲೆಡೆ ವೈರಲ್ ಆಗುತ್ತಿದೆ.

ವಾಸ್ತವವಾಗಿ ವಿರಾಟ್ ಕೊಹ್ಲಿ ವಿಮಾನ ಏರಲು ಮುಂಬೈ ವಿಮಾನ ನಿಲ್ದಾಣಕ್ಕೆ ಬಂದ ತಕ್ಷಣ ವಿರಾಟ್ ಕೊಹ್ಲಿ ಅವರನ್ನು ಪಾಪರಾಜಿಗಳು ಸುತ್ತುವರೆದಿದ್ದಾರೆ. ಈ ವೇಳೆ ಕೊಹ್ಲಿ ಪಾಪರಾಜಿ ಸೇರಿದಂತೆ ಹಲವು ಮಾಧ್ಯಮದವರಿಗೆ ಉಡುಗೊರೆಯನ್ನೂ ನೀಡಿದ್ದಾರೆ. ಉಡುಗೊರೆಗಳನ್ನು ಸ್ವೀಕರಿಸಿದ ನಂತರ ಸುದ್ದಿಗಾರರು ಕೊಹ್ಲಿಗೆ ಧನ್ಯವಾದ ತಿಳಿಸಿದ್ದಾರೆ. ಆದರೆ ತಕ್ಷಣ ಅನುಷ್ಕಾರನ್ನು ಹೊಗಳಿದ ವಿರಾಟ್, ಇದು ನನ್ನ ಐಡಿಯಾ ಅಲ್ಲ. ಬದಲಿಗೆ ಅನುಷ್ಕಾ ಈ ಉಡುಗೊರೆಗಳನ್ನು ನಿಮಗೆ ಕಳುಹಿಸಿಕೊಟ್ಟಿದ್ದಾರೆ ಎಂದರು.

ಅಷ್ಟಕ್ಕೂ ವಿರಾಟ್ ಕೊಹ್ಲಿ ಪಾಪರಾಜಿಗಳಿಗೆ ಉಡುಗೊರೆ ನೀಡಿದ ಕಾರಣವೇನೆಂದರೆ, ಕಳೆದ ಫೆಬ್ರವರಿ 15 ರಂದು ವಿರುಷ್ಕಾ ದಂಪತಿಗಳು ಎರಡನೇ ಬಾರಿಗೆ ಪೋಷಕರಾಗಿದ್ದರು. ಲಂಡನ್‌ನಲ್ಲಿ ಅನುಷ್ಕಾ ಗಂಡು ಮಗುವಿಗೆ ಜನ್ಮ ನೀಡಿದ್ದರು. ದಂಪತಿಗಳಿಬ್ಬರು ಭಾರತಕ್ಕೆ ವಾಪಸ್ಸಾಗುವ ವೇಳೆ ತಮ್ಮ ಮಗುವಿನ ಫೋಟೋ ಹಾಗೂ ವಿಡಿಯೋವನ್ನು ಚಿತ್ರೀಕರಿಸಿದಂತೆ ಪಾಪರಾಜಿಗಳ ಮನವಿ ಮಾಡಿದ್ದರು. ಅದರಂತೆ ಪಾಪರಾಜಿಗಳು ವಿರಾಟ್ ಅವರ ಮಕ್ಕಳ ಗೌಪ್ಯತೆಯನ್ನು ಕಾಪಾಡಿದ್ದರು.



# 3 ಮಾದರಿಗಳ ಸರಣಿಗೆ ಭಾರತ- ದಕ್ಷಿಣ ಆಫ್ರಿಕಾ ತಂಡಗಳು ಪ್ರಕಟ

3 ಸರಣಿಗಳಿಗೆ ಭಾರತ ಮಹಿಳಾ ತಂಡ ಇಂತಿದೆ

**ಏಕದಿನ ತಂಡ:** ಹರ್ಮನ್‌ಪ್ರೀತ್ ಕೌರ್ (ನಾಯಕಿ), ಸ್ಮೃತಿ ಮಂಧಾನ (ಉಪನಾಯಕಿ), ಶಫಾಲಿ ವರ್ಮಾ, ದೀಪ್ತಿ ಶರ್ಮಾ, ಜೆಮಿಮಾ ರೋಡ್ರಿಗಸ್, ರಿಚಾ ಘೋಷ್ (ವಿಕೆಟ್ ಕೀಪರ್), ಉಮಾ ಛೆಟ್ರಿ (ವಿಕೆಟ್‌ಕೀಪರ್), ದಯಾಲನ್ ಹೇಮಲತಾ, ರಾಧಾ ಯಾದವ್, ಆಶಾ ಶೋಭನಾ, ಸೈಕಾ ಇಶಾಕ್, ಪೂಜಾ ವಸ್ತ್ರಾಕರ್, ರೇಣುಕಾ ಸಿಂಗ್ ಠಾಕೂರ್, ಅರುಂಧತಿ ರೆಡ್ಡಿ, ಪ್ರಿಯಾ ಪೂನಿಯಾ.



**ಟೆಸ್ಟ್ ತಂಡ:** ಹರ್ಮನ್‌ಪ್ರೀತ್ ಕೌರ್ (ನಾಯಕಿ), ಸ್ಮೃತಿ ಮಂಧಾನ (ಉಪನಾಯಕಿ), ಶಫಾಲಿ ವರ್ಮಾ, ಶುಭಾ ಸತೀಶ್, ಜೆಮಿಮಾ ರೋಡ್ರಿಗಸ್, ರಿಚಾ ಘೋಷ್ (ವಿಕೆಟ್‌ಕೀಪರ್), ಉಮಾ ಛೆಟ್ರಿ (ವಿಕೆಟ್‌ಕೀಪರ್), ದೀಪ್ತಿ ಶರ್ಮಾ, ಸ್ನೇಹ ರಾಣಾ, ಸೈಕಾ ಇಶಾಕ್, ರಾಜೇಶ್ವರಿ ಗಾಯಕ್ವಾಡ್, ಪೂಜಾ ವಸ್ತ್ರಾಕರ್, ಅರುಂಧತಿ ರೆಡ್ಡಿ, ರೇಣುಕಾ ಸಿಂಗ್ ಠಾಕೂರ್, ಮೇಘನಾ ಸಿಂಗ್, ಪ್ರಿಯಾ ಪೂನಿಯಾ.

**ಟಿ20 ತಂಡ:** ಹರ್ಮನ್‌ಪ್ರೀತ್ ಕೌರ್ (ನಾಯಕಿ), ಸ್ಮೃತಿ ಮಂಧಾನ (ಉಪನಾಯಕಿ), ಶಫಾಲಿ ವರ್ಮಾ, ದಯಾಲನ್ ಹೇಮಲತಾ, ಉಮಾ ಛೆಟ್ರಿ, (ವಿಕೆಟ್‌ಕೀಪರ್), ರಿಚಾ ಘೋಷ್ (ವಿಕೆಟ್‌ಕೀಪರ್), ಜೆಮಿಮಾ ರೋಡ್ರಿಗಸ್, ಸಜ್ನಾ ಸಜೀವನ್, ದೀಪ್ತಿ ಶರ್ಮಾ, ಶ್ರೇಯಾಂಕ ಪಾಟೀಲ್, ಅಮಂಜೋತ್ ಕೌರ್, ಆಶಾ ಶೋಭನಾ, ಪೂಜಾ ವಸ್ತ್ರಾಕರ್, ರೇಣುಕಾ ಸಿಂಗ್ ಠಾಕೂರ್, ಅರುಂಧತಿ ರೆಡ್ಡಿ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966